ಸಂಪುಟ: 06 ಸಂಚಿಕೆ: 109 ಪುಟಗಳು: 08 ಗುರುವಾರ 02 ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ಅನೇಕ ನಿರಾಸೆಗಳಿಗೆ ಮೂಲ ಅತಿ ನಿರೀಕ್ಷೆ, ನಿರೀಕ್ಷೆಗಳನ್ನು ಮಿತಿಯಲ್ಲಿಟ್ಟುಕೊಂಡು ನಿರಾಸೆ ಕಡಿಮೆ ಮಾಡಿಕೊಳ್ಳೋಣ.

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಎಲ್‌ಪಿಜಿ ಸಿಲಿಂಡರ್ ಹೊಸ ದರ ಬೆಲೆ ಇಳಿಸಿದ ಕೇಂದ್ರ ಸರ್ಕಾರ

● ಉದಯವಾಹಿನಿ, ದೆಹಲಿ

ಇರಾನ್ ಯುದ್ಧ ಹಾಗೂ ಪಶ್ಚಿಮ ಏಷ್ಯಾದ ನಡುವಿನ ಉದ್ವಿಗ್ನ ಪರಿಸ್ಥಿತಿಯಿಂದ ಎಲ್‌ಪಿಜಿ ಪೂರೈಕೆಯಲ್ಲಿ ಭಾರೀ ವ್ಯತ್ಯಯ ಉಂಟಾಗಿತ್ತು. ಕಳೆದ ಕೆಲವು ತಿಂಗಳುಗಳಲ್ಲಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ದರವನ್ನು ಹಲವು ಬಾರಿ ಏರಿಕೆ ಮಾಡಲಾಗಿತ್ತು. ಇದೀಗ ಪರಿಸ್ಥಿತಿ ಸುಧಾರಿಸಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ವಾಣಿಜ್ಯ ಎಲ್‌ಪಿಜಿ ದರವನ್ನು 183ರಷ್ಟು ಕಡಿತಗೊಳಿಸಿದೆ.ಇತ್ತೀಚಿನ ದರ ಪರಿಷ್ಕರಣೆಯ ಬಳಿಕ ನವದೆಹಲಿಯಲ್ಲಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದರ 3,113ರಿಂದ 2,930ಕ್ಕೆ ಇಳಿದಿದೆ. ಇದರ ಜೊತೆಗೆ, ರೆಸ್ಟೋರೆಂಟ್‌ಗಳು, ಹೋಟೆಲ್‌ಗಳು ಹಾಗೂ ಇತರೆ ವಾಣಿಜ್ಯ ಸಂಸ್ಥೆಗಳಿಗೆ ಇರಾನ್ ಯುದ್ಧಕ್ಕೂ ಮುನ್ನ ಇದ್ದ ಮಟ್ಟದಲ್ಲೇ ಎಲ್‌ಪಿಜಿ ಪೂರೈಕೆಯನ್ನು ಮರುಸ್ಥಾಪಿಸಲಾಗಿದೆ. ಪೂರೈಕೆ ಕೊರತೆಯನ್ನು ನಿಭಾಯಿಸಲು ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಸಂದರ್ಭದಲ್ಲಿ ಜಾರಿಗೆ ತಂದಿದ್ದ ವಲಯವಾರು ನಿರ್ಬಂಧಗಳನ್ನೂ ಸರ್ಕಾರ ಹಿಂಪಡೆದಿದೆ. ಪೆಟ್ರೋಲಿಯಂ ಸಚಿವಾಲಯದ ಪ್ರಕಾರ, ದೇಶೀಯ ಎಲ್‌ಪಿಜಿ ಉತ್ಪಾದನೆ ಹೆಚ್ಚಳಗೊಂಡಿರುವುದು ಹಾಗೂ ಆಮದು ಎಲ್‌ಪಿಜಿ ಸಾಗಣೆಗಳು ಸಮರ್ಪಕ ಪ್ರಮಾಣದಲ್ಲಿ ಲಭ್ಯವಾಗುತ್ತಿರುವುದರಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ. ಯುದ್ಧದ ಆರಂಭದಲ್ಲಿ ಸ್ಥಗಿತಗೊಳಿಸಲಾಗಿದ್ದ ಬಲ್ಕ್ ಎಲ್‌ಪಿಜಿ ಪೂರೈಕೆಯನ್ನು ಈಗ ಯುದ್ಧಕ್ಕೂ ಮುಂಚಿನ ಬಳಕೆಯ ಶೇಕಡಾ 50ರ ಮಟ್ಟಕ್ಕೆ ಭಾಗಶಃ ಮರುಸ್ಥಾಪಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ತೀವ್ರ ಸಂದರ್ಭದಲ್ಲಿ ಹೆಚ್ಚಿದ ಬೇಡಿಕೆ ಹಾಗೂ ಪೂರೈಕೆ ವ್ಯತ್ಯಯದಿಂದ ವಾಣಿಜ್ಯ ಎಲ್‌ಪಿಜಿ ಲಭ್ಯತೆ ತೀವ್ರವಾಗಿ ಕುಂಠಿತಗೊಂಡಿತ್ತು. ಇದರ ಪರಿಣಾಮವಾಗಿ ದರಗಳನ್ನು ಹಲವು ಬಾರಿ ಏರಿಸಲಾಗಿತ್ತು ಮತ್ತು ಲಭ್ಯವಿದ್ದ ಸಂಗ್ರಹವನ್ನು ಉಳಿಸಿಕೊಳ್ಳಲು ಪೂರೈಕೆಯ ಮೇಲೂ ನಿರ್ಬಂಧ ಹೇರಲಾಗಿತ್ತು. ನಂತರ ಹಂತ ಹಂತವಾಗಿ ಪೂರೈಕೆ ಸಾಮಾನ್ಯ ಬಳಕೆಯ ಶೇಕಡಾ 70ರ ಮಟ್ಟಕ್ಕೆ ಏರಿಸಲಾಯಿತಾದರೂ, ಅನೇಕ ವಾಣಿಜ್ಯ ಕ್ಷೇತ್ರಗಳಿಗೆ ಕೇವಲ ಶೇಕಡಾ 50ರಷ್ಟು ಮಾತ್ರ ಹಂಚಿಕೆ ಮಾಡಲಾಗುತ್ತಿತ್ತು. ಕೊರತೆಯನ್ನು ನಿವಾರಿಸಲು, ಪೆಟ್ರೋಕೆಮಿಕಲ್ ಉತ್ಪಾದನೆಯಲ್ಲಿ ಬಳಸಲಾಗುವ C3 ಮತ್ತು C4 ಹೈಡ್ರೋಕಾರ್ಬನ್‌ಗಳನ್ನು ಅಗತ್ಯ ವಸ್ತುಗಳ ಕಾಯ್ದೆಯಡಿ ತಾತ್ಕಾಲಿಕವಾಗಿ ಎಲ್‌ಪಿಜಿ ಉತ್ಪಾದನೆಗೆ ಮಾತ್ರ ಬಳಸುವಂತೆ ರಿಫೈನರಿಗಳಿಗೆ ಸರ್ಕಾರ ಸೂಚಿಸಿತ್ತು. ಈಗ ಪೂರೈಕೆ ಸ್ಥಿತಿ ಸುಧಾರಿಸಿರುವುದರಿಂದ, ಗೃಹೇತರ ಪ್ಯಾಕ್ಡ್ ಎಲ್‌ಪಿಜಿ ಮೇಲಿನ ಎಲ್ಲಾ ವಲಯವಾರು ನಿರ್ಬಂಧಗಳನ್ನು ಸರ್ಕಾರ ತೆಗೆದುಹಾಕಿದೆ. ಜೊತೆಗೆ, C3 ಮತ್ತು C4 ಹೈಡ್ರೋಕಾರ್ಬನ್‌ಗಳನ್ನು ಎಲ್‌ಪಿಜಿ ಉತ್ಪಾದನೆಗೆ ತಿರುಗಿಸುವ ಪ್ರಮಾಣವನ್ನು ಕಡಿಮೆ ಮಾಡಿ. ಪೆಟ್ರೋಕೆಮಿಕಲ್ ಹಾಗೂ ಇತರೆ ಕೈಗಾರಿಕೆಗಳಿಗೆ ಮರುಹಂಚಿಕೆ ಮಾಡಲು ತೀರ್ಮಾನಿಸಲಾಗಿದೆ. ಆದಾಗ್ಯೂ, ದೇಶೀಯ ಎಲ್‌ಪಿಜಿ ಉತ್ಪಾದನೆಯನ್ನು ದಿನಕ್ಕೆ 40,000 ಟನ್‌ಗಿಂತ ಹೆಚ್ಚು ಮಟ್ಟದಲ್ಲಿ ಕಾಯ್ದುಕೊಳ್ಳಲಾಗುವುದು ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಈ ಕ್ರಮದಿಂದ ಎಲ್‌ಪಿಜಿಯನ್ನು ಹೆಚ್ಚಿನ ಪ್ರಮಾಣದಲ್ಲಿ ಬಳಸುವ ರೆಸ್ಟೋರೆಂಟ್‌ಗಳು, ಹೋಟೆಲ್‌ಗಳು ಹಾಗೂ ಇತರೆ ವಾಣಿಜ್ಯ ಸಂಸ್ಥೆಗಳ ಕಾರ್ಯಾಚರಣಾ ವೆಚ್ಚ ಕಡಿಮೆಯಾಗಲಿದ್ದು, ವ್ಯಾಪಾರ ಚಟುವಟಿಕೆಗಳಿಗೆ ಉತ್ತೇಜನ ಸಿಗುವ ನಿರೀಕ್ಷೆಯಿದೆ.

**1** ವಾಣಿಜ್ಯ ಬಳಕೆ ಎಲ್‌ಪಿಜಿ ಸಿಲಿಂಡರ್ ದರ 183ರಷ್ಟು ಇಳಿಕೆ
**2** ಬಳಕೆದಾರರಿಗೆ ಪೂರ್ಣ ಪ್ರಮಾಣದ ಎಲ್ ಪಿ ಜಿ ಪೂರೈಕೆ ಮರುಸ್ಥಾಪನೆ
**3** ಪೂರೈಕೆಯಲ್ಲಿ ಸುಧಾರಣೆ- ತುರ್ತು ನಿರ್ಬಂಧಗಳ ಹಿಂಪಡೆದ ಕೇಂದ್ರ

## ನಾಲ್ಕು ಬಾರಿ ಹೆಚ್ಚಾಗಿದ್ದ ಸಿಲಿಂಡರ್ ಬೆಲೆ

ಹಾರ್ಮುಜ್ ಜಲಸಂಧಿಯ ಇಂಧನ ಪೂರೈಕೆ ಅಡಚಣೆಯ ನಂತರ ಭಾರತದಲ್ಲಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ಒಟ್ಟು ನಾಲ್ಕು ಬಾರಿ ಹೆಚ್ಚಿಸಲಾಗಿತ್ತು. ಭಾರಿ ನಷ್ಟದ ಹಿನ್ನೆಲೆಯನ್ನು ಉಲ್ಲೇಖಿಸಿ ತೈಲ ಕಂಪನಿಗಳು ಮಾರ್ಚ್‌ನಲ್ಲಿ 144 ರೂ., ಏಪ್ರಿಲ್‌ನಲ್ಲಿ 195.50 ರೂ. ಮತ್ತು ಮೇ ತಿಂಗಳಲ್ಲಿ ಬರೋಬ್ಬರಿ 993 ರೂ.ನಷ್ಟು ಬೆಲೆ ಏರಿಕೆ ಮಾಡಿದ್ದವು. ತದನಂತರ, ಜೂನ್‌ನಲ್ಲಿ ಮತ್ತೊಮ್ಮೆ 42 ರೂ. ಹೆಚ್ಚಿಸಲಾಗಿತ್ತು.

● ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದರ 183 ಇಳಿಕೆ ಪೂರೈಕೆ, ● ಸಹಜ ಸ್ಥಿತಿಗೆ ಮರಳಿದ ಹಿನ್ನೆಲೆ ಕೇಂದ್ರದ ನಿರ್ಧಾರ , ● ಹೋಟೆಲ್ ಊಟ-ತಿಂಡಿ ದರ ಇಳಿಯುತ್ತಾ..? ● ವಾಣಿಜ್ಯ ಎಲ್‌ಪಿಜಿ ದರ ಕಡಿತ, ● ಇತ್ತೀಚೆಗೆ ನಾಲ್ಕು ಬಾರಿ ಹೆಚ್ಚಾಗಿದ್ದ ವಾಣಿಜ್ಯ ಸಿಲಿಂಡರ್ ಬೆಲೆ

## ನಗರಗಳಲ್ಲಿನ ಪರಿಷ್ಕೃತ ದರ ಪಟ್ಟಿ

ಲಕ್ನೋ,3,236 ಇದ್ದ ದರವು ಈಗ 3,052.50 ಕ್ಕೆ ಇಳಿಕೆಯಾಗಿದೆ. ಕೋಲ್ಕತಾ, 3,255.50 ಇದ್ದ ದರವು ಪ್ರಸ್ತುತ 3,081.50 ಕ್ಕೆ ಇಳಿದಿದೆ.
ಪಾಟ್ನಾ, ಪರಿಷ್ಕೃತ ದರದ ಅನ್ವಯ ಈಗ ಹೊಸ ಬೆಲೆ 3,227 ಆಗಿದೆ. ಪಶ್ಚಿಮ ಏಷ್ಯಾ ಬಿಕ್ಕಟ್ಟು ಮತ್ತು ಬೆಲೆ ಏರಿಕೆಯ ಹಿನ್ನೆಲೆ ಸದ್ಯ ದರ ಇಳಿಕೆಯಾಗಿದ್ದರೂ, ಕಳೆದ ನಾಲ್ಕು ತಿಂಗಳುಗಳಿಂದ ವಾಣಿಜ್ಯ ಗ್ಯಾಸ್ ದರ ಆಕಾಶಕ್ಕೇರಿತ್ತು. ಈ ವರ್ಷದ ಫೆಬ್ರವರಿ 28 ರಂದು ಇರಾನ್ ಮೇಲೆ ಅಮೆರಿಕ ಮತ್ತು ಇಸ್ರೇಲ್ ನಡೆಸಿದ ದಾಳಿಯು ಜಾಗತಿಕ ಇಂಧನ ಬಿಕ್ಕಟ್ಟಿಗೆ ಕಾರಣವಾಗಿತ್ತು.

ಪ್ರತಿಕಾರವಾಗಿ ಇರಾನ್ ತನ್ನ ನಿಯಂತ್ರಣದಲ್ಲಿದ್ದ ಹಾರ್ಮುಜ್ ಜಲಸಂಧಿಯ ಮೂಲಕ ಕಚ್ಚಾ ತೈಲ ಮತ್ತು ಅನಿಲ ಸಾಗಿಸುವ ಹಡಗುಗಳ ಸಂಚಾರವನ್ನು ನಿರ್ಬಂಧಿಸಿತ್ತು. ಇದರಿಂದಾಗಿ ಜಾಗತಿಕ ಮಾರುಕಟ್ಟೆಯಲ್ಲಿ ಪೆಟ್ರೋಲ್, ಡೀಸೆಲ್ ಮತ್ತು ಗ್ಯಾಸ್ ದರಗಳು ತೀವ್ರವಾಗಿ ಹೆಚ್ಚಳ ಕಂಡಿದ್ದವು.

ಇದರ ನೇರ ಪರಿಣಾಮವಾಗಿ ಭಾರತದಲ್ಲಿ ತೈಲ ಕಂಪನಿಗಳು ತಮಗಾಗುತ್ತಿದ್ದ ನಷ್ಟ ಸರಿದೂಗಿಸಲು ಕಳೆದ ನಾಲ್ಕು ತಿಂಗಳಲ್ಲಿ ಸತತವಾಗಿ ನಾಲ್ಕು ಬಾರಿ ವಾಣಿಜ್ಯ ಸಿಲಿಂಡರ್ ಬೆಲೆಯನ್ನು ಏರಿಕೆ ಮಾಡಿದ್ದವು. ಮಾರ್ಚ್‌ನಲ್ಲಿ 144, ಏಪ್ರಿಲ್‌ನಲ್ಲಿ 195.50, ಮೇ ತಿಂಗಳಲ್ಲಿ ಬರೋಬ್ಬರಿ 993 ಮತ್ತು ಜೂನ್‌ನಲ್ಲಿ 42 ರಂತೆ ಒಟ್ಟಾರೆ 1,374.50 ರೂಪಾಯಿಗಳಷ್ಟು ಭಾರೀ ಏರಿಕೆ ಮಾಡಲಾಗಿತ್ತು.

ಇದೇ ಅವಧಿಯಲ್ಲಿ ಗೃಹಬಳಕೆಯ ಸಿಲಿಂಡರ್ ಬೆಲೆಯನ್ನೂ ಸಹ ಒಟ್ಟು ಎರಡು ಕಂತುಗಳಲ್ಲಿ (ಮಾರ್ಚ್‌ನಲ್ಲಿ 60 ಹಾಗೂ ಜೂನ್‌ನಲ್ಲಿ 29) ಒಟ್ಟು 89 ಗಳಷ್ಟು ಹೆಚ್ಚಿಸಲಾಗಿತ್ತು.

## ಹೋಟೆಲ್ ಮಾಲೀಕರಿಗೆ ಬಿಗ್ ರಿಲೀಫ್

ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದರ 183.50 ರಷ್ಟು ಕಡಿತಗೊಂಡ ಹಿನ್ನೆಲೆಯಲ್ಲಿ, ಹಿಂದೆ ಹೆಚ್ಚಿಸಲಾಗಿದ್ದ ಊಟ-ತಿಂಡಿಗಳ ಬೆಲೆಯನ್ನು ಇಳಿಸುವಂತೆ ಬೆಂಗಳೂರಿನ ಗ್ರಾಹಕರು ಹೋಟೆಲ್ ಮಾಲೀಕರನ್ನು ಒತ್ತಾಯಿಸುತ್ತಿದ್ದಾರೆ. ಹಿಂದೆ ಅನಿಲ ಕೊರತೆ ಮತ್ತು ಬೆಲೆ ಏರಿಕೆಯ ನೆಪದಲ್ಲಿ ಹೋಟೆಲ್ ಹಾಗೂ ದರ್ಶಿನಿಗಳಲ್ಲಿ ಊಟ- ತಿಂಡಿಗಳ ದರವನ್ನು ಶೇ. 10 ರಿಂದ 20 ರಷ್ಟು ಹೆಚ್ಚಿಸಲಾಗಿತ್ತು. ಇದೀಗ ಸಿಲಿಂಡರ್ ದರ ಇಳಿಕೆಯಾಗಿದ್ದರೂ, ಹೋಟೆಲ್ ಸಂಘಟನೆಗಳು ಕಾರ್ಮಿಕರ ವೇತನ ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆಯ ಸಬೂಬು ನೀಡಿ ಜಾರಿಕೊಳ್ಳಬಾರದು ಮತ್ತು ಆಡಳಿತ ಯಂತ್ರ ಈ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂಬುದು ಜನಸಾಮಾನ್ಯರ ಬೇಡಿಕೆಯಾಗಿದೆ.

"ಗ್ಯಾಸ್ ಸಿಲಿಂಡರ್ ಸಿಗುತ್ತಿಲ್ಲ, ದುಬಾರಿಯಾಗಿದೆ. ಹೋಟೆಲ್, ರೆಸ್ಟೋರೆಂಟ್ ಗಳಲ್ಲಿ ದರಗಳನ್ನು ಏಕಾಏಕಿ ಹೆಚ್ಚಿಸಲಾಗಿತ್ತು. ಹೆಚ್ಚಿಸದಿದ್ದಲ್ಲಿ ಉದ್ಯಮ ನಡೆಯುವುದೇ ಸಾಧ್ಯವಿಲ್ಲ ಎಂದು ಸಹ ಹೇಳಲಾಗಿತ್ತು. ಗ್ಯಾಸ್ ಯಥೇಚ್ಚವಾಗಿ ಸಿಗುತ್ತಿದೆ, ಜೊತೆಗೆ ಬೆಲೆಯೂ ಕಡಿಮೆಯಾಗಿದೆ. ಹೀಗಾಗಿ ಈಗ ಊಟ ತಿಂಡಿಗಳ ದರಗಳನ್ನೂ ಇಳಿಸಲೇಬೇಕು. ಗ್ರಾಹಕರ ಈ ಬೇಡಿಕೆ ನ್ಯಾಯಸಮ್ಮತ. ಅವಿನಾಶ್ ವಗರ್ನಾಳ, ರಾಜಾಜಿನಗರ

## ಆಟೋ ಎಲ್‌ಪಿಜಿ ದರ 10 ರೂ. ಇಳಿಕೆ

ನಿರಂತರ ಎಲ್‌ಪಿಜಿ ದರ ಏರಿಕೆಯಿಂದ ಕಂಗಾಲಾಗಿದ್ದ ಆಟೋ ಚಾಲಕರಿಗೆ ಕೊನೆಗೂ ದೊಡ್ಡ ನಿರಾಳ ಸಿಕ್ಕಿದ್ದು,ಟೋಟಲ್ ಗ್ಯಾಸ್ ತನ್ನ ಬಂಕ್‌ಗಳಲ್ಲಿ ಆಟೋ ಎಲ್‌ಪಿಜಿ ದರವನ್ನು ಪ್ರತಿ ಲೀಟರ್‌ಗೆ ಭರ್ಜರಿ 10 ರೂಪಾಯಿಗಳಷ್ಟು ಕಡಿತಗೊಳಿಸಿದೆ. ಸದ್ಯ ಜಾಗತಿಕ ಪರಿಸ್ಥಿತಿ ತಿಳಿಯಾಗುತ್ತಿದ್ದಂತೆ ಇತ್ತೀಚೆಗಷ್ಟೇ ಹಂತ-ಹಂತವಾಗಿ 95 ರೂಪಾಯಿಗಳಿಗೆ ಇಳಿಕೆಯಾಗಿದ್ದ ದರ ಇದೀಗ ಮತ್ತೊಂದು ದೊಡ್ಡ ಕುಸಿತ ಕಂಡಿದ್ದು, ಪ್ರಸ್ತುತ 95 ರೂಪಾಯಿಗಳಿಂದ ನೇರವಾಗಿ 85 ರೂಪಾಯಿಗಳಿಗೆ ಇಳಿಕೆ ಮಾಡಲಾಗಿದೆ. ಕಳೆದ ಕೆಲವು ತಿಂಗಳುಗಳ ಹಿಂದೆ ನಡೆದ ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಭೀಕರ ಸಂಘರ್ಷದಿಂದಾಗಿ ಜಾಗತಿಕ ಮಾರುಕಟ್ಟೆಯಲ್ಲಿ ಇಂಧನ ಪೂರೈಕೆ ಏರುಪೇರಾಗಿತ್ತು. ಇದರ ನೇರ ಪರಿಣಾಮವಾಗಿ ಆಟೋ ಎಲ್‌ಪಿಜಿ ದರವು ಸಾರ್ವಕಾಲಿಕ ದಾಖಲೆಯ ಬರೋಬ್ಬರಿ 100 ರೂಪಾಯಿಗಳ ಗಡಿಯನ್ನು ದಾಟಿತ್ತು. ಇದು ದೈನಂದಿನ ಜೀವನಕ್ಕಾಗಿ ಆಟೋ ಬಾಡಿಗೆಯನ್ನೇ ನಂಬಿಕೊಂಡಿದ್ದ ಲಕ್ಷಾಂತರ ಚಾಲಕರ ಜೇಬಿಗೆ ಕತ್ತರಿ ಹಾಕಿತ್ತು. ಈಗ ಲೀಟರ್‌ಗೆ 10 ರೂಪಾಯಿ ಕಡಿಮೆಯಾಗಿರುವುದು ದೊಡ್ಡ ರಿಲೀಫ್ ಸಿಕ್ಕಿದೆ ಎಂದು ಆಟೋ ಚಾಲಕರು ಸಂತಸ ವ್ಯಕ್ತಪಡಿಸಿದ್ದಾರೆ.



## ಬೆಲೆ ಇಳಿಸಲು ಸಬೂಬು ಹೇಳಬೇಡಿ

ಈಗ ಸಿಲಿಂಡರ್ ದರದಲ್ಲಿ ವ್ಯಾಪಕವಾಗಿ ಇಳಿದಿರುವುದರಿಂದ ಮೆನು ದರವನ್ನೂ ಕಡಿತಗೊಳಿಸಿ ಎಂಬುದು ಗ್ರಾಹಕರ ಬೇಡಿಕೆಯಾಗಿದೆ. ಹೆಚ್ಚಾಗಿರುವ ಹಣದುಬ್ಬರ, ಆಹಾರದುಬ್ಬರ ಜನಜೀವನಕ್ಕೆ ಮಾರಕವಾಗಿದ್ದು, ಬೆಲೆ ಇಳಿಕೆ ಮಾಡದೇ ಹೋದರೆ ಇದೀಗ ಗ್ರಾಹಕರ ಜೇಬಿಗೆ ದೊಡ್ಡ ಕತ್ತರಿಯಾಗಲಿದೆ.

ಪ್ರತಿಬಾರಿಯೂ ಇಂತಹ ಸಂದರ್ಭಗಳು ಬಂದಾಗಲೆಲ್ಲಾ ಕಾರ್ಮಿಕರ ವೇತನ ಹೆಚ್ಚಳದ ಹೊರೆ, ಅಗತ್ಯ ವಸ್ತುಗಳ ನಿರಂತರ ಬೆಲೆ ಏರಿಕೆ ಗ್ರಾಹಕರ ಕೊರತೆ ಮತ್ತು ವ್ಯಾಪಾರ ಕುಸಿತ ಮುಂತಾದ ಸಬೂಬು ನೀಡಿ ಹೋಟೆಲ್ ಮಾಲಿಕರ ಸಂಘಟನೆಗಳು ಜಾರಿಕೊಳ್ಳುತ್ತವೆ. ಈ ಬಾರಿ ಹಾಗಾಗದಿರಲಿ, ಆಡಳಿತ ಯಂತ್ರವು ಈ ಬಗ್ಗೆ ಕ್ರಮ ಕೈಗೊಳ್ಳಲಿ ಎಂಬುದು ಜನಸಾಮಾನ್ಯ ಗ್ರಾಹಕರ ಬೇಡಿಕೆಯಾಗಿದೆ.

## ಪೆಟ್ರೋಲ್ ರಫ್ತು ಸುಂಕ ಹೆಚ್ಚಳ

ಇದೇ ವೇಳೆ ಕೇಂದ್ರ ಸರ್ಕಾರವು ಪೆಟ್ರೋಲ್ ರಫ್ತು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಮಹತ್ವದ ತಿದ್ದುಪಡಿ ತಂದಿದೆ. ಜುಲೈ 1 ರಿಂದ ಅನ್ವಯವಾಗುವಂತೆ ಪೆಟ್ರೋಲ್ ರಫ್ತಿನ ಮೇಲಿನ ವಿಶೇಷ ಹೆಚ್ಚುವರಿ ಅಬಕಾರಿ ಸುಂಕವನ್ನು ಪ್ರತಿ ಲೀಟರ್‌ಗೆ 1.5 ರಿಂದ 4 ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ದೇಶೀಯ ಮಾರುಕಟ್ಟೆಯಲ್ಲಿ ಇಂಧನ ಲಭ್ಯತೆಯನ್ನು ಕಾಯ್ದುಕೊಳ್ಳಲು ಈ ಕ್ರಮ ಕೈಗೊಳ್ಳಲಾಗಿದೆ ಎನ್ನಲಾಗಿದೆ.

## ಆರ್‌ಸಿಬಿ, ಡಿಎನ್‌ಎಗೆ ರಿಲೀಫ್ ನೀಡಿದ ಹೈಕೋರ್ಟ್

● ಉದಯವಾಹಿನಿ,ಬೆಂಗಳೂರು

ರಾಯಲ್ ಚಾಲೆಂಜರ್ಸ್ ಬೆಂಗಳೂರು ಐಪಿಎಲ್?ನಲ್ಲಿ ಜಯ ಗಳಿಸಿದ ಪ್ರಯುಕ್ತ ನಡೆದ ವಿಜಯೋತ್ಸವದಲ್ಲಿ ಎಂ. ಚಿನ್ನಸ್ವಾಮಿ ಕ್ರೀಡಾಂಗಣದ ಮುಂದೆ ಕಾಲ್ತುಳಿದ ಪ್ರಕರಣಕ್ಕೆ ಸಂಬಂಧ ಡಿಎನ್‌ಎ ಎಂಟರ್‌ಟೈನ್‌ಮೆಂಟ್ ನೆಟ್ವರ್ಕ್ ಪ್ರೈವೇಟ್ ಲಿಮಿಟೆಡ್ ಮತ್ತು ರಾಯಲ್ ಚಾಲೆಂಜರ್ಸ್ ಸ್ಪೋರ್ಟ್ ಪ್ರೈವೇಟ್ ಲಿಮಿಟೆಡ್ ವಿರುದ್ಧ ಯಾವುದೇ ಕ್ರಮಕ್ಕೆ ಮುಂದಾಗದಂತೆ ಹೈಕೋರ್ಟ್, ಸರ್ಕಾರಕ್ಕೆ ನಿರ್ದೇಶನ ನೀಡಿದೆ.ಡಿಎನ್‌ಎ ಎಂಟರ್ ಟೈನ್‌ಮೆಂಟ್ ನೆಟ್ವರ್ಕ್ ಪ್ರೈವೇಟ್ ಲಿಮಿಟೆಡ್ ಮತ್ತು ರಾಯಲ್ ಚಾಲೆಂಜರ್ಸ್ ಸ್ಪೋರ್ಟ್ ಪ್ರೈವೇಟ್ ಲಿಮಿಟೆಡ್, ಆರ್‌ಸಿಬಿ ಮಾರ್ಕೇಟಿಂಗ್ ಮುಖ್ಯಸ್ಥ ವಿಜಯ್ ಸೋಸಲೆ ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್.ಆರ್. ಕೃಷ್ಣಕುಮಾರ್ ಅವರಿದ್ದ ನ್ಯಾಯಪೀಠ ಈ ಸೂಚನೆ ನೀಡಿದೆ.ಅಲ್ಲದೇ, ಕರ್ನಾಟಕ ರಾಜ್ಯ ಕ್ರಿಕೆಟ್ ಅಕಾಡೆಮಿ ಪದಾಧಿಕಾರಿಗಳ ವಿರುದ್ಧ ಬಲವಂತದ ಕ್ರಮಕ್ಕೆ ಮುಂದಾಗುವುದು ಬೇಡ ಎಂಬುದಾಗಿ ಆದೇಶಿಸಲಾಗಿದೆ. ಅದೇ ರೀತಿಯಲ್ಲಿ ಆರ್‌ಸಿಬಿ ಪದಾಧಿಕಾರಿಗಳಿಗೂ ಆದೇಶ ನೀಡಲಾಗುವುದು ಎಂದು ತಿಳಿಸಿತು.

## ವಿಜಯಪುರದಲ್ಲಿ ಕೋಚ್ ಡಿಪೋ ಸ್ಥಾಪಿಸಿ: ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಸೋಮಣ್ಣಗೆ ಎಂ.ಬಿ. ಪಾಟೀಲ್ ಪತ್ರ

● ಉದಯವಾಹಿನಿ, ಬೆಂಗಳೂರು

ವಿಜಯಪುರ ಜಿಲ್ಲಾ ಕೇಂದ್ರದಲ್ಲಿ ರೈಲ್ವೆ ಸಂಪರ್ಕ ಬಲವರ್ಧನೆಗಾಗಿ ಕೋಚ್ ಡಿಪೋ ಸ್ಥಾಪಿಸಬೇಕು ಮತ್ತು ರೈಲು ನಿಲ್ದಾಣದಲ್ಲಿ ಇನ್ನೊಂದು ಆಗಮನ ಮತ್ತು ನಿರ್ಗಮನ ದ್ವಾರವನ್ನು ಅಭಿವೃದ್ಧಿ ಪಡಿಸಬೇಕೆಂದು ಕೋರಿ ಕೇಂದ್ರ ರೈಲ್ವೆ ಸಹಾಯಕ ಸಚಿವ ವಿ.ಸೋಮಣ್ಣನವರ ಜತೆ ಚರ್ಚಿಸಲಾಗಿದೆ. ಈ ಸಂಬಂಧವಾಗಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೂ ಪತ್ರ ಬರೆಯಲಾಗಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ.

ಈ ಬಗ್ಗೆ ಮಾತನಾಡಿರುವ ಅವರು, ಈ ವಿಚಾರ ಕುರಿತು ಸೋಮಣ್ಣನವರಿಗೂ ಪತ್ರ ಬರೆಯಲಾಗಿದೆ. ಹಿಂದೆ ವಿಜಯಪುರ ರೈಲು ನಿಲ್ದಾಣದ ಆವರಣದಲ್ಲೇ ಇದ್ದ ಗೂಡ್ಸ್ ಶೆಡ್ಡನ್ನು ಈಗ ಅಲಿಯಾಬಾದಿಗೆ ಸ್ಥಳಾಂತರಿಸಲಾಗಿದೆ. ಹೀಗಾಗಿ ಕೋಚ್ ಡಿಪೋ ಸ್ಥಾಪನೆಗೆ ಜಾಗದ ಕೊರತೆಯೇನೂ ಇಲ್ಲ. ಇಲ್ಲಿ ಕೋಚ್ ಡಿಪೋ ಬಂದರೆ ಇದನ್ನು ನಿರ್ವಹಣಾ ಹಬ್ ಆಗಿ ಬೆಳೆಸಬಹುದು. ಜತೆಗೆ ವಿಜಯಪುರ ಮತ್ತು ಉತ್ತರ ಕರ್ನಾಟಕದ ಪ್ರದೇಶಗಳಿಗೆ ಮತ್ತಷ್ಟು ಪರಿಣಾಮಕಾರಿಯಾಗಿ ರೈಲು ಸಂಪರ್ಕ ಒದಗಿಸಬಹುದು.' ಎಂದಿದ್ದಾರೆ.

**ಹೆಚ್ಚುವರಿ ಆಗಮನ - ನಿರ್ಗಮನ ದ್ವಾರ ಸ್ಥಾಪಿಸಲು ಮನವಿ:** ವಿಜಯಪುರವು ಚಾರಿತ್ರಿಕ ಸ್ಥಳವಾಗಿದ್ದು, ವರ್ಷವಿಡೀ ಲಕ್ಷಾಂತರ ಪ್ರವಾಸಿಗರನ್ನು ಸೆಳೆಯುತ್ತಿರುವ ಪ್ರವಾಸೋದ್ಯಮ ತಾಣವಾಗಿದೆ. ಅದರಲ್ಲೂ ವಾರಾಂತ್ಯ, ಹಬ್ಬ ಹರಿದಿನಗಳು ಮತ್ತು ರಜೆ ದಿನಗಳಲ್ಲಿ ಜನದಟ್ಟಣೆ ಸೃಷ್ಟಿಯಾಗುತ್ತದೆ. ಆದ್ದರಿಂದ ವಿಜಯಪುರ ರೈಲು ನಿಲ್ದಾಣದಲ್ಲಿ ಹೆಚ್ಚುವರಿಯಾಗಿ ಇನ್ನೊಂದು ಆಗಮನ-ನಿರ್ಗಮನ ದ್ವಾರವನ್ನು ಸ್ಥಾಪಿಸಬೇಕು ಎಂದು ಸಚಿವ ಎಂ ಬಿ ಪಾಟೀಲ ತಮ್ಮ ಪತ್ರದಲ್ಲಿ ಮನವಿ ಮಾಡಿದ್ದಾರೆ. ಕಳೆದ ಸೋಮವಾರ ನಡೆದ ರೈಲ್ವೆ ಇಲಾಖೆಯ ಕಾರ್ಯಕ್ರಮದ ಸಂದರ್ಭದಲ್ಲಿ ಈ ವಿಚಾರಗಳನ್ನು ಸೋಮಣ್ಣ ಅವರೊಂದಿಗೆ ಚರ್ಚಿಸಲಾಗಿದೆ. ಅವರಿಂದ ಸಕಾರಾತ್ಮಕ ಸ್ಪಂದನ ಸಿಕ್ಕಿದೆ.

## ಬೆಂಗಳೂರಿನಲ್ಲಿ ಪುಡಿ ರೌಡಿಗಳ ಅಟ್ಟಹಾಸ: ಬಿಜೆಪಿ ಶಾಸಕ ಸಿ.ಕೆ. ರಾಮಮೂರ್ತಿ ಆಪ್ತನಿಗೆ ಚಾಕು ಇರಿತ!




● ಉದಯವಾಹಿನಿ, ಬೆಂಗಳೂರು

ಜಯನಗರದ ಬಿಜೆಪಿ ಶಾಸಕ ಸಿ.ಕೆ.ರಾಮಮೂರ್ತಿ ಆಪ್ತನಿಗೆ ಚಾಕುವಿನಿಂದ ಇರಿದಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.ಸೋಮಶೇಖರ್ ರೆಡ್ಡಿ ಚಾಕು ಇರಿತಕ್ಕೊಳಗಾದ ವ್ಯಕ್ತಿ. ಜಯನಗರದನಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕದ ಬಳಿ ಘಟನೆ ನಡೆದಿದೆ.

ಹೊಟ್ಟೆ, ಎದೆ, ಬೆನ್ನಿಗೆ ಚಾಕುವಿನಿಂದ ಇರಿಯಲಾಗಿದೆ. ಸೋಮಶೇಖರ್ ರೆಡ್ಡಿ ವಾಟರ್ ಪ್ಲಾಂಟ್ ನಡೆಸುತ್ತಿದ್ದಾರೆ. ಯುವಕರ ಗುಂಪೊಂದು ವಾಟರ್ ಪ್ಲಾಂಟ್ ಬಳಿ ಬಂದಾಗ ಕಿರಿಕ್ ಆಗಿದೆ. ಮಾತಿಗೆ ಮಾತು ಬೆಳೆದು ಆರೋಪಿಗಳು ಚಾಕುವಿನಿಂದ ಇರಿದಿದ್ದಾರೆ. ಆಟೋದಲ್ಲಿ ಮಾರಕಾಸ್ತ್ರಗಳ ಸಮೇತ ಬಂದಿದ್ದ ಐವರ ಗುಂಪು ರೆಡ್ಡಿ ಮೇಲೆ ದಾಳಿ ನಡೆಸಿದೆ. ಗಾಯಾಳುವನ್ನು ಸ್ಥಳೀಯರು ತಕ್ಷಣ ಆಸ್ಪತ್ರೆಗೆ ಸೇರಿಸಿದ್ದಾರೆ. ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗಿದೆ. ಜೂನ್ 24ರ ಸಂಜೆ ಘಟನೆ ನಡೆದಿದ್ದು, ಈ ಸಂಬಂಧ ಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ರವಿ, ಬಾಲು, ಪುಲಿ, ವಿಷ್ಣು, ಶಂಕರ್ ಆರೋಪಿಗಳನ್ನು ಬಂಧಿಸಲಾಗಿದೆ. ಕೊಲೆ ಮಾಡುವ ಉದ್ದೇಶದಿಂದ ಬಂದು ದಾಳಿ ಮಾಡಿದ್ದಾರೆಂದು ಜಯನಗರ ಪೊಲೀಸ್ ಠಾಣೆಗೆ ದೂರು ನೀಡಲಾಗಿತ್ತು.

## ಬಿಡದಿಯಲ್ಲಿ ದೇಶದ ಮೊದಲ ಮಹಿಳಾ ವಾಹನ ಚಾಲನಾ ತರಬೇತಿ ಸಂಸ್ಥೆ: ಸಚಿವ ಬೈರತಿ ಸುರೇಶ್

● ಉದಯವಾಹಿನಿ, ಬೆಂಗಳೂರು

ಮಹಿಳೆಯರನ್ನು ಆರ್ಥಿಕ ಸ್ವಾವಲಂಬಿಗಳನ್ನಾಗಿ ಮಾಡುವ ದಿಸೆಯಲ್ಲಿ ರಾಜ್ಯ ಸರ್ಕಾರ ಮತ್ತೊಂದು ಹೆಜ್ಜೆ ಇಟ್ಟಿದ್ದು, ಬಿಡದಿ ಬಳಿ ಮಹಿಳಾ ವಾಹನ ಚಾಲನಾ ತರಬೇತಿ ಸಂಸ್ಥೆಯನ್ನು ಆರಂಭಿಸಲಾಗುತ್ತದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದರು.

ಸಾರಿಗೆ ಇಲಾಖೆ ಹಿರಿಯ ಅಧಿಕಾರಿಗಳೊಂದಿಗೆ ಬುಧವಾರ ನಡೆಸಿದ ಸಭೆಯಲ್ಲಿ ಮಾತನಾಡಿದ ಸಾರಿಗೆ ಸಚಿವ ಬೈರತಿ ಸುರೇಶ್, ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ಮಹಿಳೆಯರಿಗೆಂದೇ ಪ್ರತ್ಯೇಕವಾದ ವಾಹನ ಚಾಲನಾ ತರಬೇತಿ ಸಂಸ್ಥೆ, ಚಾಲನಾ ಟ್ರ್ಯಾಕ್ ಸೇರಿದಂತೆ ಇನ್ನಿತರ ಮೂಲಸೌಕರ್ಯಗಳನ್ನು ಬಿಎಂಟಿಸಿ ನಿರ್ಮಾಣ ಮಾಡಲಿದೆ ಎಂದು ಹೇಳಿದರು. ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಮಹಿಳೆಯರಿಗೆ ಪ್ರತ್ಯೇಕವಾದ ವಾಹನ ಚಾಲನಾ ತರಬೇತಿ ಸಂಸ್ಥೆಯನ್ನು ಆರಂಭಿಸಲಾಗುತ್ತದೆ.

## ವೈದ್ಯರು ದಿನ ಮತ್ತು ಚಾರ್ಟರ್ಡ್ ಅಕೌಂಟೆಂಟ್‌ಗಳ ದಿನ : ಪ್ರಧಾನಿ ಮೋದಿ

● ಉದಯವಾಹಿನಿ, ಬೆಂಗಳೂರು

ವೈದ್ಯರ ದಿನ ಮತ್ತು ಚಾರ್ಟರ್ಡ್ ಅಕೌಂಟೆಂಟ್‌ಗಳ ದಿನದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ವೈದ್ಯರು ಮತ್ತು ಚಾರ್ಟರ್ಡ್ ಖಾತೆದಾರರಿಗೆ ಶುಭಾಶಯ ಕೋರಿದರು ಮತ್ತು ಅವರ ದಣಿವರಿಯದ ಪ್ರಯತ್ನಗಳು ಅಸಂಖ್ಯಾತ ಜನರ ವಿಶ್ವಾಸ ಮತ್ತು ಕೃತಜ್ಞತೆಯನ್ನು ಗಳಿಸಿವೆ ಎಂದರು.

ವಿಕಸಿತ್ ಭಾರತ ನಿರ್ಮಾಣದತ್ತ ಸರ್ಕಾರ ಕೆಲಸ ಮಾಡುತ್ತಿರುವಾಗ, ದೇಶದ ವೈದ್ಯರು ತಡೆಗಟ್ಟುವ ಆರೋಗ್ಯ ರಕ್ಷಣೆಯನ್ನು ಉತ್ತೇಜಿಸುವಲ್ಲಿ, ವೈದ್ಯಕೀಯ ಸಂಶೋಧನೆಯನ್ನು ಮುನ್ನಡೆಸುವಲ್ಲಿ, ನಾವೀನ್ಯತೆಯನ್ನು ಅಳವಡಿಸಿಕೊಳ್ಳುವಲ್ಲಿ ಮತ್ತು ಎಲ್ಲರಿಗೂ ಕೈಗೆಟುಕುವ, ಪ್ರವೇಶಿಸಬಹುದಾದ ಆರೋಗ್ಯ ಸೇವೆಯನ್ನು ತಲುಪಿಸುವಲ್ಲಿ ಪ್ರಮುಖ ಪಾತ್ರ ವಹಿಸುವುದನ್ನು ಮುಂದುವರಿಸುತ್ತಾರೆ ಎಂದು ಮೋದಿ ಪ್ರತ್ಯೇಕ ಸಂದೇಶಗಳಲ್ಲಿ ತಿಳಿಸಿದ್ದಾರೆ.

ದೇಶವು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವತ್ತ ಸಾಗುತ್ತಿರುವಾಗ, ಸಿಎಗಳ ಪ್ರಯತ್ನಗಳು ಉದ್ಯಮಗಳು ಅಭಿವೃದ್ಧಿ ಹೊಂದಲು ಮತ್ತು ಎಲ್ಲರಿಗೂ ಅವಕಾಶಗಳು ವಿಸ್ತರಿಸಬಹುದಾದ ವಾತಾವರಣವನ್ನು ಸೃಷ್ಟಿಸಲು ಸಹಾಯ ಮಾಡುತ್ತದೆ ಎಂದು ಪ್ರಧಾನಿ ಹೇಳಿದರು.

ವೈದ್ಯರ ದಿನದಂದು, ನಮ್ಮ ಸಮರ್ಪಿತ ವೈದ್ಯರಿಗೆ ಶುಭಾಶಯಗಳು, ಅವರ ಕಠಿಣ ಪರಿಶ್ರಮ, ಸಹಾನುಭೂತಿ ಮತ್ತು ಬದ್ಧತೆಯು ಭಾರತದ ಆರೋಗ್ಯ ವ್ಯವಸ್ಥೆಯ ಬೆನ್ನೆಲುಬಾಗಿದೆ. ಅವರ ದಣಿವರಿಯದ ಪ್ರಯತ್ನಗಳು, ಸಾಮಾನ್ಯವಾಗಿ ಅತ್ಯಂತ ಸವಾಲಿನ ಸಂದರ್ಭಗಳಲ್ಲಿ, ಅಸಂಖ್ಯಾತ ಜನರ ವಿಶ್ವಾಸ ಮತ್ತು ಕೃತಜ್ಞತೆಯನ್ನು ಗಳಿಸಿವೆ ಎಂದು ಮೋದಿ ಎಕ್ಸ್ ಮಾಡಿದ್ದಾರೆ.

ಕಳೆದ ದಶಕದಲ್ಲಿ, ಭಾರತವು ಆರೋಗ್ಯ ರಕ್ಷಣಾ ಪರಿಸರ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ ಎಂದು ಪ್ರಧಾನಿ ಹೇಳಿದರು. ವೈದ್ಯಕೀಯ ಕಾಲೇಜುಗಳ ಸಂಖ್ಯೆ ದ್ವಿಗುಣಗೊಂಡಿದೆ, ಆದರೆ ಪದವಿಪೂರ್ವ ಮತ್ತು



ಸ್ನಾತಕೋತ್ತರ ವೈದ್ಯಕೀಯ ಸೀಟುಗಳು ಗಣನೀಯವಾಗಿ ವಿಸ್ತರಿಸಿವೆ ಎಂದು ಅವರು ಹೇಳಿದರು. ಈ ಅಭೂತಪೂರ್ವ ಬೆಳವಣಿಗೆಯು ಮಹತ್ವಾಕಾಂಕ್ಷಿ ವೈದ್ಯರಿಗೆ ಹೆಚ್ಚಿನ ಅವಕಾಶಗಳನ್ನು ಸೃಷ್ಟಿಸುತ್ತಿದೆ, ಬಲವಾದ ಆರೋಗ್ಯ ರಕ್ಷಣಾ ಕಾರ್ಯಪಡೆಯನ್ನು ನಿರ್ಮಿಸುತ್ತಿದೆ ಮತ್ತು ಗುಣಮಟ್ಟದ ವೈದ್ಯಕೀಯ ಆರೈಕೆ ದೇಶದ ಪ್ರತಿಯೊಂದು ಮೂಲೆಯನ್ನು ತಲುಪುವುದನ್ನು ಖಚಿತಪಡಿಸುತ್ತಿದೆ ಎಂದು ಮೋದಿ ಹೇಳಿದರು. ಸಿಎ ಭ್ರಾತೃತ್ವಕ್ಕೆ ಶುಭಾಶಯಗಳನ್ನು ತಿಳಿಸಿದ ಮೋದಿ, ಅವರು ಭಾರತದ ಆರ್ಥಿಕ ಪ್ರಯಾಣದಲ್ಲಿ ದೀರ್ಘಕಾಲದಿಂದ ವಿಶ್ವಾಸಾರ್ಹ ಪಾಲುದಾರರಾಗಿದ್ದಾರೆ ಎಂದು ಹೇಳಿದರು.

ಪಾರದರ್ಶಕತೆ ಮತ್ತು ವೃತ್ತಿಪರ ಶ್ರೇಷ್ಠತೆಗೆ ತಮ್ಮ ಬದ್ಧತೆಯ ಮೂಲಕ, ಸಿಎಗಳು ದೇಶದ ಹಣಕಾಸು ವ್ಯವಸ್ಥೆಗಳನ್ನು ಬಲಪಡಿಸುತ್ತವೆ, ವ್ಯವಹಾರಗಳನ್ನು ಬೆಂಬಲಿಸುತ್ತವೆ, ಉದ್ಯಮಶೀಲತೆಯನ್ನು ಪ್ರೋತ್ಸಾಹಿಸುತ್ತವೆ ಮತ್ತು ಹೂಡಿಕೆದಾರರಲ್ಲಿ ವಿಶ್ವಾಸವನ್ನು ಪ್ರೇರೇಪಿಸುತ್ತವೆ ಎಂದು ಅವರು ಹೇಳಿದರು.ಅವರ ಪರಿಣತಿಯು ಆರ್ಥಿಕ ಬೆಳವಣಿಗೆ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಗಮನಾರ್ಹವಾಗಿ ಕೊಡುಗೆ ನೀಡುತ್ತದೆ ಎಂದು ಮೋದಿ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

## ಗೃಹ ಜ್ಯೋತಿ ಯೋಜನೆ ಪರಿಷ್ಕರಣೆ ಬಗ್ಗೆ ಜೆಡಿಎಸ್ ಕಿಡಿ: ವಿಪಕ್ಷಗಳ ಆರೋಪಕ್ಕೆ ಇಂಧನ ಸಚಿವರಿಂದಲೇ ಸ್ಪಷ್ಟನೆ

● ಉದಯವಾಹಿನಿ, ಬೆಂಗಳೂರು

ಗೃಹ ಜ್ಯೋತಿ ಯೋಜನೆ ಗೆ ಹೊಸ ಷರತ್ತು ವಿಚಾರ ಸಂಬಂಧ ರಾಜ್ಯ ಸರ್ಕಾರದ ವಿರುದ್ಧ ಜಾತ್ಯಾತೀತ ಜನತಾದಳ (ಸೆಕ್ಯೂಲರ್) ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ಈ ಬಗ್ಗೆ ಎಕ್ಸ್ ಪೋಸ್ಟ್ ಮಾಡಿರುವ ಜೆಡಿಎಸ್, ಎಲ್ಲರಿಗೂ ಫ್ರೀ, ಯಾವುದೇ ಷರತ್ತುಗಳಿಲ್ಲ ಎಂದು ಭಾಷಣ ಬಿಗಿದು ಜನರ ಕಿವಿಗೆ ಹೂವಿಟ್ಟು ಅಧಿಕಾರ ಹಿಡಿದ ಕಾಂಗ್ರೆಸ್, ಈಗ ರಾಜ್ಯದ ಬೊಕ್ಕಸವನ್ನು ಖಾಲಿ ಮಾಡಿದೆ. ಆರ್ಥಿಕ ದಿವಾಳಿತನವನ್ನು ಮುಚ್ಚಿಕೊಳ್ಳಲು ಜನಸಾಮಾನ್ಯರನ್ನು 'ಗೃಹಜ್ಯೋತಿ' ಯೋಜನೆಯಿಂದ ಹೊರಹಾಕಲು ಕುತಂತ್ರ ಹೆಣೆದಿದೆ ಎಂದು ಗಂಭೀರ ಆರೋಪ ಮಾಡಿದೆ. ಮನೆ-ಮನೆ ಪರಿಶೀಲನೆ ನೆಪದಲ್ಲಿ ಎಸ್ಕಾಂ ಅಧಿಕಾರಿಗಳನ್ನು ಬಿಟ್ಟು, ಜನಸಾಮಾನ್ಯರನ್ನು ದಾಖಲೆಗಳ ಹೆಸರಿನಲ್ಲಿ ಬೆದರಿಸುವ ಕೆಲಸ ಶುರುವಾಗಿದೆ.

ಉಚಿತ ವಿದ್ಯುತ್ ಪಡೆಯಲು ಪಾನ್ ಕಾರ್ಡ್ ಯಾಕೆ ಬೇಕು ವಿದ್ಯುತ್ ಸಂಪರ್ಕಕ್ಕೂ ಜಾತಿ ಪ್ರಮಾಣ ಪತ್ರಕ್ಕೂ ಏನು ಸಂಬಂಧ ಕರ್ನಾಟಕದ ನಿವಾಸಿ ಎಂದು ದೃಢೀಕರಿಸಲು ಆಧಾರ್ ಕಾರ್ಡ್ ಅಥವಾ ವೋಟರ್ ಐಡಿ ಸಾಲದೇ ಎಂದು ಪ್ರಶ್ನಿಸಿರುವ ಜೆಡಿಎಸ್, ಕಳ್ಳ ಮಾರ್ಗದಲ್ಲಿ ಷರತ್ತುಗಳನ್ನು ವಿಧಿಸಿ ಫಲಾನುಭವಿಗಳ ಸಂಖ್ಯೆ ಕಡಿತಗೊಳಿಸಿ ಸಾವಿರಾರು ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ನಾಮ ಹಾಕುವ ನಿಮ್ಮ ಉದ್ದೇಶ ಸ್ಪಷ್ಟವಾಗಿದೆ.

ಬಡವರು, ರೈತರು ಮತ್ತು ಮಧ್ಯಮ ವರ್ಗದವರನ್ನು



ದಿನಕ್ಕೊಂದು ದಾಖಲೆ ಕೇಳಿ ಕಚೇರಿಗಳಿಗೆ ಅಲೆದಾಡಿಸಿ, ಸತಾಯಿಸಿ, ಸೌಲಭ್ಯಗಳಿಂದ ವಂಚಿಸುವುದೇ ನಿಮ್ಮ ಸಾಧನೆಯೇ ಎಂದು ಪ್ರಶ್ನಿಸಿದೆ.

ವಿಪಕ್ಷಗಳ ಆರೋಪಗಳ ಬೆನ್ನಲ್ಲೇ ಇಂಧನ ಸಚಿವ ಕೆ.ಜೆ. ಜಾರ್ಜ್ ಸ್ಪಷ್ಟನೆ ನೀಡಿದ್ದು, ಅರ್ಹರಲ್ಲದವರನ್ನು ಮಾತ್ರ ಪರಿಷ್ಕರಣೆ ಮಾಡುತ್ತೇವೆ. ಯಾರೆಲ್ಲ ಅರ್ಹರಿದ್ದಾರೆ ಅವರಿಗೆ ಮತ್ತೆ ಕೊಡುತ್ತೇವೆ. ಗೃಹಜ್ಯೋತಿಗೆ ಜಾತಿ ಪ್ರಮಾಣಪತ್ರದ ಅವಶ್ಯಕತೆ ಇಲ್ಲ. ಜಾತಿ ಹೆಸರು ಕಾಲಂನಲ್ಲಿ ಬರೆದರೆ ಸಾಕು.

ವಿರೋಧ ಪಕ್ಷದಲ್ಲಿ ಸುಮ್ಮನೇ ಕೂರಲು ಇವರಿಗೆ ಆಗುತ್ತಿಲ್ಲ, ಫಾರಂ ನೋಡಿದ ಮೇಲೆ ಹೇಳಲಿ, ಅದನ್ನು ತೆಗೆದು ನೋಡಿದ ಮೇಲೆ ಎಲ್ಲರಿಗೂ ಗೊತ್ತಾಗುತ್ತದೆ. ನಾವೇನು ವ್ಯವಹಾರ ಪತ್ರವನ್ನು ಕೊಡುವಂತೆ ಬರೆದಿದ್ದೀವಾ? ಎಂದವರು ಪ್ರಶ್ನಿಸಿದ್ದಾರೆ.

# ಹೇಮಾವತಿ ಕೆನಾಲ್ ಯೋಜನೆಗೆ ಕಾಂಗ್ರೆಸ್ ಶಾಸಕರಿಂದಲೇ ವಿರೋಧ

## ಭೂಗತ ಮಾರ್ಗದ ಪೈಪ್ಲೇನ್ ಬದಲಾಗಿ ಕಾಲುವೆಗಳನ್ನು ಅಗಲೀಕರಣ ಮಾಡಿ ನೀರು ಹರಿಸುವಂತೆ ನಾನು ಹಲವು ಬಾರಿ ಮನವಿ

● ಉದಯವಾಹಿನಿ, ಬೆಂಗಳೂರು

ಸಿಎಂ ಡಿ.ಕೆ.ಶಿವಕುಮಾರ್ ಅವರ ಕನಸಿನ ಯೋಜನೆಗೆ ಮತ್ತೊಂದು ವಿಘ್ನ ಎದುರಾಗಿದ್ದು, ಆಡಳಿತ ಪಕ್ಷದ ಶಾಸಕರೇ ಪಕ್ಷ ತೊರೆಯುವ ಬೆದರಿಕೆ ಹಾಕಿದ್ದಾರೆ. ತುಮಕೂರು ಜಿಲ್ಲೆಯಿಂದ ಹೇಮಾವತಿಯ ನದಿಯ ನೀರನ್ನು ಕೊಳವೆ ಮಾರ್ಗದ ಮೂಲಕ ಕುಣಿಗಲ್ ಮತ್ತು ಮಾಗಡಿ ಭಾಗದ ಕೆರೆಗಳಿಗೆ ಹರಿಸಲು 1 ಸಾವಿರ ಕೋಟಿ ರೂ. ವೆಚ್ಚದ ಹೇಮಾವತಿ ಎಕ್ಸ್ ಪ್ರೆಸ್ ಕೆನಾಲ್ ಯೋಜನೆಯನ್ನು ರೂಪಿಸಲಾಗಿದೆ. ಈ ಯೋಜನೆ ಅನುಷ್ಠಾನಕ್ಕೆ ಬಂದರೆ, ಗುಬ್ಬಿ ಮತ್ತು ತುಮಕೂರು ತಾಲ್ಲೂಕಿಗೆ ಕುಡಿಯುವ ಹಾಗೂ ಕೃಷಿ ಚಟುವಟಿಕೆಗೆ ನೀರಿನ ಕೊರತೆಯಾಗಲಿದೆ ಎಂಬ ಕಾರಣಕ್ಕಾಗಿ ಸ್ಥಳೀಯರು ಪ್ರತಿಭಟನೆ ನಡೆಸುತ್ತಿದ್ದಾರೆ.

ರೈತರ ಪ್ರತಿಭಟನೆಯಿಂದಾಗಿ ಯೋಜನೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಈ ಯೋಜನೆ ಡಿ.ಕೆ.ಶಿವಕುಮಾರ್ ಅವರ ಮಹತ್ವಕಾಂಕ್ಷಿ ಗುರಿಯಾಗಿದೆ. ಡಿ.ಕೆ. ಶಿವಕುಮಾರ್ ಅವರ ಆಪ್ತ ಶಾಸಕರಾಗಿರುವ ಕುಣಿಗಲ್‌ನ ಎಚ್.ಡಿ.ರಂಗನಾಥ್,




ಮಾಗಡಿಯ ಎಚ್.ಸಿ.ಬಾಲಕೃಷ್ಣ ಅವರ ಕ್ಷೇತ್ರಗಳಿಗೆ ನೀರು ಹರಿಸಲು ಕಳೆದ 8 ವರ್ಷದಿಂದಲೂ ಸತತ ಪ್ರಯತ್ನಗಳು ನಡೆಯುತ್ತಿವೆ. ಕುಮಾರಸ್ವಾಮಿಯವರು ನನ್ನ ಮನವಿಗೆ ಸ್ಪಂದಿಸಲಿಲ್ಲ, ಅಂದಿನಿಂದಲೇ ಅವರೊಂದಿಗೆ ಇರಿಸು-ಮುರಿಸು ಆರಂಭವಾಯಿತು, ಪಕ್ಷ ಬಿಡಲು ಅದೇ ಕಾರಣವೂ ಆಯಿತು ಎಂದು ಹೇಳಿದ್ದಾರೆ. ಭೂಗತ ಮಾರ್ಗದ ಪೈಪ್ಲೇನ್ ಬದಲಾಗಿ ಕಾಲುವೆಗಳನ್ನು ಅಗಲೀಕರಣ ಮಾಡಿ ನೀರು ಹರಿಸುವಂತೆ ನಾನು ಹಲವು ಬಾರಿ ಮನವಿ ಮಾಡಿದ್ದೇನೆ. ಆದರೆ ಆಗ ನನ್ನ ಮಾತಿಗೆ ಬೆಲೆ ಸಿಗಲಿಲ್ಲ. ಈಗ ಕಾಂಗ್ರೆಸ್ ಪಕ್ಷದಲ್ಲಿದ್ದೇನೆ, ನಮದೇ ಸರ್ಕಾರ ಇದೆ.

ಈ ಸಂದರ್ಭದಲ್ಲಿ ಬೀದಿಗಿಳಿದು ಹೋರಾಟ ಮಾಡುವುದು ಸರಿಯಲ್ಲ ಎಂದು ಹಿತೈಷಿಗಳು ಸಲಹೆ ನೀಡಿದ್ದಾರೆ. ಆದರೆ ಜನರಿಗೆ ಅನ್ಯಾಯವಾಗುವುದಾದರೆ ತಾವು ಪ್ರತಿಭಟನೆ ನಡೆಸಲು ಹಿಂದೆ-ಮುಂದೆ ನೋಡುವುದಿಲ್ಲ.

ಜನರ ಜೊತೆ ಇರುವುದು ನನ್ನ ಕರ್ತವ್ಯ. ಅಗತ್ಯ ಬಂದರೆ ಪಕ್ಷ ತೊರೆಯಲೂ ಹಿಂದೇಟು ಹಾಕುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಲಿಂಕ್ ಕೆನಾಲ್ ನಿಷ್ಪ್ರಯೋಜಕ ಯೋಜನೆ. ಅದರಿಂದ ಯಾರಿಗೂ ಅನೂಕೂಲವಿಲ್ಲ, ಬೆಟ್ಟಕ್ಕೆ ಕಲ್ಲು ಹೊರುವ ವ್ಯರ್ಥ ಪ್ರಯತ್ನ ಎಂದು ಹಲವು ಬಾರಿ ಹೇಳಿದ್ದೇನೆ. ಅದನ್ನು ಮೀರಿ ಯೋಜನೆ ಜಾರಿಗೊಳಿಸಲು ಮುಂದಾದರೆ ನಾನು ಜನ ಹಿತರಕ್ಷಣೆ ಪರವಾಗಿ ನಿಲ್ಲಬೇಕಾಗುತ್ತದೆ ಎಂದು ಹೇಳಿದ್ದಾರೆ.

**ಹಲವು ಭಾರಿ ವಿರೋಧ** ಈ ಯೋಜನೆಗೆ ತುಮಕೂರು ಜಿಲ್ಲೆಯಲ್ಲಿ ಕಾಂಗ್ರೆಸ್ ಶಾಸಕರಾಗಿರುವ ಗುಬ್ಬಿಯ ಎಸ್.ಆರ್.ಶ್ರೀನಿವಾಸ್, ಮಧುಗಿರಿಯ ಕೆ.ಎನ್.ರಾಜಣ್ಣ ಪ್ರಬಲ ವಿರೋಧ ಪಡಿಸಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಡಾ.ಜಿ.ಪರಮೇಶ್ವರ್ ಯೋಜನೆ ವಿಚಾರವಾಗಿ ಅಸ್ಪಷ್ಟ ನಿಲುವು ಹೊಂದಿದ್ದಾರೆ. ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಗುಬ್ಬಿ ಶಾಸಕ ಎಸ್.ಆರ್.ಶ್ರೀನಿವಾಸ್, ಹಿಂದೆ ಜೆಡಿಎಸ್-ಕಾಂಗ್ರೆಸ್ ಸಮಿಶ್ರ ಸರ್ಕಾರದಲ್ಲಿ ನಾನೂ ಸಚಿವನಾಗಿದ್ದೆ. ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದರು. ಡಿ.ಕೆ.ಶಿವಕುಮಾರ್ ಜಲಸಂಪನೂಲ ಸಚಿವರಿದ್ದರು. ಹೇಮಾವತಿ ಎಕ್ಸ್ ಪ್ರೆಸ್ ಲಿಂಕ್ ಕೆನಾಲ್ ಯೋಜನೆಗೆ ಅನುಮೋದನೆ ನೀಡಲು ಮುಂದಾದಾಗ ನಾನು ಪ್ರಬಲ ವಿರೋಧ ಮಾಡಿದ್ದೆ.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 14, 078/Gram 24ct ₹12,905/Gram 22ct ಬೆಳ್ಳಿ: ₹240.00/Gram

# ಶಾಲಾ ಬಸ್‌ನಲ್ಲಿ ಪ್ರಯಾಣಿಸುವ ಮಕ್ಕಳ ಸುರಕ್ಷತೆ ಶಾಲೆಯ ಜವಾಬ್ದಾರಿ': ಹೈಕೋರ್ಟ್,

• ಉದಯವಾಹಿನಿ, ಬೆಂಗಳೂರು

ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ದಿವ್ಯಜ್ಯೋತಿ ಶಾಲೆ ಆಡಳಿತ ಮಂಡಳಿಯ ವಿರುದ್ಧ ದಾಖಲಾದ ಕ್ರಿಮಿನಲ್ ಪ್ರಕರಣದ ತನಿಖೆಗೆ ಕರ್ನಾಟಕ ಹೈಕೋರ್ಟ್ ಅನುಮತಿ ನೀಡಿದೆ.

ನಾಲ್ಕನೇ ತರಗತಿಯ ವಿದ್ಯಾರ್ಥಿಯೊಬ್ಬ ಶಾಲಾ ಬಸ್‌ನಲ್ಲಿ ಮನೆಗೆ ಹಿಂದಿರುಗುವ ವೇಳೆ ಕೆಲವು ಮಕ್ಕಳು ಹಾರಿಸಿದ ಕಾನ್ಫೆಟ್ಟಿ ಗ್ಲಿಟರ್ ಕಣ್ಣಿಗೆ ಬಿದ್ದ ಪರಿಣಾಮ ಒಂದು ಕಣ್ಣಿನ ದೃಷ್ಟಿ ಕಳೆದುಕೊಂಡಿದ್ದು, ದೇಹದ ಒಟ್ಟು ಸಾಮರ್ಥ್ಯದ ಶೇ.40ರಷ್ಟು ಅಂಗವೈಕಲ್ಯ ಬಾಲಕನಿಗೆ ಉಂಟಾಗಿದೆ ಎಂದು ಆರೋಪಿಸಲಾಗಿತ್ತು.

ಈ ಸಂಬಂಧ ಶಾಲೆಯ ವಿರುದ್ಧ ದಾಖಲಾಗಿದ್ದ ಗಂಭೀರ ನಿರ್ಲಕ್ಷ್ಯದ ಪ್ರಕರಣವನ್ನು



ಉದಯವಾಹಿನಿ ಚಿತ್ರ

ರದ್ದುಗೊಳಿಸುವಂತೆ ಶಾಲಾ ಆಡಳಿತ ಮಂಡಳಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ತಳ್ಳಿಹಾಕಿದರು. ಶಾಲಾ ಬಸ್ ಎನ್ನುವುದು ಶಾಲೆಯ ಭಾಗವೇ ಆಗಿದ್ದು, ಅದರ ಚಟುವಟಿಕೆಯ ವಿಸ್ತರಣೆ ಆಗಿದೆ. ಶಾಲೆಯಿಂದ ಹೊರಟ ಮಗು ತನ್ನ ಮನೆಯವರೆಗೆ, ಅದು ಕೊನೆಯ ನಿಲ್ದಾಣವಾಗಿದ್ದರೂ ಸಹ, ಸುರಕ್ಷಿತವಾಗಿ ತಲುಪುವ ಹೊಣೆಗಾರಿಕೆಯಿಂದ ಶಾಲೆ ಕೈತೊಳೆದುಕೊಳ್ಳಲು ಸಾಧ್ಯವಿಲ್ಲ. ಕಾನೂನಿನಲ್ಲಿ ನಿಗದಿಪಡಿಸಿರುವ ಕರ್ತವ್ಯಗಳನ್ನು ಪಾಲಿಸುವ ಜವಾಬ್ದಾರಿಯಿಂದ ಶಾಲೆಗಳು ಹಿಂದೆ ಸರಿಯಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

### ತನಿಖೆಯನ್ನು ತಡೆಯಲು ಸಾಧ್ಯವಿಲ್ಲ

**ಈ ವಾದವನ್ನು ನ್ಯಾಯಾಲಯ ಒಪ್ಪಲಿಲ್ಲ. ಶಾಲಾ ಆಡಳಿತದ ಹೊಣೆಗಾರಿಕೆ ಎಷ್ಟರ ಮಟ್ಟಿಗೆ ಇದೆ ಎಂಬುದು ತನಿಖೆ ಪೂರ್ಣಗೊಂಡ ನಂತರವೇ ಸ್ಪಷ್ಟವಾಗುತ್ತದೆ. ಆದ್ದರಿಂದ ಈ ಹಂತದಲ್ಲಿ ತನಿಖೆಯನ್ನು ತಡೆಯಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಹೇಳಿದೆ.**

## ಬೆಂಗಳೂರಿನಲ್ಲಿ ಇಂದಿನಿಂದ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಪಾದಚಾರಿಗಳ ಸುಗಮ ಓಡಾಟಕ್ಕೆ ಅಡ್ಡಿಯಾಗುತ್ತಿರುವ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ಇಂದಿನಿಂದ ಆರಂಭವಾಗಿದೆ. ಅಕ್ರಮ ಒತ್ತುವರಿದಾರರು ಸ್ವಯಂಪ್ರೇರಿತವಾಗಿ ತೆರವುಗೊಳಿಸಲು ಮಂಗಳವಾರದವರೆಗೂ ಗಡುವು ನೀಡಲಾಗಿತ್ತು.

ಆದಾಗ್ಯೂ, ನಿಯಮ ಪಾಲಿಸದ ಕಡೆಗಳಲ್ಲಿ ಇಂದಿನಿಂದ ತೆರವು ಕಾರ್ಯಾಚರಣೆ ಆರಂಭಿಸಲಾಗಿದೆ.

ಅಕ್ರಮ ಒತ್ತುವರಿದಾರರಿಗೆ ಭಾರಿ ದಂಡ ವಿಧಿಸುವುದರ ಜೊತೆಗೆ ಅವರ ಲೈಸೆನ್ಸ್‌ಗಳನ್ನು ರದ್ದುಪಡಿಸಲಾಗುವುದು ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಎಚ್ಚರಿಕೆ ನೀಡಿದ್ದಾರೆ.

## ಐಟಿ ಕಂಪನಿಯ ಡೇಕೇರ್ ಕೇಂದ್ರದ 5 ಮಹಿಳಾ ಸಿಬ್ಬಂದಿ ವಿರುದ್ಧ ಎಫ್‌ಐಆರ್ ದಾಖಲು!

• ಉದಯವಾಹಿನಿ, ಬೆಂಗಳೂರು

ಮಕ್ಕಳ ಮೇಲೆ ದೈಹಿಕವಾಗಿ ದೌರ್ಜನ್ಯ ಎಸಗಿದ ಆರೋಪದ ಮೇಲೆ ಇಲ್ಲಿನ ಐಟಿ ಕಂಪನಿ ಆವರಣದೊಳಗಿನ ಡೇಕೇರ್ ಕೇಂದ್ರದ ಐವರು ಮಹಿಳಾ ಉದ್ಯೋಗಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ. ಬ್ರೂಕ್‌ಫೀಲ್ಡ್‌ನಲ್ಲಿರುವ ಮಕ್ಕಳ ಆರೈಕೆ ಕೇಂದ್ರದಲ್ಲಿ ಈ ದೌರ್ಜನ್ಯ ನಡೆದಿದ್ದು, ಐಟಿ ಕಂಪನಿಯ ಉದ್ಯೋಗಿಗಳು ಕೆಲಸದಲ್ಲಿರುವಾಗ ತಮ್ಮ ಮಕ್ಕಳನ್ನು ಇಲ್ಲಿ ಬಿಟ್ಟು ಹೋಗುತ್ತಾರೆ ಎಂದು ಅವರು ಹೇಳಿದರು. ಈ ಘಟನೆ ನಡೆದಿರುವುದನ್ನು ತೋರಿಸುವ ವಿಡಿಯೋಗಳನ್ನು ವಾಟ್ಸಾಪ್‌ನಲ್ಲಿ ಪ್ರಸಾರ ಮಾಡಿ, ನಂತರ ಮಕ್ಕಳ ಸಹಾಯವಾಣಿಗೆ ವರದಿ ಮಾಡಿದ ನಂತರ ಬೆಳಕಿಗೆ ಬಂದಿದೆ. ಮಕ್ಕಳು ಅಳುತ್ತಿರುವುದು ಮತ್ತು ಆರೈಕೆದಾರರು ದೈಹಿಕ ಕಿರುಕುಳ ಮತ್ತು ಚಿತ್ರಹಿಂಸೆ ನೀಡುತ್ತಿರುವುದು ವಿಡಿಯೋಗಳಲ್ಲಿ ಸೆರೆಯಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ.

## ಹಗದೂರು ಶ್ರೀರಾಮ ಯುವಕ ರೈತ ಸಂಘದ ಖಜಾಂಚಿ ಹೆಚ್.ಕೆ.ಮುನಿರಾಜುರವರ ಹುಟ್ಟುಹಬ್ಬದ ಸಂಭ್ರಮಾಚರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಹಗದೂರು ಶ್ರೀರಾಮ ಯುವಕ ರೈತ ಸಂಘದ ಖಜಾಂಚಿ ಹೆಚ್.ಕೆ.ಮುನಿರಾಜುರವರ ಹುಟ್ಟುಹಬ್ಬ ಸಂಭ್ರಮಾಚರಣೆ.

ಅಧ್ಯಕ್ಷರು ಹಗದೂರು ಶ್ರೀರಾಮ ಯುವಕ ರೈತ ಸಂಘ ಅಧ್ಯಕ್ಷರಾದ ಹೆಚ್.ಕೆ.ನಾರಾಯಣಸ್ವಾಮಿ ಮಾಜಿ ಮಹಾನಗರ ಪಾಲಿಕೆ ಸದಸ್ಯರಾದ ಹೆಚ್.ಎ.ಶ್ರೀನಿವಾಸ್, ಮಂಜು ವೈನ್ಸ್ ಎಸ್.ಮಂಜುನಾಥ್ ಗೌಡ, ಕಂದಾಯ ಪರಿವೀಕ್ಷಕರು, ಜಿಬಿಎ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ನಿರ್ದೇಶಕ ಹೆಚ್.ಬಿ.ಹರೀಶ್ ಹೆಚ್.ಎ.ಮುನಿಯಪ್ಪ, ಪ್ರಾಂಶುಪಾಲರಾದ ಎಂ.ಮಲ್ಲೇಶ್, ಬಿಲ್ಡರ್ ಅಶೋಕ್ ರೆಡ್ಡಿ, ಭರಣಿ ಎಲೆಕ್ಟ್ರಿಕಲ್ ಮಾಲೀಕರಾದ, ರಘು ಜೆ. ಸ್ಥಳೀಯರಾದ ಜನಾರ್ಧನ್, ಹೆಚ್‌ಎಂ.ಮಂಜುನಾಥ್, ಹೆಚ್.ಕೆ.ನಾರಾಯಣಸ್ವಾಮಿ ಟಿ. ಬಾಬಣ್ಣ ಎಲ್.ವಿಜಯಕುಮಾರ್ ರವರು ಹೆಚ್.ಕೆ.ಮುನಿರಾಜುರವರಿಗೆ ಆತ್ಮೀಯವಾಗಿ ಸನ್ಮಾನಿಸಿದರು. ಹೆಚ್.ಕೆ.ಮುನಿರಾಜುರವರು ಅಪಾರ ದೈವ ಭಕ್ತರು ಮತ್ತು ಕೃಷಿ ಕುರಿತು ಅಪಾರ ಆಸಕ್ತಿ ಇರುವ ವ್ಯಕ್ತಿತ್ವದವರು.

ಹಗದೂರು ಶ್ರೀರಾಮ ರಥ ನಿರ್ಮಾಣದಲ್ಲಿ ಸಂಘದ ಅಧ್ಯಕ್ಷರು, ಪದಾಧಿಕಾರಿಗಳ ಜೊತೆಯಲ್ಲಿ ಶ್ರಮಿಸಿದರು. ಹಗದೂರು ಶ್ರೀರಾಮ ಯುವಕ ರೈತ ಸಂಘದಲ್ಲಿ ಖಜಾಂಚಿಯಾಗಿ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ. ದೈವ ಭಕ್ತ ಜೊತೆಯಲ್ಲಿ ಕಾಯಕ ಸೇವೆಯಲ್ಲಿ ನಿರತರಾಗಿರುವ ಹೆಚ್.ಕೆ.ಮುನಿರಾಜುರವರು 50ವರ್ಷ ತುಂಬಿದ ಶುಭ ಸಂದರ್ಭದಲ್ಲಿ ಹಗದೂರಿನ ಸ್ಥಳೀಯ ಮುಖಂಡರು, ಅಭಿಮಾನಿಗಳ ಮತ್ತು ಸ್ನೇಹಿತರಿಂದ ಕೇಕ್ ಕತ್ತರಿಸಿ, ಸಿಹಿ ವಿತರಿಸಲಾಯಿತು.

## ಬಿಜೆಪಿ ಶಾಸಕರಲ್ಲಿಯೇ ಅತಿ ಹೆಚ್ಚು ಅನುದಾನ ಪಡೆದ ಆರ್. ಅಶೋಕ್!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಮೂಲಸೌಕರ್ಯ ಮತ್ತು ರಸ್ತೆ ಅಭಿವೃದ್ಧಿಗೆ 2,000 ಕೋಟಿ ರೂ. ಪ್ಯಾಕೇಜ್‌ನಲ್ಲಿ 'ತಾರತಮ್ಯ ಹಂಚಿಕೆ' ಮಾಡಲಾಗಿದೆ ಎಂದು ವಿಪಕ್ಷ ನಾಯಕ ಆರ್ ಅಶೋಕ್ ಆರೋಪಿಸಿದ್ದಾರೆ.

ಆದರೆ ವಿಪಕ್ಷ ನಾಯಕ ಆರ್ ಅಶೋಕ್ ಸ್ಪರ್ಧಿಸುವ ಪದ್ಮನಾಭನಗರಕ್ಕೆ ಸುಮಾರು 80 ಕೋಟಿ ರು ಅನುದಾನ ನೀಡಲಾಗಿದೆ. ಬಿಜೆಪಿ ಶಾಸಕರಿಗೆ ಹಂಚಿಕೆಯಾದ ಅನುದಾನದಲ್ಲಿ ಅತಿ ಹೆಚ್ಚಿನ ಅನುದಾನವಾಗಿದೆ. ಹೀಗಾಗಿ ಎಲ್ಲರ ಹುಬ್ಬೇರುವಂತೆ ಮಾಡಿದೆ.

ಕಾಂಗ್ರೆಸ್ ಶಾಸಕರು ಪ್ರತಿನಿಧಿಸುವ ಕ್ಷೇತ್ರಗಳಾದ ಚಾಮರಾಜಪೇಟೆ, ಗಾಂಧಿ ನಗರ, ವಿಜಯನಗರ, ಶಾಂತಿನಗರ, ಹೆಬ್ಬಾಳ, ಗೋವಿಂದರಾಜನಗರ, ಪುಲಕೇಶಿನಗರ, ಶಿವಾಜಿನಗರ, ಬಿಟಿಎಂ ಲೇಔಟ್, ಸರ್ವಜ್ಞನಗರ ಮತ್ತು ಬ್ಯಾಟರಾಯನಪುರಕ್ಕೆ ತಲಾ 100 ಕೋಟಿ ರೂ. ಹಂಚಿಕೆಯಾಗಿದೆ.

ಆದರೆ ಬಿಜೆಪಿ ಪ್ರತಿನಿಧಿಸುವ ಕ್ಷೇತ್ರಗಳಿಗೆ ಹಂಚಿಕೆ 40 ಕೋಟಿ ರೂ.ಗಳಿಂದ 80 ಕೋಟಿ ರೂ. ಅನುದಾನ ಹಂಚಿಕೆ ಮಾಡಲಾಗಿದೆ. ಡಿಕೆಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರವು ಬೆಂಗಳೂರಿನ ರಸ್ತೆ ಮೂಲಸೌಕರ್ಯ ಅಭಿವೃದ್ಧಿಗಾಗಿ 2,000 ಕೋಟಿ ಅನುದಾನಕ್ಕೆ ಅನುಮೋದನೆ ನೀಡಿದೆ. ಈ ಬೃಹತ್ ಯೋಜನೆಯಡಿ, ವಿಧಾನಸಭಾ ಕ್ಷೇತ್ರವಾರು ಅನುದಾನ ಹಂಚಿಕೆ ಮಾಡಲಾಗಿದ್ದು, ಆಡಳಿತ ಪಕ್ಷದ ಕ್ಷೇತ್ರಗಳಿಗೆ ಹೆಚ್ಚಿನ ಪಾಲು ದೊರೆತಿದೆ ಎಂಬ ಚರ್ಚೆ ನಡೆಯುತ್ತಿದೆ.

## ನೈಸ್ ರಸ್ತೆ- ಎಲೆಕ್ಟ್ರಾನಿಕ್ ಸಿಟಿ ಟೋಲ್ ದರ ಏರಿಕೆ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಜನದಟ್ಟಣೆಯ ನಡುವೆ ದಿನನಿತ್ಯ ಸಂಚರಿಸುವ ವಾಹನ ಸವಾರರ ಜೇಬಿಗೆ ಇನ್ಮುಂದೆ ಹೊರೆಹೆಚ್ಚಾಗಲಿದ್ದು, ನಗರದ ಪ್ರಮುಖ ಜುಲೈ.1ರಿಂದಲೇ ಟೋಲ್ ದರ ಹೆಚ್ಚಳವಾಗಲಿದ್ದು, ಇದು ಬೈಕ್ ಸವಾರರಿಗೂ ಇದರ ಬಿಸಿ ತಟ್ಟಲಿದೆ. ಹೊಸೂರು ರಸ್ತೆಯಿಂದ ಬನ್ನೇರುಘಟ್ಟ ರಸ್ತೆಗೆ ಸಂಚರಿಸುವ ಕಾರುಗಳ ಟೋಲ್ ಶುಲ್ಕವನ್ನು 65 ರೂ.ನಿಂದ 72 ರೂ.ಗೆ ಹೆಚ್ಚಿಸಲಾಗಿದೆ. ಮೈಸೂರು ರಸ್ತೆ ಮತ್ತು ಮಾಗಡಿ ರಸ್ತೆ ನಡುವೆ ಟೋಲ್ ಶುಲ್ಕವನ್ನು 70 ರೂ.ನಿಂದ 77 ರೂ.ಗೆ ಹೆಚ್ಚಿಸಲಾಗಿದೆ.

ಪ್ರಯಾಣದ ದೂರವನ್ನು ಅವಲಂಬಿಸಿ, ಪ್ರತ್ಯೇಕ ವಿಭಾಗಗಳಲ್ಲಿ ಕಾರುಗಳಿಗೆ ಟೋಲ್ 3 ರಿಂದ 8 ರೂ.ಗಳಷ್ಟು ಹೆಚ್ಚಾಗಿದೆ. ಬಸ್‌ಗಳ ಟೋಲ್ ಕೂಡ ಹೆಚ್ಚಿಸಿರುವುದರಿಂದ, ಬಿಎಂಟಿಸಿ ಹೆಚ್ಚುವರಿ ವೆಚ್ಚವನ್ನು ಪ್ರಯಾಣಿಕರಿಗೆ ಹೊರಿಸುವ ಸಾಧ್ಯತೆ ಇದೆ. ಹೊಸೂರು ರಸ್ತೆ-ಬನ್ನೇರುಘಟ್ಟ ರಸ್ತೆ ಟೋಲ್ 65 ರಿಂದ 72 ಕ್ಕೆ ಏರಿಕೆ ಮಾಡಲಾಗಿದೆ. ದ್ವಿಚಕ್ರ ವಾಹನ ಸವಾರರಿಗೆ ಇದೇ ಮಾರ್ಗದ ಟೋಲ್ ಶುಲ್ಕ 30 ರಿಂದ 33 ರೂ.ಗೆ ಹೆಚ್ಚಿಸಲಾಗಿದೆ. ಬನ್ನೇರುಘಟ್ಟ ರಸ್ತೆಯಿಂದ ಕನಕಪುರ ರಸ್ತೆಗೆ 15 ರಿಂದ 17 ಕ್ಕೆ ಏರಿಕೆ ಮಾಡಲಾಗಿದೆ.

ಹೊಸೂರು ರಸ್ತೆ-ಬನ್ನೇರುಘಟ್ಟ ರಸ್ತೆ ಬಸ್‌ಗಳ ಟೋಲ್ ಶುಲ್ಕ 195 ರಿಂದ 215 ರೂ. ಕ್ಕೆ ಹೆಚ್ಚಳ ಮಾಡಲಾಗಿದೆ. ಟ್ರಕ್‌ಗಳಿಗೆ, 128 ರಿಂದ 141 ರೂ. ಏರಿಕೆ ಮಾಡಲಾಗಿದೆ.

# ಫೇಕ್ ನ್ಯೂಸ್ ನಶೆ ಹತ್ತಿಸಿಕೊಳ್ಳಬೇಡಿ

## ಮೇಕೆದಾಟು ಪಾದಯಾತ್ರೆಯಲ್ಲಿ ನಾನು ಸುಸ್ತಾಗಿ ವಾಲಿಕೊಂಡು ನಡೆದ ವಿಡಿಯೊ ಹಾಕಿ ಕುಡುಕ ಎಂದು ಬರೆದರು

• ಉದಯವಾಹಿನಿ, ಬೆಂಗಳೂರು

ಸ್ವಾತಂತ್ರ್ಯ ಪೂರ್ವದಿಂದಲೂ ಪತ್ರಿಕೋದ್ಯಮವು ದೇಶದ ಪ್ರಗತಿಗೆ ಮತ್ತು ಪ್ರಜಾಪ್ರಭುತ್ವದ ಅಡಿಪಾಯಕ್ಕೆ ನಿರ್ಣಾಯಕ ಪಾತ್ರ ವಹಿಸಿದೆ. ಮಾಹಿತಿ ತಲುಪಿಸುವ, ಪ್ರಶ್ನಿಸುವ ಹಾಗೂ ಸಮಾಜವನ್ನು ಜಾಗೃತಗೊಳಿಸುವ ಮಹತ್ವದ ಕಾರ್ಯವನ್ನು ಪ್ರತಿ ಪತ್ರಕರ್ತನೂ ಜವಾಬ್ದಾರಿಯಿಂದ ನಿರ್ವಹಿಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹೇಳಿದ್ದಾರೆ.

ಈ ದಿನ, 1843ರಲ್ಲಿ ಕನ್ನಡದ ಮೊಟ್ಟಮೊದಲ ಪತ್ರಿಕೆ 'ಮಂಗಳೂರು ಸಮಾಚಾರ' ಪ್ರಕಟಗೊಂಡ ಐತಿಹಾಸಿಕ ದಿನದ ನೆನಪಿನಲ್ಲಿ, ಸತ್ಯದ ಪರ ಧ್ವನಿಯಾಗಿ, ಅನ್ಯಾಯದ ವಿರುದ್ಧ ಹೋರಾಡುವ ನನ್ನೆಲ್ಲಾ ಸಮಸ್ತ ಮಾಧ್ಯಮ ಮಿತ್ರರಿಗೆ ಪತ್ರಿಕಾ ದಿನಾಚರಣೆಯ ಹಾರ್ದಿಕ ಶುಭಾಶಯಗಳು ಎಂದು ಹೇಳಿದ್ದಾರೆ.

ಇಂದು ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಮತ್ತು ಪತ್ರಿಕಾರಂಗ ಸಮಾದಲ್ಲಿರುವ ನಾಲ್ಕು ಪ್ರಮುಖ ಆಧಾರ ಸ್ತಂಭಗಳಾಗಿ ಕೆಲಸ ಮಾಡುತ್ತವೆ. ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗ ತಪ್ಪು ಮಾಡಿದಾಗ ಅದನ್ನು ತೋರಿಸಿ ತಿದ್ದಲು ಪತ್ರಿಕಾರಂಗ ಕೆಲಸ ಮಾಡುತ್ತದೆ.

ಕಾಂಗ್ರೆಸ್ ಪಕ್ಷದ ವತಿಯಿಂದ ಕೊರೋನಾ ಸಮಯದಲ್ಲಿ ಮೇಕೆದಾಟು ಯೋಜನೆ ಜಾರಿಗೆ ಪಾದಯಾತ್ರೆ ಮಾಡಿದ್ದೆವು. ಅದು ನನ್ನ ವೈಯಕ್ತಿಕ ಹಿತಾಸಕ್ತಿಗಾಗಿ ಅಲ್ಲ, ರಾಜ್ಯದ ಜನತೆ ಒಳಿತಿಗೆ ಮಾಡಿದ್ದು, ಆಗ ನಮ್ಮ ವಿರೋಧ ಪಕ್ಷದವರು ಬೇಕಾದಷ್ಟು ಟೀಕೆ ಮಾಡಿದರು. ಮೇಕೆದಾಟು ಪಾದಯಾತ್ರೆ ಮಾಡುವಾಗ ಸಂಗಮ ರಸ್ತೆಯಲ್ಲಿ ತಿರುವು ಇದೆ. ನಾವು ಮತ್ತು ಕಾಂಗ್ರೆಸ್ ಕಾರ್ಯಕರ್ತರು ಮೂರ್ನಾಲ್ಕು ದಿನಗಳಿಂದ ಹಗಲು ರಾತ್ರಿ ಕೆಲಸ ಮಾಡಿ ಬಳಲಿ ಹೋಗಿದ್ದೆವು. ನಮ್ಮ ಕಾರ್ಯಕರ್ತರು ತಳ್ಳುತ್ತಿದ್ದರು, ಒಂದೆರಡು ಕಡೆ ನಾನು ವಾಲಿದ್ದೆ. ಟಿವಿಯವರು ಅದನ್ನು ವಿಡಿಯೋ ಮಾಡಿಕೊಂಡು ವರ್ಷಗಟ್ಟಲೆಯಿಂದ ಕುಡೀತಿದ್ದಾನೆ, ನೋಡಿ ತೂರಾಡುತ್ತಿದ್ದಾನೆ ಎಂದು ಬರೆದರು.

ಈಗಲೂ ಆ ವಿಡಿಯೋ ಸೋಷಿಯಲ್ ಮೀಡಿಯಾಗಳಲ್ಲಿ ಹರಿದಾಡುತ್ತಿದೆ. ಬೇರೆಯವರ ಮಾನಹಾನಿ ಮಾಡಿ ಮಜಾ ತೆಗೆದುಕೊಳ್ಳಲು ನಮ್ಮನ್ನು ಬಳಸಿಕೊಳ್ಳುತ್ತಿದ್ದಾರೆ, ಇದರಿಂದ ಮಾಧ್ಯಮಗಳ ಮೇಲಿರುವ ಗೌರವ ಕಡಿಮೆಯಾಗುತ್ತದೆ, ಸತ್ಯಾಂಶ ತಿಳಿಯದೆ ಸುದ್ದಿ ಮಾಡಬೇಡಿ ಎಂದು ಮನವಿ ಮಾಡಿಕೊಂಡರು.

1 ನನ್ನ ಬಗ್ಗೆ ಟೀಕೆ ಮಾಡಿದ್ದಾರೆ
2 ಸತ್ಯ ವಿಚಾರಿಸಿ
3 ಪರಾಮರ್ಶೆ ಮಾಡಿ





ಉದಯವಾಹಿನಿ ಚಿತ್ರ

**ಎಷ್ಟೋ ಸಂದರ್ಭಗಳಲ್ಲಿ ಪತ್ರಕರ್ತರು ನನ್ನ ಬಗ್ಗೆ ಟೀಕೆ ಮಾಡಿದ್ದಾರೆ, ವಿರುದ್ಧವಾಗಿ ಬರೆದಿದ್ದಾರೆ. ನನ್ನ ವೈರಿಗಳು ಎಂದು ನಾನು ಭಾವಿಸುವುದಿಲ್ಲ, ಕಳೆದ ಆರೇಳು ತಿಂಗಳಿನಿಂದ ನಾನು ಆರೋಗ್ಯ ತಪಾಸಣೆ ಮಾಡಿಸಿರಲಿಲ್ಲ, ಹೀಗಾಗಿ ರೆಗ್ಯುಲರ್ ಚೆಕಪ್ ಗೆಂದು ಇಂದು ಬೆಳಗ್ಗೆ ಆಸ್ಪತ್ರೆಗೆ ಹೋಗಿದ್ದೆ, ಆದರೆ ನಾನು ಆಸ್ಪತ್ರೆಯಲ್ಲಿ ಅಡ್ಮಿಟ್ ಆಗಿದ್ದೇನೆ ಎಂದು ಟಿವಿಯಲ್ಲಿ ಹಾಕಿದ್ದಾರೆ ಎಂದು ನನ್ನ ಖಾಸಗಿ ಕಾರ್ಯದರ್ಶಿಗಳು ಹೇಳುತ್ತಿದ್ದರು.**

**ಹೀಗೆ ಫೇಕ್ ನ್ಯೂಸ್ ನ ನಶೆ ಇತ್ತೀಚೆಗೆ ಹೆಚ್ಚಾಗಿದೆ. ನಿನ್ನೆಯಷ್ಟೇ ನಾವು ನಶಾ ಮುಕ್ತ ಭಾರತ ಕಾರ್ಯಕ್ರಮವನ್ನು ಆಯೋಜಿಸಿದ್ದೆವು. ಫೇಕ್ ನ್ಯೂಸ್ ನ ನಶೆ ಹತ್ತಿಸಿಕೊಳ್ಳಬೇಡಿ, ಯಾರ್ಯಾರೋ ಏನೋ ಹೇಳಿದರು ಎಂದ ತಕ್ಷಣ ಮಾಧ್ಯಮಗಳಲ್ಲಿ ಪ್ರಸಾರ ಮಾಡಬೇಡಿ, ಸತ್ಯ ವಿಚಾರಿಸಿ ಪರಾಮರ್ಶೆ ಮಾಡಿ ಬರೆಯಿರಿ ಎಂದು ಕೇಳಿಕೊಂಡರು.**

### ಪತ್ರಕರ್ತರು ಸಮಾಜದ ಬದಲಾವಣೆಗೆ ಶ್ರಮಿಸುವವರು

**ಪತ್ರಕರ್ತರು ಏನೇ ಬರೆದರೂ, ಹೇಳಿದರೂ ಕೂಡ ಆತ್ಮಸಾಕ್ಷಿಯನ್ನು ಗಮನದಲ್ಲಿಟ್ಟುಕೊಂಡು ಬರೆಯಿರಿ ಎಂದು ಮನವಿ ಮಾಡಿಕೊಳ್ಳುತ್ತೇನೆ. ವಿರೋಧ ಪಕ್ಷ ಮಾಡುವ ಕೆಲಸ ಮಾಧ್ಯಮ ಮಾಡುತ್ತದೆ ಎಂದು ಹಲವರು ಹೇಳುತ್ತಾರೆ. ಆದರೆ ನನ್ನ ವೈಯಕ್ತಿಕ ಅಭಿಪ್ರಾಯ ಪತ್ರಕರ್ತರು ಸಮಾಜದ ಬದಲಾವಣೆಗೆ ಶ್ರಮಿಸುವವರು ಎಂದು. ಆಡಳಿತ ಪಕ್ಷವನ್ನು ತಿದ್ದುವ ಕೆಲಸ ಮಾಡುತ್ತಾರೆ.**

## ನಿಮ್ಮ ಬಾಕಿ ಬಿಲ್ 3 ತಿಂಗಳಲ್ಲಿ ಪಾವತಿಸುತ್ತೇವೆ

**ವಿವಿಧ ಇಲಾಖೆಗಳ ಅಡಿಯಲ್ಲಿ ಪೂರ್ಣಗೊಂಡ ಕಾಮಗಾರಿಗಳಿಗೆ ಗುತ್ತಿಗೆದಾರರಿಗೆ ಬಾಕಿ ಉಳಿದಿರುವ 37,370 ಕೋಟಿ ರೂಪಾಯಿಗೂ ಅಧಿಕ ಮೊತ್ತದ ಬಿಲ್‌ಗಳನ್ನು ಪಾವತಿಸಲು ಮೂರು ತಿಂಗಳ ಕಾಲಾವಕಾಶ ನೀಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗುತ್ತಿಗೆದಾರರಿಗೆ ಮನವಿ ಮಾಡಿದರು.**

**ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಹಾಗೂ ಹಣಕಾಸು ಇಲಾಖೆಯೊಂದಿಗೆ ಶೀಘ್ರದಲ್ಲೇ ಸಭೆ ನಡೆಸಿ ಗುತ್ತಿಗೆದಾರರ ಸಮಸ್ಯೆಗಳನ್ನು ಪರಿಹರಿಸುವುದಾಗಿ ಮುಖ್ಯಮಂತ್ರಿ ಭರವಸೆ ನೀಡಿದರು.**

**ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘ ನಿಯೋಗವು ವಿಧಾನಸೌಧದಲ್ಲಿ ಮುಖ್ಯಮಂತ್ರಿಯನ್ನು ಭೇಟಿ ಮಾಡಿ ಸನ್ಮಾನಿಸಿತು. ಬಳಿಕ, ಹಲವು ಬೇಡಿಕೆಗಳ ಜೊತೆಗೆ ದೀರ್ಘಕಾಲದಿಂದ ಬಾಕಿ ಉಳಿದಿರುವ ಬಿಲ್‌ಗಳನ್ನು ಶೀಘ್ರ ಪಾವತಿಸುವಂತೆ ಮನವಿ ಪತ್ರ ಸಲ್ಲಿಸಿತು. ಸಂಘದ ಅಧ್ಯಕ್ಷ ಆರ್. ಮಂಜುನಾಥ್, ಗುತ್ತಿಗೆದಾರರ ಬೇಡಿಕೆಗಳಿಗೆ ಮುಖ್ಯಮಂತ್ರಿ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಬಾಕಿ ಬಿಲ್‌ಗಳನ್ನು ಪಾವತಿಸಲು ಮೂರು ತಿಂಗಳ ಕಾಲಾವಕಾಶ ಕೋರಿದ್ದಾರೆ ಎಂದು ತಿಳಿಸಿದರು.**

**ಮೊದಲು ಸಂಬಂಧಿತ ಇಲಾಖೆಗಳ ಕಾರ್ಯದರ್ಶಿಗಳೊಂದಿಗೆ, ನಂತರ ಹಣಕಾಸು ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಬಿಲ್‌ಗಳ ಪಾವತಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ ಎಂದು ಅವರು ಹೇಳಿದರು.**

**ಅಗತ್ಯವಿದ್ದರೆ ಸಾಲ ಪಡೆದು ಕೂಡ ಬಾಕಿ ಬಿಲ್‌ಗಳನ್ನು ಪಾವತಿಸಲು ವ್ಯವಸ್ಥೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ನಮಗೆ ಭರವಸೆ ನೀಡಿದ್ದಾರೆ ಎಂದು ಮಂಜುನಾಥ್ ಹೇಳಿದರು.**

### ಗುತ್ತಿಗೆದಾರರ ಸಂಘದ ಅಧ್ಯಕ್ಷರಿಗೆ ಡಿ ಕೆ ಶಿವಕುಮಾರ್ ಭರವಸೆ



## ಕಾವೇರಿ ವನ್ಯಜೀವಿ ಧಾಮದಲ್ಲಿ ಬೋರ್‌ವೆಲ್ ಸಮೀಕ್ಷೆಗೆ ಸಿಎಂ ಡಿಕೆ.ಶಿವಕುಮಾರ್ ಗ್ರೀನ್ ಸಿಗ್ನಲ್!

• ಉದಯವಾಹಿನಿ, ಬೆಂಗಳೂರ

ಬಹುನಿರೀಕ್ಷಿತ ಮೇಕೆದಾಟು ಸಮತೋಲನ ಜಲಾಶಯ ಯೋಜನೆಗೆ ಕರ್ನಾಟಕ ಸರ್ಕಾರ ಮತ್ತೊಂದು ಪ್ರಮುಖ ಹೆಜ್ಜೆ ಇಟ್ಟಿದೆ.

ಕಾವೇರಿ ವನ್ಯಜೀವಿ ಧಾಮದ ವ್ಯಾಪ್ತಿಯಲ್ಲಿ ಉದ್ದೇಶಿತ ಯೋಜನೆಗಾಗಿ ಬೋರ್‌ವೆಲ್ ಸಮೀಕ್ಷೆ ನಡೆಸುವ ಪ್ರಸ್ತಾವನೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅನುಮೋದನೆ ನೀಡಿದ್ದಾರೆ.

ನಡೆದ ರಾಜ್ಯ ವನ್ಯಜೀವಿ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಡಿ.ಕೆ. ಶಿವಕುಮಾರ್ ಅವರು, ಈ ಪ್ರಸ್ತಾವನೆಯನ್ನು ರಾಷ್ಟ್ರೀಯ ವನ್ಯಜೀವಿ ಮಂಡಳಿ ಅನುಮೋದನೆಗಾಗಿ ತಕ್ಷಣ ಕಳುಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೇಕೆದಾಟು ಯೋಜನೆಗೆ ಅಗತ್ಯವಿರುವ ಎಲ್ಲಾ ಅನುಮತಿಗಳನ್ನು ಶೀಘ್ರದಲ್ಲಿ ಪಡೆಯುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಅವರು, ಈ ಯೋಜನೆಗೆ ಸಂಬಂಧಿಸಿದಂತೆ ತಮಿಳುನಾಡು ಸರ್ಕಾರ ಎತ್ತಿರುವ ಆಕ್ಷೇಪಣೆಗಳ ಕುರಿತು ತಾಂತ್ರಿಕ ಅಂಶಗಳನ್ನು ಪರಿಶೀಲಿಸಿ, ಸಾಧ್ಯವಾದಷ್ಟು ಬೇಗ ಸಮಸ್ಯೆಗಳನ್ನು ಬಗೆಹರಿಸುವಂತೆ ಸೂಚಿಸಿದರು. ಸಭೆಯಲ್ಲಿ ಭಾಗವಹಿಸಿದ್ದ ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ಮಾತನಾಡಿ, ಯೋಜನೆ ಜಾರಿಗೊಳಿಸಲು ಉದ್ದೇಶಿಸಿರುವ ಸ್ಥಳದಲ್ಲಿನ ಮಣ್ಣಿನ ಗುಣಮಟ್ಟ, ಬಂಡೆಗಳ ಸ್ಥಿತಿ ಹಾಗೂ ಭೂವೈಜ್ಞಾನಿಕ ಮಾಹಿತಿಯನ್ನು ತಿಳಿದುಕೊಳ್ಳಲು ಬೋರ್‌ಹೋಲ್


ಉದಯವಾಹಿನಿ ಚಿತ್ರ

ಸಮೀಕ್ಷೆ ನಡೆಸಲಾಗುತ್ತದೆ. ಈ ಸಮೀಕ್ಷೆಯ ವರದಿ ಆಧರಿಸಿ ಯೋಜನೆಯ ಸವಿಸ್ತಾರ ವರದಿ ಸಿದ್ಧಪಡಿಸಲಾಗುತ್ತದೆ ಎಂದು ಹೇಳಿದ್ದಾರೆ.

ಆದರೆ, ಸಮೀಕ್ಷೆ ಆರಂಭಿಸುವ ಮುನ್ನ ರಾಷ್ಟ್ರೀಯ ವನ್ಯಜೀವಿ ಮಂಡಳಿ, ಅರಣ್ಯ ಇಲಾಖೆ ಹಾಗೂ ಕೇಂದ್ರ ಸರ್ಕಾರದ ಅನುಮತಿ ಕಡ್ಡಾಯವಾಗಿದೆ. ಸಮೀಕ್ಷೆಗಾಗಿ ಕೇವಲ 0.003 ಹೆಕ್ಟೇರ್ ಅರಣ್ಯ ಪ್ರದೇಶವನ್ನು ಬಳಸಲು ಪ್ರಸ್ತಾವಿಸಲಾಗಿದೆ.

**ಈ ಪ್ರಸ್ತಾವನೆಗೆ ಕೇಂದ್ರ ಸರ್ಕಾರದಿಂದ ಶೀಘ್ರ ಅನುಮೋದನೆ ಪಡೆಯುವ ಅಗತ್ಯಬಿದ್ದರೆ ಅಗತ್ಯವಿದ್ದರೆ ತಾವು ನೇರವಾಗಿ ಕೇಂದ್ರ ಸರ್ಕಾರದೊಂದಿಗೆ ಮಾತುಕತೆ ನಡೆಸಲು ಸಿದ್ಧ ಎಂದು ಡಿ.ಕೆ. ಶಿವಕುಮಾರ್ ಅವರು ಸಭೆಯಲ್ಲಿ ತಿಳಿಸಿದರು . ಡಿ.ಕೆ. ಶಿವಕುಮಾರ್**

## ಪತ್ರಿಕಾ ವಿತರಕರ ಜೊತೆ ಪತ್ರಿಕಾ ದಿನ ಆಚರಸಿದ ಕೆ.ವಿ.ಪ್ರಭಾಕರ್

• ಉದಯವಾಹಿನಿ, ಬೆಂಗಳೂರು

ಪತ್ರಿಕಾ ವಿತರಕರು ಮಾಧ್ಯಮ ಸಂಸ್ಥೆಗಳ ನರನಾಡಿಗಳಿಗೆ ಆಮ್ಲಜನಕ ಇದ್ದಂತೆ. ಪ್ರತಿನಿತ್ಯ ಯಾವುದೇ ಹವಾಮಾನವನ್ನೂ ಲೆಕ್ಕಿಸದೆ ಪತ್ರಿಕೆಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವ ಅವರ ಸೇವೆ ಅತ್ಯಂತ ಶ್ಲಾಘನೀಯ ಎಂದು ಕೆ.ವಿ.ಪ್ರಭಾಕರ್ ಹೇಳಿದರು.

ನಿಕಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಅವರು ಪತ್ರಿಕಾ ವಿತರಕರ ಜೊತೆ ಇಂದು ವಿನೂತನವಾಗಿ ಪತ್ರಿಕಾ ದಿನವನ್ನು ಆಚರಿಸಿದರು.

ರಾಜ್ಯ ಪತ್ರಿಕಾ ವಿತರಕರ ಒಕ್ಕೂಟದ ಗಾಂಧಿ ನಗರ ಶಾಖೆ ಮೆಜೆಸ್ಟಿಕ್ ನಲ್ಲಿ ಇಂದು ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಭಾಕರ್ ಅವರು ಸಡಗರದಿಂದ ಭಾಗವಹಿಸಿದ್ದರು.

ಕೇಕ್ ಕತ್ತರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಅವರು ಪತ್ರಿಕೋದ್ಯಮದಲ್ಲಿ ತಾವು ನಡೆದು ಬಂದ ಹಾದಿಯನ್ನು ವಿವರಿಸಿದರು. ಮನೆ ಮನೆಗೆ ಪತ್ರಿಕೆಗಳನ್ನು ವಿತರಿಸುವ ಮೂಲಕವೇ ಪತ್ರಿಕೋದ್ಯಮಕ್ಕೆ ಕಾಲಿಟ್ಟು ಮುಂದೆ ಬಂದು ಮುಖ್ಯಮಂತ್ರಿಗಳ ಮಧ್ಯಮ ಸಲಹೆಗಾರರಾದ ತಮ್ಮ ಪಯಣವನ್ನು ಸ್ಮರಿಸಿದರು. ಮುಖ್ಯಮಂತ್ರಿಗಳಾಗಿದ್ದ ಅವಧಿಯಲ್ಲಿ ಸಿದ್ದರಾಮಯ್ಯ ಅವರು ಪತ್ರಕರ್ತರು ಹಾಗೂ ಪತ್ರಿಕಾ ವಿತರಕರಿಗೆ ನೆರವು ಒದಗಿದ್ದನ್ನು ಸ್ಮರಿಸಿದರು.

ಇದೇ ವೇಳೆ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಅವರ ಹುಟ್ಟುಹಬ್ಬವನ್ನೂ ಆಚರಿಸಿ ಶುಭಾಶಯ ಕೋರಲಾಯಿತು.


ಉದಯವಾಹಿನಿ ಚಿತ್ರ

## ವಿಟಿಯು ಹೊಸ ದಾಖಲೆ: ಪರೀಕ್ಷೆ ಮುಗಿದ ಕೇವಲ 5 ನಿಮಿಷದಲ್ಲಿ ಫಲಿತಾಂಶ ಪ್ರಕಟ!

• ಉದಯವಾಹಿನಿ, ಬೆಂಗಳೂರು

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಕಾರ್ಯಕ್ಷಮತೆಯಲ್ಲಿ ಹೊಸ ರಾಷ್ಟ್ರೀಯ ದಾಖಲೆಯನ್ನು ನಿರ್ಮಿಸಿದ್ದು, 6ನೇ ಸೆಮಿಸ್ಟರ್ ಇಂಜಿನಿಯರಿಂಗ್ ಪರೀಕ್ಷೆ ಮುಕ್ತಾಯಗೊಂಡ ಕೇವಲ ಐದು ನಿಮಿಷಗಳಲ್ಲಿ ಫಲಿತಾಂಶವನ್ನು ಪ್ರಕಟಿಸಿದೆ. ಪರೀಕ್ಷೆಯು ಸಂಜೆ 5.30ಕ್ಕೆ ಮುಕ್ತಾಯಗೊಂಡಿತ್ತು. 2025-2026ನೇ ಶೈಕ್ಷಣಿಕ ವರ್ಷದ ಒಟ್ಟು 60,856 ವಿದ್ಯಾರ್ಥಿಗಳು ಈ ಪರೀಕ್ಷೆಗೆ ಹಾಜರಾಗಿದ್ದರು. ಕಳೆದ ತಿಂಗಳು ಅಂತಿಮ ಸೆಮಿಸ್ಟರ್ ಇಂಜಿನಿಯರಿಂಗ್ ಪರೀಕ್ಷೆಗೆ ಹಾಜರಾಗಿದ್ದ 56,192 ವಿದ್ಯಾರ್ಥಿಗಳ ಫಲಿತಾಂಶವನ್ನು ಕೇವಲ 10 ನಿಮಿಷಗಳಲ್ಲಿ ಪ್ರಕಟಿಸುವ ಮೂಲಕ ನಿರ್ಮಿಸಿದ್ದ ತನ್ನದೇ ದಾಖಲೆಯನ್ನು ವಿಟಿಯು ಇದೀಗ ಮುರಿದಿದೆ.ಕಳೆದ ಮೂರು ವರ್ಷಗಳಲ್ಲಿ ಆರನೇ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶ ಪ್ರಕಟಿಸಲು ಕ್ರಮವಾಗಿ 10 ದಿನ, 11 ದಿನ ಮತ್ತು 10 ದಿನಗಳು ಬೇಕಾಗಿತ್ತು. ವಿದ್ಯಾರ್ಥಿಗಳ ಸಂಖ್ಯೆಯನ್ನು ಪರಿಗಣಿಸಿದರೆ, 2024-2025ರಲ್ಲಿ 58,232, 2023-2024ರಲ್ಲಿ 49,997 ಹಾಗೂ 2022-2023ರಲ್ಲಿ 41,835 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು.

# ನಮ್ಮ ಮೆಟ್ರೋದಲ್ಲಿ ಸರಣಿ ದೋಷ: ತನಿಖೆ ನಡೆಸಿ, ವರದಿ ಸಲ್ಲಿಸಿ

## ಕಳೆದ ಎರಡೂವರೆ ವರ್ಷಗಳಲ್ಲಿ ಸಂಭವಿಸಿರುವ ವೈಫಲ್ಯಗಳ ಕುರಿತು ತಕ್ಷಣವೇ ವಿವರವಾದ ತನಿಖಾ ಆದೇಶ

• ಉದಯವಾಹಿನಿ, ಬೆಂಗಳೂರ

ನಮ್ಮ ಮೆಟ್ರೋ ಜಾಲದಲ್ಲಿ ಇತ್ತೀಚೆಗೆ ಸರಣಿ ತಾಂತ್ರಿಕ ದೋಷಗಳು ಹಾಗೂ ಸೇವಾ ವ್ಯತ್ಯಯಗಳು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿರುವ ಬೆನ್ನಲ್ಲೇ ಕೇಂದ್ರ ರೈಲ್ವೆ ಸುರಕ್ಷತಾ ಮುಖ್ಯ ಆಯುಕ್ತರು ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ತನಿಖೆ ನಡೆಸಿ, ವರದಿ ಸಲ್ಲಿಸುವಂತೆ ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತಕ್ಕೆ ಸೂಚನೆ ನೀಡಿದ್ದಾರೆ.

ಕಳೆದ ಎರಡೂವರೆ ವರ್ಷಗಳಲ್ಲಿ ಸಂಭವಿಸಿರುವ ಎಲ್ಲಾ ತಾಂತ್ರಿಕ ವೈಫಲ್ಯಗಳ ಕುರಿತು ತಕ್ಷಣವೇ ವಿವರವಾದ ತನಿಖಾ ವರದಿಯನ್ನು ಸಲ್ಲಿಸುವಂತೆ ಸಂಸ್ಥೆಗೆ ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ. ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಅವರು, ಪ್ರಯಾಣಿಕರ ಪರವಾಗಿ ಈ ನಿರಂತರ ಅವ್ಯವಸ್ಥೆಯ ಕುರಿತು ಅಧಿಕೃತವಾಗಿ ತನಿಖೆಗೆ ಒತ್ತಾಯಿಸಿ ಪತ್ರ ಬರೆದ ಬಳಿಕ ಈ ಮಹತ್ವದ ಬೆಳವಣಿಗೆ ನಡೆದಿದೆ. ಜೂನ್ 23 ರಂದು ನಮ್ಮ ಮೆಟ್ರೋದ ಪರ್ಪಲ್ ಲೈನ್‌ನಲ್ಲಿ (ನೇರಳೆ ಮಾರ್ಗ) ಉಂಟಾಗಿದ್ದ ತಾಂತ್ರಿಕ ದೋಷ ಹಾಗೂ ಸೇವಾ ವ್ಯತ್ಯಯದ ಕುರಿತು ಸಂಸದ ತೇಜಸ್ವಿ ಸೂರ್ಯ ಅವರು ಜೂನ್ 25 ರಂದು ರೈಲ್ವೆ ಸುರಕ್ಷತಾ ಆಯುಕ್ತರಿಗೆ ಪತ್ರ ಬರೆದು ತನಿಖೆಗೆ ಆಗ್ರಹಿಸಿದ್ದರು. ಈ ದೂರಿಗೆ ಅಧಿಕೃತವಾಗಿ ಉತ್ತರಿಸಿರುವ ಮುಖ್ಯ ರೈಲ್ವೆ ಸುರಕ್ಷತಾ ಆಯುಕ್ತರಾದ ಜನಕ್ ಕುಮಾರ್ ಗರ್ಗ್ ಅವರು, ಜೂನ್ 23ರ ಘಟನೆ ಮಾತ್ರವಲ್ಲದೆ, ಕಳೆದ ಮೂರು ವರ್ಷಗಳಲ್ಲಿ ನಮ್ಮ ಮೆಟ್ರೋ ಕಾರ್ಯಾಚರಣೆಯಲ್ಲಿ ಉಂಟಾಗಿರುವ ಎಲ್ಲಾ ಸರಣಿ ವ್ಯತ್ಯಯಗಳ ಕುರಿತು ಸಮಗ್ರ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚಿಸಿದ್ದಾರೆ.

ಇದರೊಂದಿಗೆ ಮೆಟ್ರೋ ರೈಲ್ವೆ ವ್ಯವಸ್ಥೆಯ ಕಾರ್ಯಾಚರಣೆ ಮತ್ತು ನಿರ್ವಹಣಾ ದಕ್ಷತೆಯ ಬಗ್ಗೆ ಆಡಿಟಿಂಗ್ ನಡೆಸಲು ಆದೇಶಿಸಲಾಗಿದೆ.ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಕೇಂದ್ರ ರೈಲ್ವೆ ಸುರಕ್ಷತಾ ಆಯುಕ್ತರ ಪತ್ರವನ್ನು ಹಂಚಿಕೊಂಡಿರುವ ತೇಜಸ್ವಿ ಸೂರ್ಯ ಅವರು, ಈ ಪತ್ರವನ್ನು ಬಿಎಂಆರ್‌ಸಿಎಲ್ ಮತ್ತು ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅವರಿಗೆ ಟ್ಯಾಗ್ ಮಾಡುವ ಮೂಲಕ ರಾಜ್ಯ ಸರ್ಕಾರ ಹಾಗೂ ಬಿಎಂಆರ್‌ಸಿಎಲ್ ಆಡಳಿತ ಮಂಡಳಿಯ ವಿರುದ್ಧ ತೀವ್ರ ಅಸಮಾಧಾನ ಹೊರಹಾಕಿದ್ದಾರೆ.

ಪ್ರಯಾಣಿಕರ ಸುರಕ್ಷತೆ ಮತ್ತು ಅನುಕೂಲತೆಯು ಬಿಎಂಆರ್‌ಸಿಎಲ್‌ನ ಅತ್ಯುನ್ನತ ಆದ್ಯತೆಯಾಗಿರಬೇಕು. ನಮ್ಮ ಮೆಟ್ರೋದ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಜವಾಬ್ದಾರರಾಗಿರುವ ಪ್ರಾಧಿಕಾರವಾಗಿ, ಸುರಕ್ಷಿತ, ವಿಶ್ವಾಸಾರ್ಹ ಮತ್ತು ತಡೆರಹಿತ ಸೇವೆಗಳನ್ನು ಖಚಿತಪಡಿಸಿಕೊಳ್ಳಲು ರಾಜ್ಯ ಸರ್ಕಾರವು ಸಂಪೂರ್ಣ ಜವಾಬ್ದಾರಿಯನ್ನು ಹೊಂದಿದೆ.


ಉದಯವಾಹಿನಿ ಚಿತ್ರ

### ಆಡಳಿತ ಮಂಡಳಿಯ ವಿರುದ್ಧ ತೀವ್ರ ಅಸಮಾಧಾನ

**ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಕೇಂದ್ರ ರೈಲ್ವೆ ಸುರಕ್ಷತಾ ಆಯುಕ್ತರ ಪತ್ರವನ್ನು ಹಂಚಿಕೊಂಡಿರುವ ಸಂಸದ ತೇಜಸ್ವಿ ಸೂರ್ಯ, ಈ ಪತ್ರವನ್ನು ಬಿಎಂಆರ್‌ಸಿಎಲ್ ಮತ್ತು ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣಭೈರೇಗೌಡ ಅವರಿಗೆ ಟ್ಯಾಗ್ ಮಾಡುವ ಮೂಲಕ ರಾಜ್ಯ ಸರ್ಕಾರ ಹಾಗೂ ಬಿಎಂಆರ್‌ಸಿಎಲ್ ಆಡಳಿತ ಮಂಡಳಿಯ ವಿರುದ್ಧ ತೀವ್ರ ಅಸಮಾಧಾನ ಹೊರಹಾಕಿದ್ದಾರೆ.**

**2024ರಿಂದೀಚೆಗೆ ನಮ್ಮ ಮೆಟ್ರೋದಲ್ಲಿ ಬರೋಬ್ಬರಿ 20 ಬಾರಿ ಸೇವಾ ವ್ಯತ್ಯಯಗಳು ವರದಿಯಾಗಿವೆ. ಇದು ವ್ಯವಸ್ಥಿತ ವೈಫಲ್ಯಗಳನ್ನು ಎತ್ತಿ ತೋರಿಸುತ್ತಿದ್ದು, ತಕ್ಷಣವೇ ಸರಿಪಡಿಸುವ ಕ್ರಮಗಳು ಅಗತ್ಯವಾಗಿವೆ. ವ್ಯವಸ್ಥಿತ ವೈಫಲ್ಯಗಳನ್ನು ಸರಿಪಡಿಸಲು ಮತ್ತು ಪ್ರಯಾಣಿಕರ ವಿಶ್ವಾಸವನ್ನು ಪುನಃ ಸ್ಥಾಪಿಸಲು ನಾನು ಒತ್ತಾಯಿಸುತ್ತೇನೆ ಎಂದು ತಿಳಿಸಿದ್ದಾರೆ.**
**-ಸಂಸದ ತೇಜಸ್ವಿ ಸೂರ್ಯ**

ಅಂತರಾಳದಿಂದ...
EDITORIAL

# ದೋಷ ರಹಿತ ಮತದಾರರ ಪಟ್ಟಿ ಪ್ರಜಾಪ್ರಭುತ್ವದ ಆಧಾರಸ್ತಂಭ



ರಾಜ್ಯದಲ್ಲಿ ಆರಂಭವಾಗಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್-2026) ಪ್ರಕ್ರಿಯೆಯು ಪ್ರಜಾಪ್ರಭುತ್ವದ ಸುಧಾರಣೆಯ ನಿಟ್ಟಿನಲ್ಲಿ ಅತ್ಯಂತ ಮಹತ್ವದ ಹಾಗೂ ಸ್ವಾಗತಾರ್ಹ ಹೆಜ್ಜೆಯಾಗಿದೆ. 2002ರ ಸುದೀರ್ಘ ಅವಧಿಯ ಬಳಿಕ ಇಂತಹದೊಂದು ಬೃಹತ್ ಪ್ರಕ್ರಿಯೆ ನಡೆಯುತ್ತಿದ್ದು,ಇದು ದೇಶದ ಪ್ರಜಾಸತ್ತಾತ್ಮಕ ವ್ಯವಸ್ಥೆಯನ್ನು ಮತ್ತಷ್ಟು ಗಟ್ಟಿಗೊಳಿಸಲಿದೆ.

ಸುಮಾರು 5.54 ಕೋಟಿ ಮತದಾರರನ್ನು ತಲುಪುವ ಈ ಅಭಿಯಾನದ ಮೂಲ ಉದ್ದೇಶ ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಹಕ್ಕು ಸಿಗುವಂತೆ ಮಾಡುವುದು ಹಾಗೂ ನಿಖರವಾದ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದಾಗಿದೆ. ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ನಿರ್ಣಾಯಕ ಹಂತವಾಗಿ ಎಲ್ಲಾ ಮತಗಟ್ಟೆ (ಬಿಎಲ್‌ಒ) ಅಧಿಕಾರಿಗಳು ಮನೆ ಮನೆಗೆ ಭೇಟಿ ಆರಂಭಿಸಿದ್ದಾರೆ. ಇವರು ಮೊದಲ ಹಂತದಲ್ಲಿ ಸುಮಾರು 5.54 ಕೋಟಿ ಮತದಾರರ ಎನ್ಯುಮರೇಶನ್ ಫಾರ್ಮ್ (ಗಣತಿ ನಮೂನೆ) ಭರ್ತಿ ಮಾಡಿಕೊಳ್ಳಲಿದ್ದಾರೆ. ತಾರ್ಕಿಕ ವ್ಯತ್ಯಾಸಗಳ (ಲಾಜಿಕಲ್ ಡಿಸ್ಕಿಪೆನ್ಸಿ) ಹೆಸರಿನಲ್ಲಿ ಮತಗಳನ್ನು ಅನಗತ್ಯವಾಗಿ ಕೈಬಿಡಲಾಗುವುದಿಲ್ಲ ಎಂಬ ಮುಖ್ಯ ಚುನಾವಣಾಧಿಕಾರಿಯವರ ಭರವಸೆಯು ಪ್ರಕ್ರಿಯೆಯ ಪಾರದರ್ಶಕತೆಗೆ ಸಾಕ್ಷಿಯಾಗಿದೆ.

ಆದರೂ ಈ ಬೃಹತ್ ಕಾರ್ಯಸೂಚಿಯ ಸುತ್ತ ಕೆಲವು ರಾಜಕೀಯ ವಿವಾದಗಳು ಮತ್ತು ಅನುಮಾನಗಳು ಸೃಷ್ಟಿಯಾಗಿರುವುದು ಸುಳ್ಳಲ್ಲ. ಕೆಲವು ರಾಜಕೀಯ ಪಕ್ಷಗಳು, ಸಮಾಜದ ಒಂದು ವರ್ಗದ ಮಂದಿ ಎಸ್ ಐಆರ್‌ನಿಂದ ಅರ್ಹ ಮತದಾರರು ಮತದಾರ ಪಟ್ಟಿಯಿಂದ ಹೊರಗುಳಿಯುವ ಆತಂಕ ವ್ಯಕ್ತಪಡಿಸಿದ್ದಾರೆ.

ಆದರೆ ಚುನಾವಣ ಆಯೋಗದ ಸ್ಪಷ್ಟನೆ, ನ್ಯಾಯಾಲಯಗಳು ಎಸ್‌ಐಆರ್ ಪರವಾಗಿ ನೀಡಿರುವ ತೀರ್ಪುಗಳು ಜನರ ಸಂಶಯಗಳನ್ನು ನಿವಾರಿಸುವಂತಿವೆ.

ಈ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳು ಕೇವಲ ವಿರೋಧಕ್ಕಾಗಿ ವಿರೋಧ ಮಾಡುವ ರಾಜಕಾರಣವನ್ನು ಬದಿಗಿಟ್ಟು, ಈ ಪ್ರಕ್ರಿಯೆಯಲ್ಲಿ ರಚನಾತ್ಮಕವಾಗಿ ಪಾಲ್ಗೊಳ್ಳಬೇಕಿದೆ. ಈಗಾಗಲೇ 1.15 ಲಕ್ಷಕ್ಕೂ ಅಧಿಕ ಬೂತ್ ಏಜೆಂಟರನ್ನು ನೇಮಿಸಿರುವ ಪಕ್ಷಗಳು, ಅರ್ಹ ಮತದಾರರ ಹೆಸರುಗಳು ಕೈಬಿಟ್ಟು ಹೋಗದಂತೆ ಜಾಗ್ರತೆ ವಹಿಸುವ ಮೂಲಕ ಆಯೋಗಕ್ಕೆ ನೆರವಾಗಬೇಕು.

ಮತದಾರರ ಪಟ್ಟಿ ಪರಿಷ್ಕರಣೆ ಎಂದೋ ಆಗಬೇಕಾಗಿದ್ದುದು ಈಗಲಾದರೂ ಆಗುತ್ತಿದ್ದು, ಸ್ವಾಗತಿಸಬೇಕಾಗಿದೆ.

ಅಂತಿಮವಾಗಿ, ಈ ಮಹತ್ಕಾರ್ಯ ಯಶಸ್ವಿಯಾಗಬೇಕಾದರೆ ನಾಗರಿಕರ ಜವಾಬ್ದಾರಿಯೂ ಅಷ್ಟೇ ಮುಖ್ಯ. ಮನೆಗೆ ಬರುವ ಬಿಎಲ್‌ಒಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿ, ನಿಖರ ಮಾಹಿತಿ ನೀಡುವುದು ಪ್ರತಿಯೊಬ್ಬರ ಕರ್ತವ್ಯ. ಚುನಾವಣ ಆಯೋಗವು ಕೂಡ ಯಾವುದೇ ರಾಜಕೀಯ ಒತ್ತಡಗಳಿಗೆ ಮಣಿಯದೆ, ತಾಂತ್ರಿಕ ಲೋಪದೋಷಗಳಿಲ್ಲದಂತೆ ಈ ಪ್ರಕ್ರಿಯೆಯನ್ನು ಅತ್ಯಂತ ನಿಷ್ಪಕ್ಷವಾಗಿ ಮುನ್ನಡೆಸಬೇಕಿದೆ. ನಿಖರವಾದ ಮತದಾರರ ಪಟ್ಟಿಯೇ ಸುಭದ್ರ ಪ್ರಜಾಪ್ರಭುತ್ವದ ಮೊದಲ ಹೆಜ್ಜೆ.

## ಕಾನೂನು ಬದ್ಧವಾಗಿಯೇ ಪ್ರಕ್ರಿಯೆ

ಪ್ರತಿ ಮತಗಟ್ಟೆಗೆ ಒಬ್ಬರಂತೆ ಒಟ್ಟು 59,050 ಬಿಎಲ್‌ಒಗಳು ಮನೆ ಮನೆಗೆ ಭೇಟಿ ಕೈಗೊಳ್ಳಲಿದ್ದು, ಬಿಎಲ್‌ಒಗಳ ಸಹಿತ ಈ ಪ್ರಕ್ರಿಯೆಯಲ್ಲಿ 68 ಸಾವಿರಕ್ಕೂ ಅಧಿಕ ಅಧಿಕಾರಿ ಹಾಗೂ ಸಿಬಂದಿ ನೇರವಾಗಿ ಭಾಗಿಯಾಗಿದ್ದಾರೆ.

ಚುನಾವಣಾ ಆಯೋಗವು ತನ್ನ ಸಂವಿಧಾನದತ್ತ ಅಧಿಕಾರದ ಅಡಿಯಲ್ಲಿ ಕಾನೂನು ಬದ್ಧವಾಗಿಯೇ ಈ ಪ್ರಕ್ರಿಯೆಯನ್ನು ಕೈಗೆತ್ತಿಕೊಂಡಿದೆ. 2026ರ ಅಕ್ಟೋಬರ್ 10ಕ್ಕೆ 18 ವರ್ಷ ತುಂಬುವ ಹೊಸ ಮತದಾರರಿಗೂ ಹೆಸರು ನೋಂದಾಯಿಸಲು ಅವಕಾಶ ನೀಡಿರುವುದು ಯುವ ಪೀಳಿಗೆಯನ್ನು ಮುಖ್ಯವಾಹಿನಿಗೆ ತರಲು ಸಹಕಾರಿಯಾಗಿದೆ.

ಜೂನ್ 30ರಿಂದ ಜುಲೈ 29ರ ವರೆಗಿನ ಮನೆ ಮನೆ ಸಮೀಕ್ಷೆಯ ಅವಧಿಯಲ್ಲಿ ನಾಗರಿಕರು ಯಾವುದೇ ದಾಖಲೆಗಳನ್ನು ಒದಗಿಸುವ ಅಗತ್ಯವಿಲ್ಲ ಮತ್ತು ಬಿಎಲ್‌ಒಗಳು ಕೂಡ ದಾಖಲೆ ಕೇಳುವಂತಿಲ್ಲ ಎಂದು ಆಯೋಗವು ಸ್ಪಷ್ಟಪಡಿಸಿರುವುದು ಸಾರ್ವಜನಿಕರ ಗೊಂದಲಗಳನ್ನು ನಿವಾರಿಸಿದೆ.

# ಮನಸ್ಸಿನಲ್ಲಿ ಮತ್ತೆ ಮತ್ತೆ ನಕಾರಾತ್ಮಕ ಆಲೋಚನೆಗಳು ಬರುವುದೇಕೆ? ಈ ತೊಂದರೆಯಿಂದ ಪಾರಾಗುವುದು ಹೇಗೆ?



ಸ್ನೇಹಿತರಿಗೆ ಕಳುಹಿಸಿದ ಸಂದೇಶವು ದೀರ್ಘಕಾಲದವರೆಗೆ ಉತ್ತರಿಸದಿದ್ದರೆ ಅವರು ನಮ್ಮ ಮೇಲೆ ಕೋಪಗೊಂಡಿದ್ದಾರೆಯೇ ಎಂದು ನಾವು ತಿಳಿಯುತ್ತೇವೆ. ಕೆಲಸದ ಸ್ಥಳದಲ್ಲಿ ವ್ಯವಸ್ಥಾಪಕರು ಸಣ್ಣ ತಪ್ಪನ್ನು ಎತ್ತಿ ತೋರಿಸಿದರೆ, ನಾನು ನನ್ನ ಕೆಲಸವನ್ನು ಕಳೆದುಕೊಳ್ಳಬಹುದು ಎಂಬ ಭಯವು ನಮ್ಮನ್ನು ಆವರಿಸಿಕೊಳ್ಳುತ್ತದೆ. ಸೌಮ್ಯ ತಲೆನೋವಿನೊಂದಿಗೆ ಸಹ, ಅದು ಗಂಭೀರ, ಮಾರಣಾಂತಿಕ ಕಾಯಿಲೆಯ ಲಕ್ಷಣವಾಗಿರಬಹುದು ಎಂದು ಭಯಪಡುತ್ತಾ ನಾವು ಪ್ರತಿಯೊಂದನ್ನೂ ಹುಡುಕಲು ಪ್ರಾರಂಭಿಸಬಹುದು. ಬಹುತೇಕರು ತಮ್ಮ ಜೀವನದಲ್ಲಿ ಈ ರೀತಿ ಅನೇಕ ಬಾರಿ ಎದುರಿಸಿರಬಹುದು. ವಾಸ್ತವದಲ್ಲಿ ಯಾವುದೇ ದೊಡ್ಡ ಸಮಸ್ಯೆ ಇಲ್ಲದಿರಬಹುದು. ಆದರೆ, ನಮ್ಮ ಮನಸ್ಸು ಈಗಾಗಲೇ ಒಂದು ದುರಂತ ಸನ್ನಿವೇಶವನ್ನು ಕಲ್ಪಿಸಿಕೊಂಡಿದೆ. ಆತಂಕದ ಪ್ರಮುಖ ಲಕ್ಷಣವೆಂದರೆ ವಾಸ್ತವಕ್ಕೆ ವಿರುದ್ಧವಾಗಿ ಕೆಟ್ಟ ಸಂಭವನೀಯ ಫಲಿತಾಂಶವನ್ನು ಕಲ್ಪಿಸಿಕೊಳ್ಳುವುದು ಹಾಗೂ ಇದು ಅನಿವಾರ್ಯವಾಗಿ ಸಂಭವಿಸುತ್ತದೆ ಎಂದು ನಮ್ಮನ್ನು ನಾವು ಮನವರಿಕೆ ಮಾಡಿಕೊಳ್ಳುವುದು. ಹಾರ್ವರ್ಡ್ ವೈದ್ಯಕೀಯ ಶಾಲೆ ಮತ್ತು (ರಾಷ್ಟ್ರೀಯ ಆರೋಗ್ಯ ಸಂಸ್ಥೆಗಳು) ನಡೆಸಿದ ಹಲವು ಅಧ್ಯಯನಗಳು ಈ ಮನಸ್ಥಿತಿ ಏಕೆ ಬೆಳೆಯುತ್ತದೆ ಮತ್ತು ನಾವು ಅದನ್ನು ಹೇಗೆ ಜಯಿಸಬಹುದು ಎಂಬುದರ ಕುರಿತು ಬೆಳಕು ಚೆಲ್ಲುತ್ತವೆ. ಮಾನವ ಮೆದುಳು ಅದರ ಮೂಲದಲ್ಲಿ ಅಪಾಯದಿಂದ ನಮ್ಮನ್ನು ರಕ್ಷಿಸಲು ವಿನ್ಯಾಸಗೊಳಿಸಲಾದ ಒಂದು ಅದ್ಭುತ ಅಂಗವಾಗಿದೆ. ಪ್ರಾಚೀನ ಕಾಲದಲ್ಲಿ ಮಾನವರು ಕಾಡುಗಳಲ್ಲಿ ವಾಸಿಸುತ್ತಿದ್ದಾಗ ಬದುಕುಳಿಯಲು 'ಎಚ್ಚರಿಕೆ ವ್ಯವಸ್ಥೆ' ಅತ್ಯಗತ್ಯವಾಗಿತ್ತು. ಸ್ವಯಂ ಸಂರಕ್ಷಣೆಗಾಗಿ ಈ ಪ್ರವೃತ್ತಿಯು ಅಪಾಯವನ್ನು ಎದುರಿಸಿದಾಗ ನಾವು ಓಡಿಹೋಗಲು ಇಲ್ಲವೇ ಹೋರಾಡಲು ಸಹಾಯ ಮಾಡಿತು. ನಡೆಸಿದ ಅಧ್ಯಯನಗಳು ಈ ರಕ್ಷಣಾತ್ಮಕ ಪ್ರವೃತ್ತಿಯು ಅತಿರೇಕಕ್ಕೆ ಹೋದಾಗ ಆತಂಕ ಉಂಟಾಗುತ್ತದೆ ಎಂದು ಸೂಚಿಸುತ್ತದೆ. ನಮ್ಮ ಮೆದುಳಿನ ಅಪಾಯವನ್ನು ಪತ್ತೆಹಚ್ಚುವ ಪ್ರದೇಶವು ನಿರಂತರವಾಗಿ ಕಾರ್ಯನಿರ್ವಹಿಸಲು ಪ್ರಾರಂಭಿಸುತ್ತದೆ. ಇದು ಅನಗತ್ಯವಾಗಿದ್ದರೂ ಕೂಡ ಇದರ ಪರಿಣಾಮವಾಗಿ ಒಂದು ಘಟನೆ ಸಂಭವಿಸುವ ಕೇವಲ ಸಾಧ್ಯತೆಯನ್ನು ತಿಳಿಸುತ್ತದೆ ಎಂದು ಖಚಿತವಾಗಿ ಮೆದುಳು ತಪ್ಪಾಗಿ ಭಾವಿಸುತ್ತದೆ. ಯಾವುದೇ ಪುರಾವೆಗಳ ಅನುಪಸ್ಥಿತಿಯಲ್ಲಿಯೂ ಸಹ, ಆತಂಕವು ಕಲ್ಪಿತ ಭಯಗಳನ್ನು ನಿಜವೆಂದು ಭಾವಿಸುವಂತೆ ಪರಿವರ್ತಿಸುತ್ತದೆ. ಆತಂಕವು ಭವಿಷ್ಯದ ಭಯದ ಮೇಲೆ ಬೆಳೆಯುತ್ತದೆ. ಆದ್ದರಿಂದ, ನಿಮ್ಮ ಗಮನ ಅಲೆದಾಡಿದಾಗ ಮತ್ತು ಅನಗತ್ಯ ಭಯ ಉಂಟಾದಾಗ, ಆಳವಾದ ಉಸಿರಾಟವನ್ನು ಅಭ್ಯಾಸ ಮಾಡಿ. ಆಳವಾಗಿ ಉಸಿರು ತೆಗೆದುಕೊಳ್ಳುವುದು ಹಾಗೂ ಬಿಡುವುದು. ನಿಮ್ಮ ಸುತ್ತಮುತ್ತಲಿನ ಪ್ರದೇಶಗಳನ್ನು ಗಮನಿಸಿ ಹಾಗೂ ನಿಮ್ಮ ಗಮನವನ್ನು ಪ್ರಸ್ತುತ ಕ್ಷಣಕ್ಕೆ ತನ್ನಿ. ಸಣ್ಣಪುಟ್ಟ ದೈಹಿಕ ಬದಲಾವಣೆಯನ್ನು ನೀವು ಗಮನಿಸಿದರೂ ಆನ್‌ಲೈನ್‌ನಲ್ಲಿ ರೋಗಗಳ ಬಗ್ಗೆ ಮಾಹಿತಿಯನ್ನು ಹುಡುಕುವುದನ್ನು ತಕ್ಷಣ ನಿಲ್ಲಿಸಬೇಕಾಗುತ್ತದೆ.

ಈ ರೀತಿ ಮಾಡುವುದರಿಂದ ಪರಿಹಾರವನ್ನು ನೀಡದೆ ನಿಮ್ಮ ಭಯವನ್ನು ಹಲವು ಪಟ್ಟು ಹೆಚ್ಚಿಸುತ್ತದೆ. ಅದೇ ರೀತಿಯಾಗಿದೆ 'ನಾನು ಚೆನ್ನಾಗಿರುತ್ತೇನೆ, ಸರಿಯಾಗಿದ್ದೇನೆಯೇ? ಎಂಬಂತಹ ಪ್ರಶ್ನೆಗಳನ್ನು ಕೇಳುವ ಮೂಲಕ ಇತರರಿಂದ ನಿರಂತರವಾಗಿ ಭರವಸೆ ಪಡೆಯುವುದನ್ನು ತಪ್ಪಿಸಿ. ಸಾಮಾನ್ಯ ಭಯವು ಸಾಮಾನ್ಯವಾಗಿ ಕೆಲವೇ ನಿಮಿಷಗಳಲ್ಲಿ ಮಾಯವಾಗುತ್ತದೆ. ಈ ಅನಗತ್ಯ ಚಿಂತೆಗಳು ಮತ್ತು ಯಾತನಾಮಯ ಆಲೋಚನೆಗಳು ನಿಮ್ಮ ದೈನಂದಿನ ಚಟುವಟಿಕೆಗಳು, ಸಂಬಂಧಗಳು ಅಥವಾ ನಿದ್ರೆಗೆ ಅಡ್ಡಿಪಡಿಸಲು ಪ್ರಾರಂಭಿಸಿದರೆ, ಮಾನಸಿಕ ಆರೋಗ್ಯ ವೃತ್ತಿಪರರು ಅಥವಾ ವೈದ್ಯರನ್ನು ಸಂಪರ್ಕಿಸುವುದು ಸೂಕ್ತ. ಅರಿವಿನ ವರ್ತನೆಯ ಚಿಕಿತ್ಸೆ ಮತ್ತು ಅಗತ್ಯವಿದ್ದರೆ ಸರಳ ಔಷಧಿಗಳ ಮೂಲಕ ಸಂಪೂರ್ಣ ಪರಿಹಾರವನ್ನು ಕಂಡುಹಿಡಿಯಬಹುದು ಎಂದು ತಜ್ಞರು ವಿವರಿಸುತ್ತಾರೆ.



ವಿದ್ಯಾರ್ಥಿ ವಿಜಯ

ಡಾ.ಸುಧಾಕರ.ಜಿ. ಲಕ್ಕವಳ್ಳಿ
ಲೇಖಕರು
ಸಾಮಾಜಿಕ ಚಿಂತಕರು

10

# ನಮ್ಯತೆ: ಯಶಸ್ಸಿನ ಹೊಂದಾಣಿಕೆಯ ಶಕ್ತಿ



ವಿದ್ಯಾರ್ಥಿಯ ಜೀವನದಲ್ಲಿ ವಿಜಯ ಸಾಧಿಸಲು ನಮ್ಯತೆ ಅತ್ಯಂತ ಅವಶ್ಯಕವಾದ ಗುಣವಾಗಿದೆ. ನಮ್ಯತೆ ಎಂದರೆ ಪರಿಸ್ಥಿತಿಗಳಿಗೆ ಅನುಗುಣವಾಗಿ ತನ್ನ ಚಿಂತನೆ, ವರ್ತನೆ ಮತ್ತು ಕಾರ್ಯವಿಧಾನಗಳನ್ನು ಬದಲಿಸಿಕೊಳ್ಳುವ ಸಾಮರ್ಥ್ಯ. ಜೀವನದಲ್ಲಿ ಎಲ್ಲಾ ಸಂದರ್ಭಗಳೂ ನಮ್ಮ ನಿರೀಕ್ಷೆಯಂತೆ ನಡೆಯುವುದಿಲ್ಲ. ಆದ್ದರಿಂದ ಬದಲಾವಣೆಗಳನ್ನು ಸ್ವೀಕರಿಸಿ ಮುಂದೆ ಸಾಗುವ ಮನೋಭಾವ ಯಶಸ್ಸಿಗೆ ಅಗತ್ಯವಾಗಿದೆ. ವಿದ್ಯಾರ್ಥಿ ಅಧ್ಯಯನದಲ್ಲಿ ಎದುರಾಗುವ ಸವಾಲುಗಳನ್ನು ಧೈರ್ಯದಿಂದ ಸ್ವೀಕರಿಸಬೇಕು.

ಒಂದು ವಿಧಾನದಲ್ಲಿ ವಿಷಯ ಅರ್ಥವಾಗದಿದ್ದರೆ ಮತ್ತೊಂದು ವಿಧಾನವನ್ನು ಪ್ರಯತ್ನಿಸಬೇಕು. ಶಿಕ್ಷಕರ ಸಲಹೆಗಳನ್ನು ಸ್ವೀಕರಿಸುವುದು, ಹೊಸ ಕಲಿಕಾ ವಿಧಾನಗಳನ್ನು ಅಳವಡಿಸಿಕೊಳ್ಳುವುದು ಮತ್ತು ತಪ್ಪುಗಳಿಂದ ಪಾಠ ಕಲಿಯುವುದು ನಮ್ಯತೆಯ ಲಕ್ಷಣಗಳಾಗಿವೆ. ಇಂತಹ ಮನೋಭಾವವು ನಿರಂತರ ಪ್ರಗತಿಗೆ ನೆರವಾಗುತ್ತದೆ. ನಮ್ಯತೆಯನ್ನು ಬೆಳೆಸಿಕೊಂಡ ವಿದ್ಯಾರ್ಥಿ ವೈಫಲ್ಯದಿಂದ ಕುಗ್ಗುವುದಿಲ್ಲ. ಬದಲಾಗಿ ಅದನ್ನು ಯಶಸ್ಸಿನ ಪಾಠವನ್ನಾಗಿ ಪರಿವರ್ತಿಸಿಕೊಳ್ಳುತ್ತಾನೆ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯೂ ನಮ್ಯತೆಯನ್ನು ಜೀವನದ ಭಾಗವಾಗಿಸಿಕೊಂಡರೆ ಬದಲಾವಣೆಯ ಯುಗದಲ್ಲಿ ಆತ್ಮವಿಶ್ವಾಸದಿಂದ ಮುನ್ನಡೆದು ವಿಜಯದ ಶಿಖರವನ್ನು ತಲುಪಬಹುದು.

**ವೈಜ್ಞಾನಿಕವಾಗಿ ನೋಡಿದರೆ, ನಮ್ಯತೆ ಮೆದುಳಿನ ಹೊಂದಾಣಿಕೆಯ ಸಾಮರ್ಥ್ಯವನ್ನು ವೃದ್ಧಿಸುತ್ತದೆ. ಹೊಸ ಅನುಭವಗಳು ಮತ್ತು ಸವಾಲುಗಳನ್ನು ಸ್ವೀಕರಿಸಿದಾಗ ಮೆದುಳಿನಲ್ಲಿ ಹೊಸ ನರಸಂಪರ್ಕಗಳು ರೂಪುಗೊಳ್ಳುತ್ತವೆ.**

**ಇದರಿಂದ ಸಮಸ್ಯೆ ಪರಿಹರಿಸುವ ಕೌಶಲ, ಸೃಜನಶೀಲತೆ ಮತ್ತು ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ ಹೆಚ್ಚುತ್ತದೆ.**

# ಗೌರವಾನ್ವಿತ ಮುಖ್ಯಮಂತ್ರಿಗಳಾದ ಡಿಕೆ ಶಿವಕುಮಾರ್‌ರವರೇ ಕರ್ನಾಟಕದಲ್ಲಿ ಏಳನೇ ತರಗತಿಯವರೆಗೂ ಕನ್ನಡದಲ್ಲಿ ವ್ಯಾಸಂಗ ಕಡ್ಡಾಯಗೊಳಿಸಿ



ಲೇಖಕರು
ಚನ್ನೇಗೌಡ ಉಜ್ಜನಿ ಚಲುವಯ್ಯ
ಲೇಖಕರು,
ಕನ್ನಡ ಪರ ಚಿಂತಕರು

ಗೌರವಾನ್ವಿತ ಮುಖ್ಯಮಂತ್ರಿಗಳಾದ ಡಿ ಕೆ ಶಿವಕುಮಾರ್‌ರವರೇ ಕರ್ನಾಟಕದಲ್ಲಿ ಏಳನೇ ತರಗತಿಯವರೆಗೂ ಕನ್ನಡದಲ್ಲಿ ವ್ಯಾಸಂಗ ಕಡ್ಡಾಯಗೊಳಿಸಿ ಗೌರವಾನ್ವಿತ ಮುಖಮಂತ್ರಿಗಳಾದ ಡಿ ಕೆ ಶಿವಕುಮಾರ್ ಯವರೇ, ಈ ರಾಜ್ಯದ ಶಿಕ್ಷಣ ಸಚಿವರೇ,

ನಮ್ಮ ನಾಡಿನಲ್ಲಿ ಕನ್ನಡ ಭಾಷೆಯಲ್ಲಿ ವ್ಯವಹಾರ ಪ್ರಾರಂಭ ನೂರಕ್ಕೆ ನೂರು ಆಗಲೇಬೇಕು.ಇಲ್ಲವಾದರೆ ಮುಂದಿನ ದಿನಗಳಲ್ಲಿ ಕನ್ನಡಿಗರನ್ನು ನೋಡುವ ಸೌಭಾಗ್ಯವನ್ನು ನಾವು ಕಳೆದುಕೊಳ್ಳುತ್ತೇವೆ.

ಅಕ್ಕ ಪಕ್ಕದ ರಾಜ್ಯದವರಲ್ಲಿ ಅವರವರ ರಾಜ್ಯದ ಹಾಗೂ ಅವರ ಮಾತೃ ಭಾಷೆಯ ಬಗ್ಗೆ ಇರುವ ಅಭಿಮಾನ ನಮ ಕನ್ನಡ ನಾಡಿನಲ್ಲಿ ಯಾಕಿಲ್ಲಾ.... ಮೂಲ ಕನ್ನಡಿಗರಿಗೆ ಉದ್ಯೋಗಾವಕಾಶಗಳಲ್ಲಿ ಕನ್ನಡಿಗರಿಗೆ ಸಿಗಬೇಕಾದ ಆದ್ಯತೆಯ ಕೊರತೆ ದಿನೇ ದಿನೇ ಹೆಚ್ಚುತ್ತಿದೆ.

ಭಾಷಾ ತಾರತಮ್ಯ ಮತ್ತು ಉದ್ಯೋಗದಲ್ಲಿ ರೈಲ್ವೆ ಹಾಗೂ ಬ್ಯಾಂಕಿಂಗ್ ನಂತಹ ಕೇಂದ್ರ ಸರ್ಕಾರದ ಹುದ್ದೆಗಳ ನೇಮಕಾತಿಯಲ್ಲಿ ಕನ್ನಡವನ್ನು ಕಡೆಗಣಿಸಿ ಹಿಂದಿ ಅಥವಾ ಇಂಗ್ಲಿಷ್‌ಗೆ ಮಾತ್ರ ಮಣೆ ಹಾಕಲಾಗುತ್ತಿದೆ.

ಎಲ್ಲಾ ಕಡೆಯಿಂದಲೂ ಕನ್ನಡಿಗರಿಗೆ ಅಗೌರವ ಅಭದ್ರತೆ ಇದು ನ್ಯಾಯವೇ......ಇನ್ನಾದರೂ ರೈತಾಪಿ ಅನ್ನದಾತರು, ಮೂಲ ಕನ್ನಡಿಗರು, ಈ ನಾಡಿನಲ್ಲಿ ಉಳಿಯಲು ನಾವುಗಳು ಕೈಜೋಡಿಸಲೇಬೇಕು.

ಈ ಬಗ್ಗೆ ಹಲವಾರು ಬಾರಿ ಹಲವು ಪ್ರಮುಖ ಪತ್ರಿಕೆಗಳಲ್ಲಿ, ಮಾಧ್ಯಮಗಳ ಮೂಲಕ ವರದಿಗಳಲ್ಲಿ ಪ್ರಕಟಿಸುತ್ತಲೇ ಇದ್ದರೂ ಸ್ಥಳೀಯ ಭಾಷಿಕರಿಗೆ ಸಿಗಬೇಕಾದ ಅವಕಾಶಗಳು ಸಿಗುತ್ತಲೇ ಇಲ್ಲಾ.

ನಮ್ಮ ರಾಜ್ಯದಲ್ಲಿರುವ ಬಹುರಾಷ್ಟ್ರೀಯ ಕಂಪನಿಗಳು ಮತ್ತು ಕೈಗಾರಿಕೆಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ಸರಿಯಾಗಿ ಜಾರಿಯಾಗುತ್ತಿಲ್ಲ ಎಂಬ ಕೂಗು ಮೊದಲಿನಿಂದಲೂ ಕೂಗಿ ಬರುತ್ತಿದೆ. ಕೆಪಿಎಸ್‌ಸಿ ಮುಂತಾದ ರಾಜ್ಯದ ನೇಮಕಾತಿ ಪ್ರಕ್ರಿಯೆಗಳಲ್ಲಿನ ವಿಳಂಬ ನೀತಿಯಿಂದ ಸ್ಥಳೀಯ ಮೂಲ ಕನ್ನಡಿಗ ಯುವಕರಿಗೆ ನಿರಾಸೆಯಾಗುತ್ತಿದೆ.

ಈ ಅನ್ಯಾಯಗಳ ವಿರುದ್ಧ ರಾಜ್ಯದಾದ್ಯಂತ ಕನ್ನಡಪರ ಸಂಘಟನೆಗಳು ನಿರಂತರವಾಗಿ ಧ್ವನಿ ಎತ್ತುತ್ತಲೇ ಇದ್ದರೂ ಕೇಂದ್ರ ಸರ್ಕಾರದ ಹುದ್ದೆಗಳ ಪರೀಕ್ಷೆಯಲ್ಲಿ ಕನ್ನಡದ ಕಡೆಗಣನೆ ಜೊತೆಗೆ ಭಾಷಾ ಹೇರಿಕೆಯ ವಿರುದ್ಧ ಕನ್ನಡಿಗರಾದ ನಾವುಗಳು ಇನ್ನೆಷ್ಟು ಆಕ್ರೋಶ ವ್ಯಕ್ತಪಡಿಸಬೇಕು.

ಇತ್ತೀಚೆಗೆ ವಿಶ್ರಾಂತ ಕುಲಪತಿಗಳಾದ ಡಾ.ಹಿ.ಚಿ.ಬೋರಲಿಂಗಯ್ಯ, ಕಸಾಪ ಮಾಜಿ ಅಧ್ಯಕ್ಷರಾದ ನಾಡೋಜ ಮನು ಬಳಿಗಾರ್ ರವರು, ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷ ವೂಡೆ ಪಿ. ಕೃಷ್ಣರವರು, ಹಾಗೂ ಕನ್ನಡ ವಿಕಾಸ ರಂಗ ಅಧ್ಯಕ್ಷರು ಶ್ರೀ ವ.ಚ.ಚನ್ನೇಗೌಡರವರ ಕನ್ನಡ ಪರ ಚಿಂತನೆಯ ಮಾತುಗಳು ನೂರಕ್ಕೆ ನೂರು ಸತ್ಯವಾಗಿದೆ.

ಈ ನೆಲದ ಕನ್ನಡ ಭಾಷೆ ಉಳಿಸಲು ಕನ್ನಡ ಪರ ಹೋರಾಟಗಾರರ ಅವಶ್ಯಕತೆ ತುಂಬಾ ಇದೆ. ಜೊತೆಗೆ ಅವರನ್ನು ಗೌರವಿಸುವ ವ್ಯವಸ್ಥೆಕೂಡ ನಡೆಯಬೇಕಿದೆ.

ರಾಜ್ಯದಲ್ಲಿ ಕನ್ನಡ ಪತ್ರಿಕೋದ್ಯಮ ಬಹಳ ಕಷ್ಟದ ಪರಿಸ್ಥಿತಿಯಲ್ಲಿ ನಡೆಯುತ್ತಿವೆ.

ಇನ್ನಾದರೂ ರಾಜ್ಯದಲ್ಲಿ ಒಂದನೇ ತರಗತಿಯಿಂದರಿಂದ ಏಳನೇ ತರಗತಿವರಗೆ ಕನ್ನಡ ಮಾಧ್ಯಮದಲ್ಲಿ ಮಕ್ಕಳು ಶಿಕ್ಷಣ ಪಡೆಯಲೇಬೇಕು ಎಂಬ ಕಠಿಣ ಆದೇಶ ನೀಡಲೇಬೇಕು ಹೀಗೆ ನೀಡಿದರೆ ಮಾತ್ರ ಮುಂದಿನ ದಿನಗಳಲ್ಲಿ ಬೆಂಗಳೂರು ನಗರದಲ್ಲಿ ಕನ್ನಡಿಗರನ್ನು ನೋಡಬಹುದು.,

ಸದ್ಯದ ಪರಿಸ್ಥಿತಿ ನಮ್ಮ ನಾಡಿಗೆ ಎಚ್ಚರಿಕೆಯ ಗಂಟೆಯಾಗಿದೆ.

ಅಕ್ಕಪಕ್ಕದ ನೆರೆಯ ರಾಜ್ಯಗಳಲ್ಲಿ ನಮ್ಮವರು ಹೋದಲ್ಲಿ ಅವರ ರಾಜ್ಯದ ಭಾಷೆಯಲ್ಲಿ ಮಾತ್ರ ವ್ಯವಹರಿಸಬೇಕು ಇಲ್ಲವಾದರೆ ಅಲ್ಲಿ ಬದುಕಲು ಅವಕಾಶವೇ ಇರುವುದಿಲ್ಲ.



ಇನ್ನಾದರೂ ನಮ್ಮ ಮಾತೃ ಭಾಷೆ ಕನ್ನಡವನ್ನು ಈ ನಾಡಿನ ಉದ್ದಗಲಕ್ಕೂ ನಿತ್ಯದ ವ್ಯವಹಾರ ಕನ್ನಡದಲ್ಲಿಯೇ ವ್ಯವಹರಿಸುವಂತೆ ನಿಮ್ಮ ಅವಧಿಯಲ್ಲಾದರೂ ಕಠಿಣ ಆದೇಶ ನೀಡಿ ಮೂಲ ಕನ್ನಡಿಗರಿಗೆ ಸರ್ಕಾರಿ ಕೆಲಸ, ಉನ್ನತ ಸ್ಥಾನಮಾನ ನೀಡುವ ಭರವಸೆಯನ್ನು ಮಾನ್ಯ ಮುಖ್ಯಮಂತ್ರಿಗಳು ನೀಡುವ ಮೂಲಕ ಈ ನೆಲದ ಗೌರವದ ಅಸ್ಮಿತೆಯನ್ನು ಕಾಪಾಡಬೇಕೆಂದು ಏಳು ಕೋಟಿ ಕನ್ನಡಿಗರ ಪರವಾಗಿ ವಿನಂತಿಸುತ್ತೇನೆ.



ಲೇಖಕರು
ವಿಶ್ವಾಸ್ .ಡಿ.ಗೌಡ
ಲೇಖಕರು
ಸಾಮಾಜಿಕ ಚಿಂತಕರು

# ಅಂಜನಾದ್ರಿ ಬೆಟ್ಟ: ಹನುಮಂತನ ಜನ್ಮಸ್ಥಳವೆಂಬ ಭಕ್ತಿಯ ಪ್ರತೀಕ

**ಅಂಜನಾದ್ರಿ ಬೆಟ್ಟವು ತುಂಗಭದ್ರಾ ನದಿಯ ತೀರದಲ್ಲಿರುವ ಹಂಪಿಯ ಐತಿಹಾಸಿಕ ಪ್ರದೇಶದ ಸಮೀಪದಲ್ಲಿದೆ. ಹಂಪಿಯ ಬಂಡೆಗಲ್ಲುಗಳು, ನೈಸರ್ಗಿಕ ಬೆಟ್ಟಗಳು ಹಾಗೂ ಹಸಿರು ಪರಿಸರದ ನಡುವೆ ಎದ್ದು ಕಾಣುವ ಈ ಬೆಟ್ಟವು ಪ್ರಕೃತಿ ಪ್ರಿಯರಿಗೂ ಸ್ವರ್ಗದಂತಿದೆ. ಬೆಟ್ಟದ ಮೇಲಿರುವ ಶ್ರೀ ಆಂಜನೇಯಸ್ವಾಮಿ ದೇವಸ್ಥಾನಕ್ಕೆ ತಲುಪಲು ಸುಮಾರು 575ಕ್ಕೂ ಹೆಚ್ಚು ಮೆಟ್ಟಿಲುಗಳನ್ನು ಹತ್ತಬೇಕು. ಈ ಮೆಟ್ಟಿಲುಗಳನ್ನು ಏರುವ ವೇಳೆ ಸುತ್ತಮುತ್ತಲಿನ ನೈಸರ್ಗಿಕ ದೃಶ್ಯಗಳು, ಬಂಡೆಗಲ್ಲುಗಳ ವೈಭವ ಮತ್ತು ತುಂಗಭದ್ರಾ ನದಿಯ ನೋಟ ಮನಸ್ಸಿಗೆ ವಿಶೇಷ ಆನಂದವನ್ನು ನೀಡುತ್ತದೆ.ಬೆಟ್ಟದ ಶಿಖರದಲ್ಲಿರುವ ಶ್ರೀ ಆಂಜನೇಯಸ್ವಾಮಿ ದೇವಸ್ಥಾನವು ಸರಳವಾದರೂ ಭಕ್ತಿಯ ಮಹಿಮೆಯಿಂದ ಕಂಗೊಳಿಸುತ್ತದೆ. ಪ್ರತಿದಿನ ನೂರಾರು ಭಕ್ತರು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸುತ್ತಾರೆ. ವಿಶೇಷವಾಗಿ ಮಂಗಳವಾರ, ಶನಿವಾರ ಹಾಗೂ ಹನುಮ ಜಯಂತಿಯ ಸಂದರ್ಭದಲ್ಲಿ ಸಾವಿರಾರು ಭಕ್ತರು ಇಲ್ಲಿ ಸೇರಿ ಭಕ್ತಿಭಾವದಿಂದ ಪೂಜೆ ಸಲ್ಲಿಸುತ್ತಾರೆ. ದೇವಾಲಯದಲ್ಲಿ ಮೊಳಗುವ ಗಂಟೆಗಳ ನಾದ, ಭಜನೆಗಳು ಹಾಗೂ ಜೈ ಶ್ರೀರಾಮ್, ಜೈ ಹನುಮಾನ್ ಎಂಬ ಘೋಷಣೆಗಳು ಭಕ್ತರ ಮನಸ್ಸಿನಲ್ಲಿ ಆಧ್ಯಾತ್ಮಿಕ ಭಾವನೆಯನ್ನು ಮೂಡಿಸುತ್ತವೆ.**

ಭಾರತದ ಪವಿತ್ರ ಯಾತ್ರಾಸ್ಥಳಗಳಲ್ಲಿ ವಿಶಿಷ್ಟ ಸ್ಥಾನ ಪಡೆದಿರುವ ಅಂಜನಾದ್ರಿ ಬೆಟ್ಟವು ಭಕ್ತಿ, ಪುರಾಣ, ಪ್ರಕೃತಿ ಮತ್ತು ಇತಿಹಾಸವನ್ನು ಒಟ್ಟುಗೂಡಿಸಿದ ಅಪರೂಪದ ತಾಣವಾಗಿದೆ. ಕರ್ನಾಟಕದ ವಿಜಯನಗರ ಜಿಲ್ಲೆಯ ಹಂಪಿ ಸಮೀಪದಲ್ಲಿರುವ ಈ ಬೆಟ್ಟವನ್ನು ಶ್ರೀ ಹನುಮಂತನ ಜನ್ಮಸ್ಥಳವೆಂದು ಕೋಟ್ಯಂತರ ಭಕ್ತರು ನಂಬುತ್ತಾರೆ. ವರ್ಷಪೂರ್ತಿ ದೇಶ-ವಿದೇಶಗಳಿಂದ ಸಾವಿರಾರು ಭಕ್ತರು ಹಾಗೂ ಪ್ರವಾಸಿಗರು ಇಲ್ಲಿಗೆ ಆಗಮಿಸಿ ದರ್ಶನ ಪಡೆದು ಪ್ರಕೃತಿಯ ಸೊಬಗನ್ನು ಸವಿಯುತ್ತಾರೆ.

ಅಂಜನಾದ್ರಿ ಎಂಬ ಹೆಸರಿನ ಹಿಂದೆಯೇ ಒಂದು ಪೌರಾಣಿಕ ಕಥೆಯಿದೆ. ಹನುಮಂತನ ತಾಯಿಯಾದ ಅಂಜನಾ ದೇವಿಯ ಹೆಸರಿನಿಂದಲೇ ಈ ಬೆಟ್ಟಕ್ಕೆ ಅಂಜನಾದ್ರಿ ಎಂಬ ಹೆಸರು ಬಂದಿದೆ. ಪುರಾಣಗಳ ಪ್ರಕಾರ ಅಂಜನಾ ದೇವಿಯು ಈ ಬೆಟ್ಟದಲ್ಲಿ ತಪಸ್ಸು ಮಾಡಿ ವಾಯುದೇವರ ಅನುಗ್ರಹದಿಂದ ಶ್ರೀ ಹನುಮಂತನಿಗೆ ಜನ್ಮ ನೀಡಿದಳು ಎಂದು ಹೇಳಲಾಗುತ್ತದೆ. ಆದ್ದರಿಂದ ಈ ಬೆಟ್ಟವನ್ನು ಹನುಮಂತನ ಜನ್ಮಭೂಮಿಯೆಂದು ಭಕ್ತರು ಅತ್ಯಂತ ಭಕ್ತಿಭಾವದಿಂದ ಪೂಜಿಸುತ್ತಾರೆ.

ಅಂಜನಾದ್ರಿ ಬೆಟ್ಟವು ಕೇವಲ ಧಾರ್ಮಿಕ ಕ್ಷೇತ್ರ ಮಾತ್ರವಲ್ಲ ಇದು ಪುರಾತತ್ವ ಹಾಗೂ ಐತಿಹಾಸಿಕ ಮಹತ್ವವನ್ನೂ ಹೊಂದಿದೆ. ವಿಜಯನಗರ ಸಾಮ್ರಾಜ್ಯದ ವೈಭವವನ್ನು ಸಾರುವ ಹಂಪಿಯ ಸ್ಮಾರಕಗಳ ಸಮೀಪದಲ್ಲಿರುವುದರಿಂದ ಯುನೆಸ್ಕೋ ವಿಶ್ವ ಪರಂಪರೆಯ ತಾಣಕ್ಕೆ ಭೇಟಿ ನೀಡುವ ಬಹುತೇಕ ಪ್ರವಾಸಿಗರು ಅಂಜನಾದ್ರಿಗೂ ಭೇಟಿ ನೀಡುತ್ತಾರೆ. ಹೀಗಾಗಿ ಈ ಪ್ರದೇಶವು ಧಾರ್ಮಿಕ ಹಾಗೂ ಐತಿಹಾಸಿಕ ಪ್ರವಾಸೋದ್ಯಮದ ಪ್ರಮುಖ ಕೇಂದ್ರವಾಗಿ ಬೆಳೆದಿದೆ. ಈ ಬೆಟ್ಟದ ಮತ್ತೊಂದು ವಿಶೇಷತೆ ಎಂದರೆ ಇಲ್ಲಿಂದ ಕಾಣುವ ಸೂರ್ಯೋದಯ ಮತ್ತು ಸೂರ್ಯಾಸ್ತದ ದೃಶ್ಯಗಳು. ಬೆಳಗಿನ ಜಾವ ಸೂರ್ಯೋದಯದ ಹೊತ್ತಿನಲ್ಲಿ ಬೆಟ್ಟದ ಮೇಲಿಂದ ಕಾಣುವ ದೃಶ್ಯ ಮನಮೋಹಕವಾಗಿರುತ್ತದೆ. ಸಂಜೆಯ ವೇಳೆಯಲ್ಲಿ ಸೂರ್ಯಾಸ್ತದ ಕೆಂಪು ಕಿರಣಗಳು ಹಂಪಿಯ ಬಂಡೆಗಳ ಮೇಲೆ ಬೀಳುವ ದೃಶ್ಯವನ್ನು ನೋಡುವುದೇ ಒಂದು ಅದ್ಭುತ ಅನುಭವ. ಛಾಯಾಗ್ರಾಹಕರು ಹಾಗೂ ಪ್ರಕೃತಿ ಪ್ರಿಯರಿಗೆ ಇದು ಅತ್ಯಂತ ಮೆಚ್ಚಿನ ಸ್ಥಳವಾಗಿದೆ.

ಅಂಜನಾದ್ರಿಗೆ ಭೇಟಿ ನೀಡುವವರು ಪರಿಸರ ಸಂರಕ್ಷಣೆಯ ಹೊಣೆಗಾರಿಕೆಯನ್ನು ಸಹ ಅರಿತುಕೊಳ್ಳಬೇಕು. ಪ್ಲಾಸ್ಟಿಕ್ ತ್ಯಾಜ್ಯ ಎಸೆಯದೆ, ಬೆಟ್ಟದ ಸ್ವಚ್ಛತೆಯನ್ನು ಕಾಪಾಡುವುದು ಪ್ರತಿಯೊಬ್ಬ ಯಾತ್ರಿಕನ ಕರ್ತವ್ಯವಾಗಿದೆ. ಪವಿತ್ರ ಕ್ಷೇತ್ರದ ಗೌರವವನ್ನು ಉಳಿಸಿಕೊಂಡು ದೇವಸ್ಥಾನದ ನಿಯಮಗಳನ್ನು ಪಾಲಿಸುವುದು ಮತ್ತು ಸ್ಥಳೀಯ ಸಂಸ್ಕೃತಿಗೆ ಗೌರವ ನೀಡುವುದು ಅತ್ಯಗತ್ಯವಾಗಿದೆ.

ಅಂಜನಾದ್ರಿ ಬೆಟ್ಟದ ಸುತ್ತಮುತ್ತಲಿನ ಗ್ರಾಮೀಣ ಜೀವನವೂ ಪ್ರವಾಸಿಗರನ್ನು ಆಕರ್ಷಿಸುತ್ತದೆ. ಸ್ಥಳೀಯರ ಆತಿಥ್ಯ, ಸಾಂಪ್ರದಾಯಿಕ ಆಹಾರ ಹಾಗೂ ಗ್ರಾಮೀಣ ಸಂಸ್ಕೃತಿಯ ಪರಿಚಯವು ಪ್ರವಾಸಕ್ಕೆ ಮತ್ತಷ್ಟು ಮೆರಗು ನೀಡುತ್ತದೆ. ಹಂಪಿಯ ವಿರೂಪಾಕ್ಷ ದೇವಾಲಯ, ವಿಠ್ಠಲ ದೇವಾಲಯ, ಕಲ್ಲಿನ ರಥ ಹಾಗೂ ಇತರ ಐತಿಹಾಸಿಕ ಸ್ಮಾರಕಗಳೊಂದಿಗೆ ಅಂಜನಾದ್ರಿ ಬೆಟ್ಟದ ದರ್ಶನವು ಸಂಪೂರ್ಣ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಅನುಭವವನ್ನು ನೀಡುತ್ತದೆ. ಇಂದಿನ ಯುವಜನತೆ ತಮ್ಮ ಸಂಸ್ಕೃತಿ, ಇತಿಹಾಸ ಹಾಗೂ ಪುರಾಣಗಳ ಬಗ್ಗೆ ತಿಳಿದುಕೊಳ್ಳಬೇಕಾದರೆ ಅಂಜನಾದ್ರಿಯಂತಹ ಪವಿತ್ರ ಕ್ಷೇತ್ರಗಳಿಗೆ ಭೇಟಿ ನೀಡುವುದು ಅಗತ್ಯವಾಗಿದೆ. ಇಂತಹ ಸ್ಥಳಗಳು ಕೇವಲ ಧಾರ್ಮಿಕ ನಂಬಿಕೆಯನ್ನು ಬಲಪಡಿಸುವುದಷ್ಟೇ ಅಲ್ಲ, ನಮ್ಮ ಪರಂಪರೆ, ಪ್ರಕೃತಿ ಮತ್ತು ಸಂಸ್ಕೃತಿಯ ಬಗ್ಗೆ ಗೌರವವನ್ನು ಬೆಳೆಸುತ್ತವೆ. ಹನುಮಂತನ ಶಕ್ತಿ, ಭಕ್ತಿ, ನಿಷ್ಠೆ, ಧೈರ್ಯ ಮತ್ತು ಸೇವಾ ಮನೋಭಾವ ಇಂದಿನ ಸಮಾಜಕ್ಕೂ ಆದರ್ಶವಾಗಿದೆ. ಒಟ್ಟಾರೆ, ಅಂಜನಾದ್ರಿ ಬೆಟ್ಟವು ಭಕ್ತಿ, ಇತಿಹಾಸ, ಪ್ರಕೃತಿ ಮತ್ತು ಸಂಸ್ಕೃತಿಯ ಸಂಗಮವಾಗಿದೆ. ಪ್ರತಿಯೊಬ್ಬ ಭಾರತೀಯನೂ ಜೀವನದಲ್ಲಿ ಒಮ್ಮೆಯಾದರೂ ಈ ಪವಿತ್ರ ಕ್ಷೇತ್ರಕ್ಕೆ ಭೇಟಿ ನೀಡಿ ಶ್ರೀ ಹನುಮಂತನ ದರ್ಶನ ಪಡೆದು ಅಲ್ಲಿನ ಆಧ್ಯಾತ್ಮಿಕ ವಾತಾವರಣವನ್ನು ಅನುಭವಿಸಬೇಕು. ಅಂಜನಾದ್ರಿ ಬೆಟ್ಟವು ಕೇವಲ ಒಂದು ಪ್ರವಾಸಿ ತಾಣವಲ್ಲ, ಅದು ಭಕ್ತಿ, ನಂಬಿಕೆ, ಶಕ್ತಿ ಮತ್ತು ಭಾರತೀಯ ಸಂಸ್ಕೃತಿಯ ಶಾಶ್ವತ ಸಂಕೇತವಾಗಿದೆ.



# ಇದೇ ಕಾರಣಕ್ಕೆ ರಾಷ್ಟ್ರೀಯ ವೈದ್ಯರ ದಿನ ಆಚರಿಸುತ್ತಾರೆ ನೋಡಿ

ವೈದ್ಯರು ಕೇವಲ ಅನಾರೋಗ್ಯಕ್ಕೆ ಚಿಕಿತ್ಸೆ ನೀಡುವುದಿಲ್ಲ. ಸಮಾಜವನ್ನು ಆರೋಗ್ಯಕರವಾಗಿ ಹಾಗೂ ಸುರಕ್ಷಿತವಾಗಿಡುವಲ್ಲಿ ವೈದ್ಯರು ನಿರ್ಣಾಯಕ ಪಾತ್ರವಹಿಸುತ್ತಾರೆ. ಪ್ರತಿಕೂಲ ಸಂದರ್ಭಗಳಲ್ಲಿಯೂ ಕೂಡ ತಮ್ಮ ಕರ್ತವ್ಯಗಳನ್ನು ಅತ್ಯಂತ ಸಮರ್ಪಣಾಭಾವದಿಂದ ನಿರ್ವಹಿಸುತ್ತಾರೆ. ಇದರ ಪರಿಣಾಮವಾಗಿ ಪ್ರತಿ ವರ್ಷ ಜುಲೈ 1 ರಂದು ದೇಶಾದ್ಯಂತ ರಾಷ್ಟ್ರೀಯ ವೈದ್ಯರ ದಿನವನ್ನು ಆಚರಿಸಲಾಗುತ್ತದೆ. ಈ ದಿನವನ್ನು ತಮ್ಮ ಕಠಿಣ ಪರಿಶ್ರಮ, ಸೇವೆ ಮತ್ತು ಬದ್ಧತೆಯ ಮೂಲಕ ಜೀವಗಳನ್ನು ಉಳಿಸುವ ವೈದ್ಯರಿಗೆ ಸಮರ್ಪಿಸಲಾಗಿದೆ.

ರಾಷ್ಟ್ರೀಯ ವೈದ್ಯರ ದಿನವನ್ನು ಗುರುತಿಸಲು ದೇಶಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ನಡೆಯುತ್ತಿವೆ. ಈ ದಿನದಂದು ವೈದ್ಯರ ಕೊಡುಗೆಗಳನ್ನು ಗೌರವಿಸಲಾಗುತ್ತದೆ ಮತ್ತು ಆರೋಗ್ಯ ಸೇವೆಗಳಲ್ಲಿ ಅವರ ಪಾತ್ರದ ಮಹತ್ವವನ್ನು ಎತ್ತಿ ತೋರಿಸಲಾಗುತ್ತದೆ. ಭಾರತದಲ್ಲಿ ಜುಲೈ 1ರಂದು ರಾಷ್ಟ್ರೀಯ ವೈದ್ಯರ ದಿನವನ್ನು ಏಕೆ ಆಚರಿಸಲಾಗುತ್ತದೆ. ಇದರ ಹಿಂದಿನ ಕಾರಣ ಮತ್ತು ಇತಿಹಾಸದ ಕುರಿತು ಹಲವು ಜನರಿಗೆ ಇನ್ನೂ ತಿಳಿದಿಲ್ಲ. ಈ ರಾಷ್ಟ್ರೀಯ ವೈದ್ಯರ ದಿನದ ಇತಿಹಾಸ, ಈ ಬಾರಿಯ ವಿಷಯ, ಮಹತ್ವ ಸೇರಿದಂತೆ ವಿವರವಾದ ಮಾಹಿತಿಯನ್ನು ಪಡೆದುಕೊಳ್ಳೋಣ.

ಖ್ಯಾತ ವೈದ್ಯ, ಸ್ವಾತಂತ್ರ್ಯ ಹೋರಾಟಗಾರ, ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿ ಡಾ.ಬಿಧನ್ ಚಂದ್ರ ರಾಯ್ ಅವರ ಜನ್ಮ ವಾರ್ಷಿಕೋತ್ಸವ ಹಾಗೂ ಪುಣ್ಯತಿಥಿ ಸ್ಮರಣಾರ್ಥ ಹಾಗೂ ಸಮಾಜಕ್ಕೆ ವೈದ್ಯರು ನೀಡುವ ಕೊಡುಗೆಯನ್ನು ಗೌರವಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಡಾ.ಬಿ.ಸಿ. ರಾಯ್ ಅವರು ಜುಲೈ 1, 1882 ರಂದು ಜನಿಸಿದರು.

ಅದೇ ದಿನಾಂಕದಂದು (ಜುಲೈ 1, 1962) ನಿಧನರಾದರು. ವೈದ್ಯಕೀಯ ಕ್ಷೇತ್ರಕ್ಕೆ ಅವರು ನೀಡಿದ ಅಪಾರ ಕೊಡುಗೆಗಾಗಿ ಅವರಿಗೆ 1961 ರಲ್ಲಿ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ದೇಶದಲ್ಲಿ ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ ವತಿಯಿಂದ 1991ರ ಜುಲೈ 1ರಂದು ಮೊದಲ ಬಾರಿಗೆ ಈ ದಿನವನ್ನು ಆಚರಿಸಲಾಯಿತು. ಪ್ರಾಣದ ಹಂಗು ತೊರೆದು ರೋಗಿಗಳ ಜೀವ ಉಳಿಸಲು ಹಗಲಿರುಳು ಶ್ರಮಿಸುವ ವೈದ್ಯರ ನಿಸ್ವಾರ್ಥ ಸೇವೆ, ಸಹಾನುಭೂತಿ ಹಾಗೂ ಬದ್ಧತೆಯನ್ನು ಗುರುತಿಸಿ ಕೃತಜ್ಞತೆ ಸಲ್ಲಿಸಲು ಈ ದಿನ ಮೀಸಲಾಗಿದೆ. ಇದು ವೈದ್ಯರ ಮಾನಸಿಕ, ಭಾವನಾತ್ಮಕ ಮತ್ತು ದೈಹಿಕ ಯೋಗಕ್ಷೇಮದ ಮೇಲೆ ಕೇಂದ್ರೀಕರಿಸುತ್ತದೆ. ಈ ವರ್ಷದ ವಿಷಯವು ರೋಗಿಗಳಿಗೆ ಚಿಕಿತ್ಸೆ ನೀಡುವ ವೈದ್ಯರು ಸಹ ಮನುಷ್ಯರು ಎಂಬುದನ್ನು ಒತ್ತಿಹೇಳುತ್ತದೆ.

ದೀರ್ಘ ಕೆಲಸದ ಸಮಯ, ಮಾನಸಿಕ ಒತ್ತಡ, ಭಾವನಾತ್ಮಕ ಒತ್ತಡ ಮತ್ತು ವೃತ್ತಿಪರ ಸವಾಲುಗಳು ಅವರ ಆರೋಗ್ಯದ ಮೇಲೂ ಪರಿಣಾಮ ಬೀರುತ್ತವೆ. ಇದರಿಂದ ವೈದ್ಯರ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ನೋಡಿಕೊಳ್ಳುವುದು ಅವರ ರೋಗಿಗಳನ್ನು ನೋಡಿಕೊಳ್ಳುವಷ್ಟೇ ಮುಖ್ಯವಾಗಿದೆ.

ವೈದ್ಯರ ಕುರಿತು ಗೌರವ ಮತ್ತು ಕೃತಜ್ಞತೆಯನ್ನು ವ್ಯಕ್ತಪಡಿಸಲು ಒಂದು ಅವಕಾಶವಾಗಿದೆ. ಆರೋಗ್ಯ ಸೇವೆಗಳಿಗೆ ಅವರ ಕೊಡುಗೆಗಳನ್ನು ಗುರುತಿಸುವುದು.

ಸಮಾಜದಲ್ಲಿ ವೈದ್ಯಕೀಯ ವೃತ್ತಿಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು. ವೈದ್ಯರ ಮಾನಸಿಕ ಆರೋಗ್ಯ ಮತ್ತು ಕೆಲಸ ಹಾಗೂ ಜೀವನದ ಸಮತೋಲನದ ಕುರಿತು ಚರ್ಚೆಗಳನ್ನು ಪ್ರೋತ್ಸಾಹಿಸುವುದು. ಯುವಜನರು ವೈದ್ಯಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಲು ಪ್ರೇರೇಪಿಸುವುದು.




ಆಸ್ಪತ್ರೆಗಳಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭಗಳನ್ನು ಆಯೋಜಿಸಲಾಗುತ್ತದೆ. ಅತ್ಯುತ್ತಮ ವೈದ್ಯರಿಗೆ ಪ್ರಶಸ್ತಿಗಳನ್ನು ನೀಡಲಾಗುತ್ತದೆ.

ಆರೋಗ್ಯ ಜಾಗೃತಿ ಅಭಿಯಾನಗಳನ್ನು ನಡೆಸಲಾಗುತ್ತದೆ.

ವೈದ್ಯಕೀಯ ಕಾಲೇಜುಗಳಲ್ಲಿ ವಿಚಾರ ಸಂಕಿರಣಗಳು ಮತ್ತು ಉಪನ್ಯಾಸಗಳನ್ನು ನಡೆಸಲಾಗುತ್ತದೆ. ವೈದ್ಯರಿಗೆ ಧನ್ಯವಾದ ಹೇಳಲು ಸೋಶಿಯಲ್ ಮೀಡಿಯಾದಲ್ಲಿ ವಿಶೇಷ ಅಭಿಯಾನಗಳನ್ನು ಪ್ರಾರಂಭಿಸಲಾಗುತ್ತದೆ.

# ನೇರಳೆ ಹಣ್ಣು ತಿಂದ ತಕ್ಷಣ ಹಾಲು ಕುಡಿಯುತ್ತೀರಾ? ಹೊಟ್ಟೆ ಸಮಸ್ಯೆಗೆ ಕಾರಣವಾಗಬಹುದು!

ಬೇಸಿಗೆಯಲ್ಲಿ ಹೆಚ್ಚು ದೊರೆಯುವ ನೇರಳೆ ಹಣ್ಣು (ಜಾಮೂನ್/ ಆರೋಗ್ಯಕ್ಕೆ ಅತ್ಯಂತ ಪ್ರಯೋಜನಕಾರಿ ಹಣ್ಣುಗಳಲ್ಲಿ ಒಂದಾಗಿದೆ. ರಕ್ತದಲ್ಲಿನ ಸಕ್ಕರೆ ಮಟ್ಟ ನಿಯಂತ್ರಿಸಲು, ಜೀರ್ಣಕ್ರಿಯೆ ಸುಧಾರಿಸಲು ಮತ್ತು ದೇಹಕ್ಕೆ ಅಗತ್ಯ ಆಂಟಿಆಕ್ಸಿಡೆಂಟ್‌ಗಳನ್ನು ಒದಗಿಸಲು ಇದು ಸಹಕಾರಿಯಾಗಿದೆ. ಆದರೆ ನೇರಳೆ ಹಣ್ಣನ್ನು ಕೆಲವು ಆಹಾರಗಳೊಂದಿಗೆ ಸೇವಿಸುವುದು ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ತಜ್ಞರು ಎಚ್ಚರಿಸಿದ್ದಾರೆ.

ಗುರುಗ್ರಾಮದ ನಾರಾಯಣ ಆಸ್ಪತ್ರೆಯ ಗ್ಯಾಸ್ಟ್ರೋಎಂಟರಾಲಜಿ, ಹೆಪಟಾಲಜಿ ಮತ್ತು ಲಿವರ್ ಟ್ರಾನ್ಸ್‌ಪ್ಲಾಂಟ್ ವಿಭಾಗದ ಹಿರಿಯ ತಜ್ಞ ಡಾ. ಸುಕೃತ್ ಸಿಂಗ್ ಸೇಥಿ ಅವರ ಪ್ರಕಾರ, ನೇರಳೆ ಹಣ್ಣು ಸ್ವಲ್ಪ ಆಮ್ಲೀಯ ಗುಣ ಹೊಂದಿದ್ದು, ಇದರಲ್ಲಿ ಟ್ಯಾನಿನ್ ಹಾಗೂ ಸಾವಯವ ಆಮ್ಲಗಳಿವೆ. ಸಾಮಾನ್ಯವಾಗಿ ಆರೋಗ್ಯವಂತರು ಯಾವುದೇ ತೊಂದರೆಯಿಲ್ಲದೆ ಇದನ್ನು ಸೇವಿಸಬಹುದು. ಆದರೆ ಸೂಕ್ಷ್ಮ ಜೀರ್ಣಕ್ರಿಯೆ ಹೊಂದಿರುವವರು ಕೆಲವು ಆಹಾರಗಳೊಂದಿಗೆ ಸೇವಿಸಿದರೆ ಹೊಟ್ಟೆಯ ಸಮಸ್ಯೆಗಳನ್ನು ಎದುರಿಸಬಹುದು. ತಜ್ಞರ ಪ್ರಕಾರ, ನೇರಳೆ ಹಣ್ಣು ತಿಂದ ತಕ್ಷಣ ಹಾಲು, ಮೊಸರು ಅಥವಾ ಚೀಸ್ ಸೇವಿಸುವುದನ್ನು ತಪ್ಪಿಸುವುದು ಉತ್ತಮ.

ಈ ಸಂಯೋಜನೆಯಿಂದ ಕೆಲವರಲ್ಲಿ ಗ್ಯಾಸ್, ಆಸಿಡಿಟಿ, ಹೊಟ್ಟೆ ಉಬ್ಬರ ಹಾಗೂ ಅಜೀರ್ಣ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಇದೆ. ವೈದ್ಯಕೀಯವಾಗಿ ಈ ಸಂಯೋಜನೆಯಿಂದ ಎಲ್ಲರಿಗೂ ಸಮಸ್ಯೆಯಾಗುತ್ತದೆ ಎಂಬುದಕ್ಕೆ ದೃಢವಾದ ಸಾಕ್ಷ್ಯಗಳಿಲ್ಲ. ಆದರೂ ನೇರಳೆಯಲ್ಲಿರುವ ಆಮ್ಲೀಯ ಅಂಶಗಳು ಹಾಲಿನ ಪ್ರೋಟೀನ್‌ಗಳೊಂದಿಗೆ ಪ್ರತಿಕ್ರಿಯಿಸಿ ಜೀರ್ಣಕ್ರಿಯೆಗೆ ತೊಂದರೆ ಉಂಟುಮಾಡಬಹುದು ಎಂದು ವೈದ್ಯರು ತಿಳಿಸಿದ್ದಾರೆ. ವಿಶೇಷವಾಗಿ ಆಸಿಡ್ ರಿಫ್ಲಕ್ಸ್ ಅಥವಾ ಹಾಲಿನ ಉತ್ಪನ್ನಗಳಿಗೆ ಅಸಹಿಷ್ಣುತೆ ಇರುವವರು ಹೆಚ್ಚಿನ ಎಚ್ಚರಿಕೆ ವಹಿಸಬೇಕು. ಕ್ತದಲ್ಲಿನ ಸಕ್ಕರೆ ಮಟ್ಟ ನಿಯಂತ್ರಿಸಲು ಸಹಕಾರಿ.ಜೀರ್ಣಕ್ರಿಯೆ ಸುಧಾರಿಸುತ್ತದೆ. ಆಂಟಿಆಕ್ಸಿಡೆಂಟ್‌ಗಳಿಂದ ರೋಗನಿರೋಧಕ ಶಕ್ತಿ ಹೆಚ್ಚಿಸುತ್ತದೆ. ಕಡಿಮೆ ಕ್ಯಾಲೊರಿ ಇರುವುದರಿಂದ ತೂಕ ನಿಯಂತ್ರಣಕ್ಕೂ ಸಹಕಾರಿ.ಬೇಸಿಗೆಯಲ್ಲಿ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ:** ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ಪತ್ನಿಯ ಕೆಲಸವನ್ನು ಕಡಿಮೆ ಮಾಡಲು ಅವರಿಗೆ ಮನೆಗೆಲಸದಲ್ಲಿ ಸಹಾಯ ಮಾಡಿ. ಇದು ಹಂಚಿಕೆ ಮತ್ತು ಸಂತೋಷವನ್ನು ಹೆಚ್ಚಿಸುತ್ತದೆ.

**ವೃಷಭ:** ಮಕ್ಕಳ ನಿಮ್ಮ ಇಚ್ಛೆಯಂತೆ ನಡೆದುಕೊಳ್ಳದಿದ್ದಲ್ಲಿ ಹಾಗೂ ಇದು ನಿಮಗೆ ಕೋಪ ತರುತ್ತದೆ. ಅನಿಯಂತ್ರಿತ ಕೋಪ ಸಾಮಾನ್ಯವಾಗಿ ಎಲ್ಲರನ್ನೂ ಹಾಗೂ ವಿಶೇಷವಾಗಿ ಕೋಪಗೊಂಡವರನ್ನು ಹೆಚ್ಚು ಘಾಸಿಗೊಳಿಸುತ್ತದೆ. ಏಕೆಂದರೆ ಇದು ಶಕ್ತಿಯನ್ನು ಕುಂಠಿತಗೊಳಿಸುತ್ತದೆ

**ಮಿಥುನ:** ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಳೆಯುವ ಸಾಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದ ಚೀಲವನ್ನು ಎಚ್ಚರಿಕೆಯಿಂದಿಡಿ.

**ಕರ್ಕಾಟಕ:** ನಿಮ್ಮ ಪ್ರಿಯತಮೆಯ ಜೊತೆ ತಿಳುವಳಿಕೆ. ಉನ್ನತ ಮಟ್ಟದಲ್ಲಿ ಕೆಲಸ ಮಾಡುವ ಕೆಲವರಿಂದ ಸ್ವಲ್ಪ ವಿರೋಧ ಬರಬಹುದಾದರೂ ನ ಶಾಂತವಾಗಿರುವುದು ಮುಖ್ಯ. ಉಪದ ಸ್ಥಳದಲ್ಲಿ ಯಾವುದೇ ಕೆಲಸ ಹದಗೆಡುವ ಕಾರಣದಿಂದಾಗಿ ಇಂದು ನೀವು ತೊಂದರೆಗೊಳಗಾಗಬಹುದು.

**ಸಿಂಹ:** ನಿಮ್ಮ ಸಕಾರಾತ್ಮಕ ದೃಷ್ಟಿಕೋನ ಮತ್ತು ಆತ್ಮವಿಶ್ವಾಸದಿಂದ ನಿಮ್ಮ ಸುತ್ತಲಿರುವ ಜನರನ್ನು ಪ್ರಭಾವಿಸಬಹುದಾದ ಸಾಧ್ಯತೆಗಳಿವೆ. ನೀವು ನಿಮ್ಮ ಕಳೆದ ಸಮಯದಲ್ಲಿ ಬಹಳಷ್ಟು ಹಣವನ್ನು ಖರ್ಚು ಮಾಡಿದ್ದಿರಿ ಇದರ ತೊಂದರೆ ನೀವು ಇಂದು ಅನುಭವಿಸಬೇಕಾಗಬಹುದು.

**ಕನ್ಯಾ:** ಇಂದು ರಾತ್ರಿ ಸಣ್ಣ ವಿಷಯಗಳಲ್ಲೂ ಕೂಡ ನಿಮ್ಮ ಪ್ರಿಯತಮೆಯ ಜೊತೆಗಿನ ಸಂಬಂಧಗಳು ಶಿಥಿಲಗೊಳ್ಳುತ್ತವೆ. ನೀವು ಮುಕ್ತ ದೃಷ್ಟಿಯನ್ನು ಇಟ್ಟುಕೊಂಡರೆ ಕೆಲವು ಉತ್ತಮ ಅವಕಾಶಗಳು ಬರಬಹುದು. ಕಷ್ಟದಲ್ಲಿರುವವರಿಗೆ ಸಹಾಯ ಮಾಡುವ ನಿಮ್ಮ ಸಾಮರ್ಥ್ಯ ನಿಮಗೆ ಗೌರವ ತರುತ್ತದೆ.

**ತುಲಾ:** ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

**ವೃಶ್ಚಿಕ:** ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು ಮತ್ತು ಅವರ ಆರೋಗ್ಯದ ಮೇಲೆ ಬಹಳಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

**ಧನಸ್ಸು:** ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ನೀವು ಕುಟುಂಬದಲ್ಲಿ ಒಂದು ಸಂಧಿಗ್ದನಂತೆ ವರ್ತಿಸುತ್ತೀರಿ. ಎಲ್ಲರ ಸಮಸ್ಯೆಗಳಿಗೂ ಕಿವಿಗೊಡಿ ಹಾಗೂ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ಮಕರ:** ಹರಟೆ ನಿಮ್ಮ ಸಮಯ ವ್ಯರ್ಥ ಮಾಡುವುದಕ್ಕಿಂತ ಸುಮ್ಮನಿರುವುದು ಉತ್ತಮ. ನಾವು ಬುದ್ಧಿವಂತ ಚಟುವಟಿಕೆಗಳ ಮೂಲಕ ಜೀವನಕ್ಕೆ ಅರ್ಥ ನೀಡಬೇಕೆಂದು ನೆನಪಿಡಿ. ನೀವು ಅವರ ಕಾಳಜಿ ವಹಿಸುತ್ತೀರೆಂದು ಅವರಿಗೆ ತಿಳಿಯುವಂತೆ ಮಾಡಿ. ಪ್ರೀತಿ ದೇವರ ಪೂಜೆಗೆ ಸಮಾನವಾಗಿದೆ.

**ಕುಂಭ:** ನಿಮ್ಮ ಒತ್ತಡವನ್ನು ನೀವು ತೊಡೆದುಹಾಕಬಹುದು. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ. ನಿಮ್ಮ ಕನಸುಗಳು ಹಾಗೂ ವಾಸ್ತವವು ಪ್ರೀತಿಯ ಭಾವಪರವಶತೆಯಲ್ಲಿ ಇಂದು ಸೇರಿಹೋಗುತ್ತವೆ.

**ಮೀನ:** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ.

# ಗೂಳಿ ಓಟದ ಕಾರ್ಯಕ್ರಮದಲ್ಲಿ ಪಟಾಕಿ ಸಿಡಿಸುವ ಸಂಬಂಧ ಗುಂಪು ಘರ್ಷಣೆ, 8 ಮಂದಿಗೆ ಗಾಯ

**• ಉದಯವಾಹಿನಿ ಹಾವೇರಿ:**

ಜಿಲ್ಲೆಯ ಹಾನಗಲ್ ತಾಲ್ಲೂಕಿನ ನರೇಗಲ್ ಗ್ರಾಮದಲ್ಲಿ ಕಾರ ಹುಣ್ಣಿಮೆ ಹಬ್ಬದ ಅಂಗವಾಗಿ ನಡೆದ ಸಾಂಪ್ರದಾಯಿಕ ಹೋರಿ ಓಟದ ಸಂದರ್ಭದಲ್ಲಿ ಪಟಾಕಿ ಸಿಡಿಸುವುದಕ್ಕೆ ಸಂಬಂಧಿಸಿದಂತೆ ಎರಡು ಗುಂಪುಗಳ ನಡುವೆ ನಡೆದ ಘರ್ಷಣೆಯಲ್ಲಿ ಎಂಟು ಜನರು ಗಾಯಗೊಂಡಿದ್ದಾರೆ. ಪೊಲೀಸರು ಮಧ್ಯಪ್ರವೇಶಿಸಿ ಪರಿಸ್ಥಿತಿಯನ್ನು ಸಾಮಾನ್ಯ ಸ್ಥಿತಿಗೆ ತಂದರು ಎಂದು ಹಾವೇರಿ ಎಸ್‌ಪಿ ಯಶೋದಾ ವಂಟಗೋಡಿ ಹೇಳಿದ್ದಾರೆ. ಗಾಯಾಳುಗಳು ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಈ ಘಟನೆ ಆಡೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಕಾರ ಹುಣ್ಣಿಮೆ ಆಚರಣೆಯ ಭಾಗವಾಗಿ ಅಲಂಕರಿಸಿದ ಹೋರಿಗಳನ್ನು ಬಿಡುಗಡೆ ಮಾಡಲಾಗಿದೆ. ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಲೋಹಿತ್, ಜಯಪ್ಪ ಮತ್ತು ಶಿವರಾಜ್ ಅವರನ್ನು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ


ಉದಯವಾಹಿನಿ ಚಿತ್ರ

ದಾಖಲಿಸಲಾಗಿದೆ, ಇತರ ಮೂವರಾದ ನಿಂಗಪ್ಪ, ಮಲ್ಲಪ್ಪ ಮತ್ತು ನಾಗಪ್ಪ ಅವರು ಹಾವೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆದರೆ ಇಲ್ಲಿಯವರೆಗೆ ಯಾರನ್ನೂ ಬಂಧಿಸಲಾಗಿಲ್ಲ.

ನಾವು ಎರಡೂ ಕಡೆಯ ನಾಯಕರೊಂದಿಗೆ ಮಾತನಾಡಿದ್ದೇವೆ ಮತ್ತು ಶಾಂತಿ ಕಾಪಾಡುವಂತೆ ಸಲಹೆ ನೀಡಿದ್ದೇವೆ. ಹಿಂಸಾಚಾರದಲ್ಲಿ ಭಾಗಿಯಾಗಿರುವವರನ್ನು ಯಾರೂ ಬೆಂಬಲಿಸುತ್ತಿಲ್ಲ. ಘಟನೆಗೆ ನಿಖರವಾದ ಕಾರಣ ಇನ್ನೂ ತಿಳಿದುಬಂದಿಲ್ಲ. ಮೊದಲ ನೋಟಕ್ಕೆ, ಇದು ವೈಯಕ್ತಿಕ ವಿವಾದದಿಂದ ಉಂಟಾಗಿರುವಂತೆ ತೋರುತ್ತದೆ. ಪಟಾಕಿ ಸಿಡಿಸಿದ್ದು ಇದಕ್ಕೆ ಕಾರಣ. ದೂರು ದಾಖಲಾದ ನಂತರ, ಕಾರಣರಾದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. ಒಂದು ಗುಂಪಿನ ಆರು ಜನರು ಮತ್ತು ಇನ್ನೊಂದು ಗುಂಪಿನ ಇಬ್ಬರು ಗಾಯಗೊಂಡಿದ್ದಾರೆ ಎಂದು ಅವರು ಹೇಳಿದರು.

> ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದ್ದೇವೆ. ಗ್ರಾಮ ಶಾಂತವಾಗಿದೆ ಮತ್ತು ಯಾವುದೇ ಭಯ ಅಥವಾ ಉದ್ವಿಗ್ನತೆಯ ಪರಿಸ್ಥಿತಿ ಇಲ್ಲ. ಬಿಗಿ ಪೊಲೀಸ್ ಭದ್ರತೆಯನ್ನು ನಿಯೋಜಿಸಲಾಗಿದೆ ಎಂದು ಹೇಳಿದರು.
> ಎಸ್ ಪಿ ವಂಟಗೋಡಿ

# ಎಲ್ಲಾ ಅನುಮತಿ ಸಿಕ್ಕ ಬಳಿಕವೇ ಶರಾವತಿ ಯೋಜನೆ ಆರಂಭ, ಆತಂಕ ಬೇಡ: ಸಚಿವ ಕೆ.ಜೆ. ಜಾರ್ಜ್

## ಅರಣ್ಯ ಪ್ರದೇಶದ ಸಂರಕ್ಷಣೆ ಹಾಗೂ ಕಾನೂನುಬದ್ಧ ನಿಯಮಗಳ ಪಾಲನೆ ಕುರಿತು ಸರ್ಕಾರ ಸಂಪೂರ್ಣ ಬದ್ಧವಾಗಿದೆ.

**• ಉದಯವಾಹಿನಿ ಶಿವಮೊಗ್ಗ:**

ರಾಜ್ಯದ ಮಹತ್ವಾಕಾಂಕ್ಷೆಯ ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಗೆ ಸಂಬಂಧಿಸಿದಂತೆ ಕೇಳಿಬರುತ್ತಿರುವ ಟೀಕೆಗಳು ಮತ್ತು ಆತಂಕಗಳಿಗೆ ಇಂಧನ ಸಚಿವ ಕೆ.ಜೆ. ಜಾರ್ಜ್ ಸ್ಪಷ್ಟನೆ ನೀಡಿದ್ದಾರೆ.

ಪರಿಸರ ಹಾಗೂ ಕಾನೂನುಬದ್ಧ ಎಲ್ಲಾ ಅನುಮತಿಗಳು ದೊರೆಯುವವರೆಗೆ ಯೋಜನೆಯ ಯಾವುದೇ ಕಾಮಗಾರಿ

### ಮುಖ್ಯಾಂಶಗಳು

1 : ಶರಾವತಿ ಪಂಪ್ಡ್ ಸ್ಟೋರೇಜ್
2 : ಪರಿಸರ ಹಾಗೂ ಕಾನೂನುಬದ್ಧ
3 : ಗೃಹ ಜ್ಯೋತಿ ಯೋಜನೆ

ಆರಂಭಿಸುವುದಿಲ್ಲ ಎಂದು ಅವರು ಹೇಳಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಇದು ಯಾರ ಮನಸ್ಸಿಗೆ ಬಂದಂತೆ ಮಾಡುವ ಯೋಜನೆಯಲ್ಲ. ಇಂದು


ಉದಯವಾಹಿನಿ ಚಿತ್ರ

ತೀರ್ಮಾನ ಮಾಡಿ ನಾಳೆಯೇ ಕಾಮಗಾರಿ ಆರಂಭಿಸಲು ಸಾಧ್ಯವಿಲ್ಲ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅರಣ್ಯ ಇಲಾಖೆ ಹಾಗೂ ಸಂಬಂಧಿತ ರಾಷ್ಟ್ರೀಯ ಸಂಸ್ಥೆಗಳಿಂದ ಅಗತ್ಯ ಅನುಮತಿ ಪಡೆಯುವುದು ಕಡ್ಡಾಯ.

ತಜ್ಞರ ತಂಡಗಳು ಈಗಾಗಲೇ ಯೋಜನೆಯ ವಿವಿಧ ಅಂಶಗಳನ್ನು ಪರಿಶೀಲಿಸುತ್ತಿವೆ. ಎಲ್ಲಾ ಅನುಮತಿಗಳು ದೊರೆತ ನಂತರವೇ ನಿರ್ಮಾಣ ಕಾರ್ಯ ಆರಂಭವಾಗುತ್ತದೆ ಎಂದು ಸ್ಪಷ್ಟಪಡಿಸಿದರು. ಯೋಜನೆಗೆ ಸಂಬಂಧಿಸಿದ ಪರಿಸರದ ಪರಿಣಾಮ, ಅರಣ್ಯ ಪ್ರದೇಶದ ಸಂರಕ್ಷಣೆ ಹಾಗೂ ಕಾನೂನುಬದ್ಧ ನಿಯಮಗಳ ಪಾಲನೆ ಕುರಿತು ಸರ್ಕಾರ ಸಂಪೂರ್ಣ ಬದ್ಧವಾಗಿದೆ. ಎಲ್ಲಾ ಪ್ರಕ್ರಿಯೆಗಳು ಪೂರ್ಣಗೊಂಡ ಬಳಿಕವೇ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಇದೇ ವೇಳೆ ಗೃಹ ಜ್ಯೋತಿ ಯೋಜನೆ ಕುರಿತು ಮಾತನಾಡಿದ ಸಚಿವರು,

ಯೋಜನೆಯ ನಿಜವಾದ ಫಲಾನುಭವಿಗಳಿಗೆ ಮಾತ್ರ ಉಚಿತ ವಿದ್ಯುತ್ ಸೌಲಭ್ಯ ಮುಂದುವರಿಯಲಿದೆ ಎಂದು ಹೇಳಿದರು. ವಿದ್ಯುತ್ ವಿತರಣಾ ಸಂಸ್ಥೆಗಳ ಖಾಸಗೀಕರಣದ ವಿರುದ್ಧ ರೈತ ಸಂಘಟನೆಗಳು ವ್ಯಕ್ತಪಡಿಸಿರುವ ಆತಂಕದ ಕುರಿತು ಪ್ರತಿಕ್ರಿಯಿಸಿದ ಸಚಿವರು, ವಿದ್ಯುತ್ ವಿತರಣೆಯನ್ನು ಖಾಸಗೀಕರಣಗೊಳಿಸುವ ಪ್ರಸ್ತಾವನೆಯನ್ನು 2003ರಲ್ಲಿ ಬಿಜೆಪಿ ಸರ್ಕಾರವೇ ಮುಂದಿಟ್ಟಿತ್ತು.

ಆದರೆ, ಕರ್ನಾಟಕ ಸರ್ಕಾರ ಆ ದಾರಿಯಲ್ಲಿ ಸಾಗುವುದಿಲ್ಲ. ಮುಖ್ಯಮಂತ್ರಿ ಈಗಾಗಲೇ ಈ ಕುರಿತು ಸ್ಪಷ್ಟಪಡಿಸಿದ್ದಾರೆ. ನಾನೂ ಮತ್ತೊಮ್ಮೆ ಹೇಳುತ್ತಿದ್ದೇನೆ, ವಿದ್ಯುತ್ ವಿತರಣಾ ಸಂಸ್ಥೆಗಳ ಖಾಸಗೀಕರಣಕ್ಕೆ ನಮ್ಮ ಸರ್ಕಾರದ ಬೆಂಬಲ ಇಲ್ಲ ಎಂದು ಸ್ಪಷ್ಟಪಡಿಸಿದರು.

> ಯೋಜನೆಯ ಲಾಭವನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವವರನ್ನು ಮಾತ್ರ ಗುರುತಿಸಿ ಹೊರಗಿಡಲಾಗುತ್ತಿದೆ. ಅರ್ಹ ಕುಟುಂಬಗಳಿಗೆ ಯಾವುದೇ ತೊಂದರೆ ಆಗುವುದಿಲ್ಲ. ನಿಜವಾದ ಫಲಾನುಭವಿಗಳು ಉಚಿತ ವಿದ್ಯುತ್ ಸೌಲಭ್ಯವನ್ನು ಮುಂದುವರಿಸಿಕೊಂಡು ಹೋಗಲಿದ್ದಾರೆ, ಎಂದು ತಿಳಿಸಿದರು.
> –ಸಚಿವ ಕೆ.ಜೆ. ಜಾರ್ಜ್

> ಸರ್ಕಾರ ಸಾರ್ವಜನಿಕ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ವಿದ್ಯುತ್ ಕ್ಷೇತ್ರದಲ್ಲಿ ಅಗತ್ಯ ಸುಧಾರಣೆಗಳನ್ನು ಕೈಗೊಳ್ಳಲಿದ್ದು, ರೈತರು ಹಾಗೂ ಸಾಮಾನ್ಯ ಗ್ರಾಹಕರ ಹಿತಾಸಕ್ತಿಗೆ ಧಕ್ಕೆಯಾಗದಂತೆ ಎಲ್ಲಾ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುವುದು ಎಂದು ಭರವಸೆ ನೀಡಿದರು.
> –ಸಚಿವ ಕೆ.ಜೆ. ಜಾರ್ಜ್

# ಮಣ್ಣಿನ ಫಲವತ್ತತೆ ಕೊರತೆ: ವಿಜ್ಞಾನಿಗಳಿಂದ ಬಯೋಚಾರ್ ತಂತ್ರಜ್ಞಾನ ಅಭಿವೃದ್ಧಿ,

**• ಉದಯವಾಹಿನಿ ಹುಬ್ಬಳ್ಳಿ:**

ಸಣ್ಣ ಮತ್ತು ಅತಿಸಣ್ಣ ಮಟ್ಟದ ರೈತರು ಮಣ್ಣಿನ ಪೋಷಕಾಂಶವನ್ನು ಹೆಚ್ಚಿಸಿಕೊಳ್ಳಲು ನೆರವಾಗುವ ಕಡಿಮೆ ವೆಚ್ಚದ ಬಯೋಚಾರ್ ತಂತ್ರಜ್ಞಾನವನ್ನು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಧಾರವಾಡ ಮತ್ತು ಗಾಂಧಿ ಕೃಷಿ ವಿಜ್ಞಾನ ಕೇಂದ್ರ, ಬೆಂಗಳೂರು ವಿಜ್ಞಾನಿಗಳು ಅಭಿವೃದ್ಧಿಪಡಿಸಿದ್ದಾರೆ.

ಯುಎಎಸ್ ಕುಲಪತಿ ಎಸ್.ವಿ. ಸುರೇಶ್ ಈ ಬಗ್ಗೆ ಮಾಹಿತಿ ನೀಡಿ, ಕರ್ನಾಟಕದ ಅರ್ಧಕ್ಕಿಂತ ಹೆಚ್ಚು ಕೃಷಿಭೂಮಿಯಲ್ಲಿ ಮಣ್ಣಿನ ಸಾವಯವ ಇಂಗಾಲದ ಪ್ರಮಾಣ ಅಗತ್ಯ ಮಟ್ಟಕ್ಕಿಂತ ಕೆಳಗೆ ಇಳಿದಿದೆ. ಇನ್ನು ಮುಂದೆ ನಿರ್ಲಕ್ಷಿಸಲು ಸಾಧ್ಯವಿಲ್ಲ. ರೈತರು ಸುಡುವ ಕೃಷಿ ಅವಶೇಷಗಳನ್ನು ಬಯೋಚಾರ್ ಆಗಿ ಪರಿವರ್ತಿಸುವ ಮೂಲಕ ಮಣ್ಣಿನ ಪುನರುಜ್ಜೀವನಕ್ಕೆ ನೆರವಾಗಬಹುದು ಎಂದು ಹೇಳಿದರು.

ಯುಎಎಸ್‌ನ ಅಖಿಲ ಭಾರತ ಸಮನ್ವಿತ ಸಂಶೋಧನಾ ಯೋಜನೆ – ಮಣ್ಣಿನ ಪರೀಕ್ಷೆ ಮತ್ತು ಬೆಳೆ ಪ್ರತಿಕ್ರಿಯೆ ವಿಭಾಗದ ಮುಖ್ಯಸ್ಥ ಡಾ. ಆರ್. ಕೃಷ್ಣಮೂರ್ತಿ, ಬಯೋಚಾರ್ ತಯಾರಿಸಲು ಯಾವುದೇ ಹೊರಗಿನ ರಾಸಾಯನಿಕಗಳು ಅಥವಾ ಪೂರಕ ವಸ್ತುಗಳನ್ನು ಬಳಸುವುದಿಲ್ಲ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ತೊಗರಿ, ಮೆಕ್ಕೆಜೋಳ ಮತ್ತು ಮಲ್ಬೆರಿ ಕಾಂಡಗಳು, ಸೂರ್ಯಕಾಂತಿ ಹಾಗೂ ಇತರ ಬೆಳೆಗಳ ಕೊಂಬೆ ಕತ್ತರಿಸಿದ ಅವಶೇಷಗಳಂತಹ ಸ್ಥಳೀಯವಾಗಿ ಲಭ್ಯವಿರುವ ಕೃಷಿ ತ್ಯಾಜ್ಯಗಳನ್ನು ಬಳಸಲಾಗುತ್ತದೆ ಎಂದು ಅವರು ಹೇಳಿದರು.

ನಾವು ವಿಶೇಷವಾಗಿ 25 ಕೆ.ಜಿ. ಸಾಮರ್ಥ್ಯದ ಡ್ರಮ್‌ನ್ನು ವಿನ್ಯಾಸಗೊಳಿಸಿದ್ದೇವೆ. ಇದರಲ್ಲಿ ಸೀಮಿತ ಪ್ರಮಾಣದ ಆಮ್ಲಜನಕ ಹರಿಯುವಂತೆ ರಂಧ್ರಗಳಿರುತ್ತವೆ. ಕಚ್ಚಾ ವಸ್ತುಗಳನ್ನು ಮುಚ್ಚಳ ಮುಚ್ಚಿದ ಸ್ಥಿತಿಯಲ್ಲಿ ಸುಮಾರು ಮೂರು ಗಂಟೆಗಳ ಕಾಲ ಸುಟ್ಟರೆ ಬಯೋಚಾರ್ ಸಿದ್ಧವಾಗುತ್ತದೆ. ಒಂದು ಕೆ.ಜಿ. ಬಯೋಚಾರ್‌ನಲ್ಲಿ 500ರಿಂದ 800 ಗ್ರಾಂ (ಶೇ.50–80) ಇಂಗಾಲ ಇರುತ್ತದೆ ಎಂದು ವಿವರಿಸಿದರು.

# ಸಾಲುಮರದ ತಿಮ್ಮಕ್ಕನ ತ್ಯಾಗದ ಹಾದಿ ಎಲ್ಲರಿಗೂ ಪರಿಸರ ಪ್ರೇಮದ ಸ್ಫೂರ್ತಿ

**• ಉದಯವಾಹಿನಿ ವಿಜಯಪುರ,:**

ಒಂದು ಗಿಡ ನೆಡುವುದು ಪ್ರಕೃತಿಗೆ ನಾವು ಸಲ್ಲಿಸುವ ಅತ್ಯುತ್ತಮ ಗೌರವವಾಗಿದೆ ಎಂದು ಪಟ್ಟಣದ ಶ್ರೀ ಬಸವಕಲ್ಯಾಣ ಮಠದ ಕಿರಿಯ ಶ್ರೀ ನಿ.ಪ್ರ.ಸ್ವ. ಸದಾಶಿವ ಸ್ವಾಮೀಜಿ ತಿಳಿಸಿದರು.

ಮೇಲೂರು ರಸ್ತೆಯ ಶ್ರೀ ಬಸವಕಲ್ಯಾಣ ಮಠದ ಆವರಣದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ವತಿಯಿಂದ ಆಯೋಜಿಸಲಾದ ವೃಕ್ಷಮಾತೆ ನಾಡೋಜ ಪದ್ಮಶ್ರೀ ಡಾ. ಸಾಲುಮರದ ತಿಮ್ಮಕ್ಕ ನವರ 115ನೇ ಜನ್ಮದಿನಾಚರಣೆ ಅಂಗವಾಗಿ ಶ್ರೀ ಬಸವಕಲ್ಯಾಣ ಮಠದ ಬಸ್ ನಿಲ್ದಾಣದ ಬಳಿ ಆಯೋಜಿಸಲಾದ ಸಸಿನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಈ ಪುಣ್ಯದಿನದಂದು ಒಬ್ಬ ವ್ಯಕ್ತಿ ಅಥವಾ ಒಬ್ಬ ವಿದ್ಯಾರ್ಥಿ ಒಂದು ಗಿಡನೆಡುವ ಸಂಕಲ್ಪದೊಂದಿಗೆ ಪ್ರತಿಯೊಬ್ಬರೂ ಕನಿಷ್ಟ ಒಂದು ಗಿಡವನ್ನು ನೆಟ್ಟು ವೃಕ್ಷ ಮಹಾಮಾತೆ ಸಾಲು


ಉದಯವಾಹಿನಿ ಚಿತ್ರ

ಮರದ ತಿಮ್ಮಕ್ಕರ 115ನೇ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಿ ಆಚರಿಸೋಣ ಎಂದು ತಿಳಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಅಧ್ಯಕ್ಷ ಡಾ.ವಿ.ಪ್ರಶಾಂತ ಮಾತನಾಡಿ, ಸಾಲುಮರದ ತಿಮ್ಮಕ್ಕರ ಹಸಿರು ಕ್ರಾಂತಿಯನ್ನ ನಮ್ಮ ರಾಜ್ಯದಲ್ಲಿ ಮುನ್ನಡೆಸಿದ ರೀತಿ ಇಂದಿನ ಯುವ ಪೀಳಿಗೆಗೆ ಅತ್ಯಂತ ಸ್ಫೂರ್ತಿದಾಯಕ. ಆದ್ದರಿಂದ ಮರಗಳನ್ನು ತಮ್ಮ ಮಕ್ಕಳಂತೆ ಪ್ರೀತಿಸಿ ಬೆಳೆಸಿದವರು ಇಂದಿಗೂ ಸಹ ಇವರ ಹೆಸರು ಇತಿಹಾಸದ ಪುಟಗಳಲ್ಲಿ ಅಜರಾಮರವಾಗಿದೆ ಎಂದು ತಿಳಿಸಿದರು.

# ಮಣ್ಣು ಕುಸಿದು ಮೂವರ ದುರ್ಮರಣ, ಮೃತರ ಕುಟುಂಬಕ್ಕೆ ತಲಾ 5 ಲಕ್ಷ ರೂ. ಪರಿಹಾರ !

**• ಉದಯವಾಹಿನಿ ಮಂಗಳೂರು:**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ರಾತ್ರಿ ಸುರಿದ ಧಾರಾಕಾರ ಮಳೆ ಭಾರೀ ಅನಾಹುತಕ್ಕೆ ಕಾರಣವಾಗಿದ್ದು, ಮಂಗಳೂರು ನಗರದ ಕಂಕನಾಡಿ ಸಮೀಪದ ನಾಗುರಿಯಲ್ಲಿ ಭೂಕುಸಿತವಾಗಿ ಮನೆ ಮೇಲೆ ಮಣ್ಣು ಬಿದ್ದ ಪರಿಣಾಮ ತಾಯಿ ಹಾಗೂ ಇಬ್ಬರು ಪುಟ್ಟ ಮಕ್ಕಳು ಮೃತಪಟ್ಟಿರುವ ಹೃದಯವಿದ್ರಾವಕ ಘಟನೆ ಬುಧವಾರ ಮುಂಜಾನೆ ನಡೆದಿದೆ. ಮೃತರನ್ನು ಶಾಂತಾ (46), ಅನಾಮಿಕಾ ಚೌರಾಸಿಯಾ (8) ಹಾಗೂ ಪರಿ (4) ಎಂದು ಗುರುತಿಸಲಾಗಿದೆ.

ಇವರು ಮೂಲತಃ ಬಿಹಾರದ ನಿವಾಸಿಗಳಾಗಿದ್ದು, ಕಟ್ಟಡ ನಿರ್ಮಾಣ ಕಾಮಗಾರಿಗಾಗಿ ಮಂಗಳೂರಿಗೆ ಬಂದು ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದರು ಎಂದು ತಿಳಿದುಬಂದಿದೆ. ಮಂಗಳವಾರ ರಾತ್ರಿಯಿಂದ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಧಾರಾಕಾರ ಮಳೆ ಸುರಿದಿದ್ದು, ಹಲವೆಡೆ ಕೃತಕ ನೆರೆ ಹಾಗೂ ಭೂಕುಸಿತದ ಘಟನೆಗಳು ವರದಿಯಾಗಿವೆ. ಇದೇ ವೇಳೆ ಕಂಕನಾಡಿ ನಗರ ಪೊಲೀಸ್ ಠಾಣೆ ಸಮೀಪದ ನಾಗುರಿಯಲ್ಲಿರುವ ಮನೆಯ ಮೇಲ್ಭಾಗದ ಮೇಲೆ ಮಣ್ಣು ಏಕಾಏಕಿ ಕುಸಿದು ಬಿದ್ದಿದೆ.

# ಮೂವರ ಬಂಧನ 2.ಕೆ.ಜಿ.600 ಗ್ರಾಂ.ಗಾಂಜಾ ವಶ

**• ಉದಯವಾಹಿನಿ ಕಲಬುರಗಿ,-**

ಸಿಸಿಬಿ ಪೊಲೀಸರ ಕಾರ್ಯಾಚರಣೆ ನಡೆಸಿ ನಗರದ ಸಬ್ ಅರ್ಬನ್ ಪೊಲೀಸ್ ಠಾಣಾ ವ್ಯಾಪ್ತಿಯ ಕಾಕಡೆ ಚೌಕ್ ಹತ್ತಿರ ನಿಷೇದಿತ ಗಾಂಜಾ ಮಾರಾಟ ಮಾಡುತ್ತಿದ್ದ ಮೂವರು ಆರೋಪಿಗಳನ್ನು ಬಂಧಿಸಿ 2,60,000/– ರೂಪಾಯಿ ಮೌಲ್ಯದ 2 ಕೆಜಿ, 600 ಗ್ರಾಂ.ನಿಷೇಧಿತ ಗಾಂಜಾವನ್ನು ಜಪ್ತಿ ಮಾಡಿದ್ದಾರೆ.

ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಅವರ ನಿರ್ದೇಶನದಂತೆ ಡಿಸಿಪಿಗಳಾದ ಶಾಲೂ, ಪ್ರವೀಣ್ ಹೆಚ್.ನಾಯಕ್, ಸಿಸಿಬಿ ಘಟಕದ ಎಸಿಪಿ ಜೇಮ್ಸ್ ಮಿನೇಜಸ್ ಅವರ ಮಾರ್ಗದರ್ಶನದಲ್ಲಿ ಸಿಸಿಬಿ ಘಟಕದ ಪಿಐ ಅರುಣಕುಮಾರ ಅವರ ನೇತೃತ್ವದಲ್ಲಿ ಸಿಬ್ಬಂದಿಗಳಾದ ಮೃತ್ಯುಂಜಯ, ರಾಜಕುಮಾರ, ಪ್ರದೀಪ್, ಅಂಬಾಜಿ, ಅಶೋಕ ಕಟಕೆ, ನಾಗೇಂದ್ರ, ಶಿವಲಿಂಗ, ನಾಗರಾಜ ಅವರನ್ನು ಒಳಗೊಂಡ ತಂಡ ಕಾರ್ಯಾಚರಣೆ ನಡೆಸಿ ನಗರದ ಸಬ್–ಅರ್ಬನ್ ಪೊಲೀಸ್ ಠಾಣೆ ವ್ಯಾಪ್ತಿಯ ಕಾಕಡೆ ಚೌಕ್ ಹತ್ತಿರವಿರುವ ಕಾಕಡೆ ನಗರದ ಸಮೀಪದ ಸಾರ್ವಜನಿಕ ಸ್ಥಳದಲ್ಲಿ ನಿಷೇಧಿತ ಗಾಂಜಾ ಮಾರಾಟ ಮಾಡುತ್ತಿದ್ದ ಮಿಜಗುರಿಯ ಲದಾಫ್ ಬಸೀರ್ ಹಸನ್ ತಂದೆ ಹಸನ್ ಲದಾಫ್ (42), ಕಾಕಡೆ ಚೌಕ್‌ನ ಖುತುಬುದ್ದಿನ್ ತಂದೆ ಮೈಬೂಬ್ ಶೇಖ್ (50) ಮತ್ತು ಅಬ್ದುಲ್ ಗನಿ ತಂದೆ ಹಾಶೀಮ್ ಶೇಖ್ (41) ಎಂಬುವವರನ್ನು ಬಂಧಿಸಿ 2.20 ಲಕ್ಷ ರೂ.ಮೌಲ್ಯದ 2.ಕೆ.ಜಿ.,600 ಗ್ರಾಂ.ಗಾಂಜಾ, 2,100 ರೂ.ನಗದು ಮತ್ತು 2 ಕೀಪ್ಯಾಡ್ ಮೊಬೈಲ್ ವಶಪಡಿಸಿಕೊಂಡಿದ್ದಾರೆ.

# ಗರದ ಶಾಲಾ ವಾಹನಗಳ ಫಿಟ್ ನೆಸ್ ಪರಿಶೀಲಿಸಿದ ಆರ್ ಟಿ ಓ ಇನ್ಸ್ ಪೆಕ್ಟರ್

**• ಉದಯವಾಹಿನಿ ಬಳ್ಳಾರಿ, :**

ನಗರಲ್ಲಿ ಸಂಚರಿಸುವ ಖಾಸಗಿ ಶಾಲೆಗಳ ವಾಹನಗಳ ಕ್ಷಮತಾ ಮತ್ತು ವಿಮೆ ಪ್ರಮಾಣ ಪತ್ರಗಳನ್ನು ಆರ್ ಟಿ ಓ ಇನ್ ಪೆಕ್ಟರ್ ಸಂತೋಷ್ ಅವರು ಇಂದು ಪರಿಶೀಲನೆ ನಡೆಸಿದ್ದಾರೆ. ಆರ್ ಟಿ ಓ ನಿಜಾಮುದ್ದೀನ್ ಅವರಿಗೆ ಸಾಮಾಜಿಕ ಹೋರಾಟಗಾರ ಊಳೂರು ಸಿದ್ದೇಶ್ ಮತ್ತವರ ತಂಡ ನಿಮಯ ಉಲ್ಲಂಘನೆ ಮಾಡಿ, ಅಗತ್ಯ ದಾಖಲೆಗಳಿಲ್ಲದೆ ಖಾಸಗಿ ಶಾಲೆಗಳ ಬಸ್‌ಗಳನ್ನು ಓಡಿಸುತ್ತಿದೆಂದು ಆರೋಪಿಸಿ. ಅವುಗಳ ಪರಿಶೀಲನೆಗೆ ಮನವಿ ಸಲ್ಲಿಸಿದ್ದರು. ಈ ಹಿನ್ನಲೆಯಲ್ಲಿ ಇಂದು ಈ ಪರಿಶೀಲನೆ ನಡೆಸಲಾಯ್ತು.

ಇಂದು ತಪಾಸಣೆ ನಡೆಸಿದ ಬಹುತೇಖ ಬಸ್ ಗಳು ಹೊಸದಾಗಿ ಬಂದವುಗಳಾಗಿದೆ. ನಗರದ ಅನೇಕ ಶಾಲೆಗಳ ಹಳೇ ಬಸ್ ಗಳು ಓಡುತ್ತಿವೆ ಅವುಗಳ ಪರಿಶೀಲನೆ ನಡೆಯಬೇಕಿದೆ. ದೂರು ನೀಡಿದರೆಂದು ತಪಾಸಣೆ ಮಾಡಿದಂತೆ ಕೆಲವನ್ನು ತಪಾಸಣೆ ಮಾಡಿದರೆ ಸಾಲದು ಎಲ್ಲವೂ ಜೊತೆಗೆ ಅನಿರೀಕ್ಷಿತವಾದ ತಪಾಸಣೆ ನಡೆಯಬೇಕಿದೆ. ಇಂದಿನ ತಪಾಸಣೆಯಲ್ಲಿ ಏನಾದರೂ ಲೋಪ ಕಂಡುವಂದಿದೆಯಾ ಎಂಬ ಪ್ರಶ್ನೆಗೆ ಆರ್ ಟಿಓ ನಿಜಾಮುದ್ದೀನ್ ಅವರು ಇನ್ನು ನನ್ನ ಗಮನಕ್ಕೆ ಬಂದಿಲ್ಲ. ಎಲ್ಲಾ ತಪಾಸಣೆ ಮುಗಿಸಿ ವರದಿ ನೀಡಲಿದೆ ಎಂದು ಹೇಳಿದ್ದಾರೆ.

# ರೋಗಿಗಳು ವೈದ್ಯರಿಗೆ ದೇವರು : ಡಾ.ಕಾಮರೆಡ್ಡಿ

**• ಉದಯವಾಹಿನಿ ಕಲಬುರಗಿ :**

ರೋಗಿಗಳು ನಮಗೆ ದೇವರ ರೂಪದಲ್ಲಿ ನೊಡುತ್ತಾರೆ ನಾವು ಕೂಡ ರೋಗಿಗೆ ಚಿಕಿತ್ಸೆ ನೀಡುವಾಗ ದೇವರ ರೂಪದಲ್ಲಿ ನೋಡಬೇಕು ಎಂದು ಕಾಮರಡ್ಡಿ ಆಸ್ಪತ್ರೆಯ ಮುಖ್ಯಸ್ಥ ಕಲಬುರಗಿ ಜಿಲ್ಲೆಯ ಖ್ಯಾತ ವೈದ್ಯರಾದ ಡಾ.ಎಸ್.ಬಿ. ಕಾಮರೆಡ್ಡಿ ಹೇಳಿದರು. ನಗರದ ಕಾಮರಡ್ಡಿ ಆಸ್ಪತ್ರೆಯಲ್ಲಿರುವ ವೈದ್ಯರ ದಿನಾಚರಣೆ ಕಾರ್ಯಕ್ರಮವನ್ನು ರೋಗಿಗಳ ಸಮ್ಮುಖದಲ್ಲಿ ಕೆಕ್ ಕತ್ತರಿಸಿ ಉದ್ಘಾಟಿಸಿ ಮಾತನಾಡಿ ರೋಗಿಗಳೊಂದಿಗೆ ವೈದ್ಯರು ಹೆಚ್ಚು ಹೊತ್ತು ಮಾತನಾಡಿದಷ್ಟು ಆತ್ಮವಿಶ್ವಾಸ ರೋಗಿಗಳಲ್ಲಿ ಬೆಳೆಯುತ್ತದೆ.

ಕಾಯಿಲೆಯ ಬಗ್ಗೆ ವೈದ್ಯರಿಗೂ ಸ್ಪಷ್ಟತೆ ಸಿಗುತ್ತದೆ. ಇದರಿಂದಾಗಿ ಅಗತ್ಯ ಚಿಕಿತ್ಸೆಯನ್ನು ಅತ್ಯಂತ ಪರಿಣಾಮಕಾರಿಯಾಗಿ ನೀಡಲು ಸಹಾಯವಾಗಲಿದೆ. ಹೀಗಾಗಿ, ರೋಗಿಗಳೊಂದಿಗೆ ವೈದ್ಯರು ಸಾಧ್ಯವಾದಷ್ಟು ನಿಖರ, ಮುಕ್ತವಾಗಿ ಸಂವಹನ ನಡೆಸಬೇಕು ಎಂದು ಹೇಳಿದರು.

ಕಾಮರಡ್ಡಿ ಆಸ್ಪತ್ರೆಯ ನಿರ್ದೇಶಕಿ ಡಾ. ಪ್ರತಿಮಾ ಕಾಮರಡ್ಡಿ ಮಾತನಾಡಿ


ಉದಯವಾಹಿನಿ ಚಿತ್ರ

ಇಂದು ಸಾರ್ವಜನಿಕರು ಎಲ್ಲಾ ಬಗೆಯ ಕಾಯಿಲೆ ಹಾಗೂ ವೈದ್ಯಕೀಯ ಚಿಕಿತ್ಸೆಯ ಬಗ್ಗೆ ಹೆಚ್ಚಿನ ಅರಿತಿದ್ದಾರೆ. ಎಲ್ಲವನ್ನೂ ಪ್ರಶ್ನಿಸುವುದು ಹಾಗೂ ತಿಳಿಯಲು ಬಯಸುತ್ತಾರೆ. ಗ್ರಾಮೀಣ ಪ್ರದೇಶದ ಜನರು ತಾವು ಅನುಭವಿಸುತ್ತಿರುವ ಸಂಕಟ ಮಾತ್ರ ತಿಳಿಸಿ, ರೋಗ ನಿರ್ಣಯ ಚಿಕಿತ್ಸೆ ಹೀಗೆ ಎಲ್ಲವೂ ವೈದ್ಯರ ಸೂಚನೆಯಂತೆಯೇ ಪಾಲಿಸಲು ಮುಂದಾಗುತ್ತಾರೆ. ಅವರಿಗೂ ಸಹ ಸಂಪೂರ್ಣ ಮಾಹಿತಿ ನೀಡಿ, ಆತ್ಮವಿಶ್ವಾಸ ಮೂಡಿಸಬೇಕು ಹಾಗೂ ಚಿಕಿತ್ಸೆಯ ಆಯ್ಕೆಗಳನ್ನು ಅವರಿಗೇ ನೀಡಬೇಕು ಎಂದರು. ಈ ಸಂದರ್ಭದಲ್ಲಿ ಡಾ.ನವಿನ ಬಿರಾದರ, ಅನೇಕರು ಉಪಸ್ಥಿತರಿದ್ದರು.

# ತುಂಬಿ ಹರಿಯುತ್ತಿರುವ ನೇತ್ರಾವತಿ-ಕುಮಾರಧಾರ

**• ಉದಯವಾಹಿನಿ ಉಪ್ಪಿನಂಗಡಿ:**

ಮುಂಗಾರು ಆರಂಭದಲ್ಲಿ ಮಳೆ ಕೊರತೆಯಿಂದ ಬತ್ತಿದ್ದದಕ್ಷಿಣ ಕನ್ನಡ ಜಿಲ್ಲೆಯ ಜೀವನಾಡಿಗಳಾದ ನೇತ್ರಾವತಿ ಮತ್ತು ಕುಮಾರಧಾರ ನದಿಗಳಿಗೆ ಕಳೆದ ಎರಡು ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದ ಮತ್ತೆ ಜೀವಕಳೆ ಬಂದಿದೆ. ಉಪ್ಪಿನಂಗಡಿಯ ಶ್ರೀಸಹಸ್ರಲಿಂಗೇಶ್ವರ–ಮಹಾಕಾಳಿ ದೇವಾಲಯದ ಸಮೀಪ ನದಿಯ ಮಧ್ಯದಲ್ಲಿರುವ ಉದ್ಭವಲಿಂಗ ಜಲಾವೃತವಾಗಿದೆ. ಮುಂಗಾರು ಮಳೆಯ ನಿರೀಕ್ಷೆಯಲ್ಲಿ ಜೂನ್ ಆರಂಭದಲ್ಲೇ ನೇತ್ರಾವತಿ ನದಿಗೆ ಅಡ್ಡಲಾಗಿ ನಿರ್ಮಿಸಲಾದ ಬಿಳಿಯೂರು ಕಿಂಡಿ ಅಣೆಕಟ್ಟಿನ ಗೇಟ್‌ಗಳನ್ನು ತೆರೆಯಲಾಗಿತ್ತು. ಇದರಿಂದ ಸಂಗ್ರಹವಾಗಿದ್ದ ಹಿನ್ನೀರು ಹರಿದು ನದಿಯಲ್ಲಿ ಹರಿವು ಕಂಡುಬಂದಿದ್ದರೂ, ಬಳಿಕ ಮಳೆ ಕೈಕೊಟ್ಟ ಪರಿಣಾಮ ನದಿಯ ಬಹುತೇಕ ಭಾಗ ಬರಿದಾಗಿತ್ತು.

ಆ ಸಂದರ್ಭದಲ್ಲಿ ಉದ್ಭವಲಿಂಗ ಭಕ್ತರ ದರ್ಶನಕ್ಕೆ ತೆರೆದುಕೊಂಡಿತ್ತು. ಆದರೆ ಜೂನ್ ತಿಂಗಳ ಕೊನೆಯ ದಿನಗಳಲ್ಲಿ ಸುರಿಯುತ್ತಿರುವ ಮಳೆಯಿಂದ ಉಭಯ ನದಿಗಳಲ್ಲಿ ನೀರಿನ ಮಟ್ಟ ಗಣನೀಯವಾಗಿ ಏರಿಕೆಯಾಗಿ, ನದಿಯ ಮಧ್ಯದಲ್ಲಿರುವ ಉದ್ಭವಲಿಂಗ ಸಂಪೂರ್ಣವಾಗಿ ನೀರಿನಲ್ಲಿ ಮುಳುಗಿದೆ.

ನದಿಗಳಿಗೆ ಮತ್ತೆ ಜೀವಕಳೆ ಬಂದಿರುವುದು ರೈತರು ಮತ್ತು ಸಾರ್ವಜನಿಕರಲ್ಲಿ ಸಂತಸ ಮೂಡಿಸಿದೆ.

# ಮನೆಯೊಳಗಣ ಕಿಚ್ಚು ಮನೆಯ ಸುಟ್ಟಲ್ಲದೆ ನೆರೆಮನೆಯ ಸುಡುವುದೇ?

**• ಉದಯವಾಹಿನಿ ಕೆಂಭಾವಿ:**

ಶ್ರೇಷ್ಠ ಕರ್ಮಗಳಿಂದ ಗುರುದಸೆ ಹಾಗೂ ಶುಕ್ರದೆಸೆ ತಾನಾಗಿಯೇ ಬರುತ್ತದೆ ಹಾಗಾಗಿಯೇ ಜೀವನದಲ್ಲಿ ಒಳ್ಳೆಯ ಕಾರ್ಯಗಳನ್ನು ಮಾಡುವ ಮೂಲಕ ಗುರು ಕೃಪೆಗೆ ಪಾತ್ರರಾಗೋಣ ಎಂದು ಚಿಂಚೋಳಿ ತಾಲ್ಲೂಕಿನ ಐನಾಪುರದ ಮಲ್ಲಿಕಾರ್ಜುನ ಶಾಸ್ತ್ರಿಗಳು ಹೇಳಿದರು.


ಉದಯವಾಹಿನಿ ಚಿತ್ರ

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಶ್ರೀ ಗುರು ಕಾಂತೇಶ್ವರ ಜನ ಕಲ್ಯಾಣ ಸೇವಾ ಪ್ರತಿಷ್ಠಾನದ ವತಿಯಿಂದ ಸೋಮವಾರ ಸಂಜೆ ಹಮ್ಮಿಕೊಂಡಿದ್ದ ಮಾಸಿಕ ಹುಣ್ಣಿಮೆಯ ಶಿವಾನುಭವ ಮತ್ತು ಸಂಗೀತ ಗೋಷ್ಠಿ ಉದ್ಘಾಟಿಸಿ ಮಾತನಾಡಿದ ಅವರು ಜಗದ ಜನರು ಮೆಚ್ಚದಿದ್ದರೇನತ್ತೇ, ಜಗದೊಡೆಯ ಮೆಚ್ಚುವಂತೆ ಬದುಕಿದರೆ ಸಾಕು ಮಾನವ ಜನ್ಮ ಸಾರ್ಥಕವಾಗುತ್ತದೆ. ದ್ವೇಷ, ಅಸೂಯೆ (ಹೊಟ್ಟೆಕಿಚ್ಚು) ಮಾನವನ ಮನಸ್ಸನ್ನು ಕಲುಷಿತಗೊಳಿಸಿ, ನೆಮ್ಮದಿಯನ್ನು ಹಾಳು ಮಾಡುತ್ತವೆ, ಸದ್ಭಕ್ತರು ನಕಾರಾತ್ಮಕ ಭಾವನೆ ಬಿಟ್ಟು, ಸಕಾರಾತ್ಮಕ ವಿಚಾರಗಳಿಗೆ ಆದ್ಯತೆ ನೀಡಿದಾಗ ನಿಜ ಮುಕ್ತಿ ಪ್ರಾಪ್ತಿಯಾಗುತ್ತದೆ ಎಂದವರು 'ಮನೆಯೊಳಗಣ ಕಿಚ್ಚು ಮನೆಯ ಸುಟ್ಟಲ್ಲದೆ ನೆರೆಮನೆಯ ಸುಡುವುದೇ? ನಮ್ಮಲ್ಲಿರುವ ಅಸೂಯೆ ಮತ್ತು ಕೋಪ ಮೊದಲು ನಮ್ಮನ್ನೇ ನಾಶ ಮಾಡುತ್ತದೆ. ಇವುಗಳಿಂದ ಹೊರ ಬಂದಾಗ ಭಗವಂತ ದರ್ಶನ ಭಾಗ್ಯ ಸುಲಭ ಸಾಧ್ಯ ಎಂದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಷ ಬ್ರ ಶ್ರೀ ಚನ್ನಬಸವ ಶಿವಾಚಾರ್ಯರು ಪಂಚೇಂದ್ರಿಯಗಳಿಂದಾದ ಪಾಪ ಕರ್ಮಗಳಿಗೆ ಪ್ರಾಯಶ್ಚಿತ್ತ ಮಾಡಿಕೊಳ್ಳುಲು ಮಾಸಿಕ ಹುಣ್ಣಿಮೆಯ ಸತ್ಸಂಗ ಸಹಕಾರಿಯಾಗಲಿದೆ ಎಂದು ಆಶಿಸಿದರು. ಶರಣಕುಮಾರ ಯಾಳಗಿ ಹಾಗೂ ಯಮನೇಶ ಯಾಳಗಿ ಇವರಿಂದ ಸಂಗೀತ ಕಾರ್ಯಕ್ರಮ ಮೂಡಿ ಬಂತು, ಡಾ ಯಂಕನಗೌಡ ಪಾಟೀಲ್ ನಿರೂಪಿಸಿ ವಂದಿಸಿದರು. ಪತ್ರಕರ್ತ ಇಲಿಯಾಸ್ ಪಟೇಲ್, ಸದ್ಭಕ್ತರಾದ ನಿಜಗುಣಿ ವಿಶ್ವಕರ್ಮ, ಅಭಿಷೇಕ ಪಾಟೀಲ್ ಸೇರಿದಂತೆ ಮಹಿಳೆಯರು ಮತ್ತು ಮಕ್ಕಳು ಉಪಸ್ಥಿತರಿದ್ದರು.

# ದಂಡದ ಪಾವತಿಯಲ್ಲಿ ಶೇ.50 ರಿಯಾಯ್ತಿ ಲಾಭ ಪಡೆಯಲು ಕರೆ

## ದಾಖಲಾದ ಇಲಾಖಾ ಪ್ರಕರಣಗಳ ದಂಡದ ಮೊತ್ತದ ಮೇಲೆ ಶೇ. 50ರಷ್ಟು ವಿನಾಯಿತಿ ನೀಡಲಾಗಿದೆ.

**• ಉದಯವಾಹಿನಿ ಬೀದರ:**

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಪ್ರಾದೇಶಿಕ ಸಾರಿಗೆ ಇಲಾಖೆಯ ವತಿಯಿಂದ ನಗರದ ಪ್ರತಾನನಗರದಲ್ಲಿ ಇರುವ ಪ್ರಾದೇಶಿಕ ಸಾರಿಗೆ ಇಲಾಖೆಯ ಕಚೇರಿಯಲ್ಲಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ನಡೆಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರುಗಳಾದ ರಾಘವೇಂದ್ರ ಉಪಾಧ್ಯೆ ಅವರು ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮವನ್ನು

1 : ನಿಷ್ಕಾಳಜಿ ತೋರುವುದು ಬೇಡ
2 : ರಸ್ತೆ ಮೇಲೆ ಹೋಗುವುದು ಅನಿವರ್ಯ
3 : ದಂಡದ ಮೇಲೆ ವಿನಾಯಿತಿ ಇದೆ

ಉದ್ಘಾಟನೆ ಮಾಡಿದರು.

ಇದೇ ವೇಳೆ ಮಾತನಾಡಿದ ಅವರು, ಸಾರಿಗೆ ಇಲಾಖೆಯಲ್ಲಿ 1991 ಏಪ್ರಿಲ್ 01 ರಿಂದ 2022ರ ಮಾರ್ಚ್ 31ರ ವರೆಗಿನ ಅವಧಿಯಲ್ಲಿ ದಾಖಲಾದ ಇಲಾಖಾ ಪ್ರಕರಣಗಳ ದಂಡದ ಮೊತ್ತದ ಮೇಲೆ ಶೇ. 50ರಷ್ಟು ವಿನಾಯಿತಿ ನೀಡಲಾಗಿದೆ. ಜೂನ ತಿಂಗಳ 21 ರಿಂದ ಜುಲೈ ತಿಂಗಳ 10ನೇ ತಾರಿಕಿನ ಅವಧಿಯಲ್ಲಿ ಭರಿಸಿದರೆ ಮಾತ್ರ ಶೇ.50ರಷ್ಟು ದಂಡ ತುಂಬಬಹುದು. ನಂತರವಾದರೆ ಶೇ. 100 ರಷ್ಟು ದಂಡ ಭರಿಸಬೇಕಾಗುತ್ತದೆ ಎಂದು ಅವರು ತಿಳಿಸಿದರು. ಈ ವಿನಾಯಿತಿ ನೀಡುವುದರಿಂದ ಸರಕಾರಕ್ಕೆ ನಷ್ಟವೇ ಇದೆ.


ಉದಯವಾಹಿನಿ ಚಿತ್ರ

> ತೆರಿಗೆ ಮೇಲೆ ವಿನಾಯಿತಿ ಇಲ್ಲ. ದಂಡದ ಮೇಲೆ ವಿನಾಯಿತಿ ಇದೆ. ಸಾರ್ವಜನಿಕರು ಈ ಕುರಿತು ತಿಳಿದುಕೊಂಡು, ಬಾಕಿ ಉಳಿದಿರುವ ದಂಡವನ್ನು ಭರಿಸಬೇಕು. ರಾಜ್ಯ ಸರಕಾರ ಶೇ. 50ರಷ್ಟು ವಿನಾಯಿತಿ ನೀಡಲಾಗಿದೆ. ಇದರ ಉಪಯೋಗ ಮಾಡಿಕೊಳ್ಳಬೇಕು ಎಂದು ಹೇಳಿದರು.
> –ಸಾರಿಗೆ ಅಧಿಕಾರಿ ಮುಹಮ್ಮದ ಜಾಫರ ಸಾದಿಕ

ಆದರೆ. ಹಲವು ವರ್ಷಗಳಿಂದ ಭರಿಸದೇ ಉಳಿಸಿಕೊಂಡಿರುವ ಹಲವು ಪ್ರಕರಣಗಳಲ್ಲಿನ ದಂಡದ ಮೊತ್ತ ಸಾರ್ವಜನಿಕರಿಗೆ ಭಾರವಾಗದಿರಲಿ ಎಂದು ಸರಕಾರ ಈ ವಿನಾಯಿತಿ ನೀಡಿದೆ.

ಸಾರ್ವಜನಿಕರು ಈ ವಿನಾಯಿತಿಯ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಈ ಕುರಿತು

> ಹೀಗಾಗಿ ರಸ್ತೆ ಸಂಚಾರ ನಿಯಮ ಪಾಲನೆ ಮಾಡಬೇಕು ಗೊತ್ತಿದ್ದೋ, ಗೊತ್ತಿಲ್ಲದೋ ಮಾಡುವ ತಪ್ಪಿಗೆ ಶಿಕ್ಷೆಗಾಗಿ ದಂಡ ಹಾಕುಲಾಗುತ್ತದೆ. ಇದರಿಂದ ಜನತೆ ಪಾಠ ಕಲಿಯಬೇಕು ಎಂಬುದೇ ಉದ್ದೇಶವಾಗಿರುತ್ತದೆ ಎಂದು ಅವರು ತಿಳಿಸಿದರು.
> –ನ್ಯಾಯಾಧೀಶರಾದ ರಾಘವೇಂದ್ರ ಉಪಾಧ್ಯೆ

ಅರಿವು ಮೂಡಿಸಿದ್ದರು ಜನರಿಂದ ಸ್ಪಂದನೆ ಸಿಗುತ್ತಿಲ್ಲ. ಹೀಗಾಗಿ ಇನ್ನು ಮೇಲಾದರೂ ಸಾರ್ವಜನಿಕರು ಗಮನ ಹರಿಸಬೇಕು ಎಂದು ಹೇಳಿದರು. ದಂಡ ಭರಿಸದೇ ಹೋದರೆ ಯಾರೂ ಏನೂ ಮಾಡಲಾರರು ಎಂಬ ಮನೋಭಾವನೆ ಬೇಡ ಹಾಗೂ ಈ ಕುರತು ನಿಷ್ಕಾಳಜಿ ತೋರುವುದು ಬೇಡ ಎಂದು ಸಾರ್ವಜನಿಕರಿಗೆ ಸಲಹೆ ನೀಡಿದ ನ್ಯಾಯಾಧಶಿರು. ಸರಕಾರ ನೀಡಿರುವ ವಿನಾಯಿತಿಯ ಲಾಭ ಪಡೆದುಕೊಳ್ಳುವಂತೆ ಸೂಚಿಸಿದರು.

ಪ್ರತಿಯೊಬ್ಬರೂ ರಸ್ತೆ ಮೇಲೆ ಹೋಗುವುದು ಅನಿವಾರ್ಯ ಆದರೆ ನಿಯಮದೊಂದಿಗೆ ರಸ್ತೆ ಮೇಲೆ ಹೋದಾಗ ನಮ್ಮ ಜೀವಕ್ಕೂ ಮತ್ತು ಮತ್ತೊಬ್ಬರ ಜೀವಕ್ಕೂ ಒಳ್ಳೆಯದಾಗುತ್ತದೆ. ವೇದಿಕೆ ಮೇಲೆ ಮೋಟಾರು ವಾಹನ ನಿರೀಕ್ಷಕರಾದ ಪ್ರಕಾಶ ಎಚ್ ಉಳ್ಳೆ. ರವಿಶಂಕರ ನಾಗಠಾಣಾ. ಮಹೇಶಕುಮಾರ ಮೆಣಸಿನಕಾಯಿ ಇದ್ದರು. ಕಾರ್ಯಕ್ರಮದಲ್ಲಿ ಕಚೇರಿ ಅದಿಕ್ಷಕ ಮಲ್ಲಿಕಾರ್ಜುನ ಎಂ. ಪ್ರೇಮಕುಮಾರ ಎಲಗುರ್ತಿ. ಗುರುಪ್ರಸಾದ ಗುಳೇದಗುಡ್ಡ. ಸುನಿಲ ಬಗಲಿ. ಅನಮುನ ಸೆಕ್ಸೆನಾ. ಸೈಯದ ಕಲಿಮ. ಶ್ರೀಮತಿ ಅಂಬಿಕಾ. ಭಾಗ್ಯವಂತಿ ಮೋಟಾರು ಡ್ರೈವಿಂಗ ಸ್ಕೂಲ್ ಪ್ರಾಚಾರ್ಯ ಶಿವರಾಜ ಜಮಾದಾರ ಸ್ವಾಗತಿಸಿದರು. ನಿರೂಪಿಸಿದರು ಹಾಗೂ ವಂದಿಸಿದರು.

### ಸಂಚಾರ ನಿಯಮಗಳ ಪಾಲನೆ ಮಾಡುವುದು

ಬೈಕ ಸವಾರರು ಹೆಲ್ಮೇಟ ಬಳಸಬೇಕು. ವಾಹನ ಚಾಲಕರು ಸಿಟ್ ಬೆಲ್ಟ್ ಹಾಕಬೇಕು. ಇದರಿಂದ ಜೀವ ಉಳಿಯುತ್ತದೆ. ಸಂಚಾರ ನಿಯಮಗಳ ಪಾಲನೆ ಮಾಡುವುದರಿಂದ ಜೀವಕ್ಕೆ ಆಗುವ ಹಾನಿ ತಪ್ಪುತ್ತದೆ. ಹೀಗಾಗಿ ರಸ್ತೆ ಮೇಲೆ ಬರುವ ಎಲ್ಲರೂ ತಪ್ಪದೇ ಸಂಚಾರ ನಿಯಮವನ್ನು ಪಾಲಸಿ ಎಂದು ಹೇಳಿದರು.